

ಬಾಲಿವುಡ್ ಬೆಡಗಿ ಜಾನ್ವಿ ಕಪೂರ್ ಸದಾ ಬೋಲ್ಡ್ ಅವತಾರದಲ್ಲ ಕಾಣಿಸಿಕೊಳ್ಳುತ್ತಿದ್ದರು. ಈಗ ಬಾಯಿಯಲ್ಲಿ ಚಾಕು ಹಿಡಿದು ರಗಡ್ ಅವತಾರದಲ್ಲಿ ಕಾಣಿಸಿಕೊಂಡಿದ್ದಾರೆ. 'ದೇವರ 2' ಸಿನಿಮಾದಲ್ಲಿನ ನಟಿಯ ಪೋಸ್ಟರ್ ರಿಲೀಸ್ ಮಾಡಿ ಚಿತ್ರತಂಡ ಬಿಗ್ ಅಪ್‌ಡೇಟ್ ಹಂಚಿಕೊಂಡಿದೆ. 'ದೇವರ 2'ನಲ್ಲಿ ಹಳ್ಳಿಯ ಹುಡುಗಿಯ ಲುಕ್‌ನಲ್ಲಿ ಮಿಂಚಿದ್ದಾರೆ.

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

VOLUME: 14 08 MARCH 2025 ಶನಿವಾರ RS: 2 PAGE: 06 ISSUE: 299

CALL 9740160669

# ಭಾರತ ಸಾರಥಿ

BHARATHA SARATHI
KANNADA DAILY NEWS PAPER

RNI KARKAN2011/44806

ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಈ ಬಾರಿಯೂ ಪಂಚ ಗ್ಯಾರಂಟಿಗೆ 51,034 ಕೋಟಿ ರೂ. ಅನುದಾನ ನೀಡಲಾಗಿದೆ. ಹೀಗಾಗಿ ಇನ್ನೂ ಹೆಚ್ಚಿನ ಸಾಲದೊಂದಿಗೆ 4,09,549 ಕೋಟಿ ರೂ. ಮೊತ್ತದ ಆಯವ್ಯಯ ಮಂಡಿಸಿದ್ದಾರೆ. "ಕರ್ನಾಟಕವು ಭಾರತದಲ್ಲಿ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ರಾಜ್ಯಗಳಲ್ಲಿ ಒಂದಾಗಿದೆ, ಇದು ರಾಷ್ಟ್ರೀಯ ಒಟ್ಟು ದೇಶೀಯ ಉತ್ಪನ್ನಕ್ಕೆ ಶೇ. 8.4ರಷ್ಟು ಕೊಡುಗೆ ನೀಡುತ್ತದೆ. ಇದು 2024-25ನೇ ಸಾಲಿನಲ್ಲಿ ತನ್ನ ಪ್ರಭಾವಶಾಲಿ ಬೆಳವಣಿಗೆಯ ಪಥವನ್ನು ಮುಂದುವರೆಸಿದೆ ಮತ್ತು ಶೇ. 7.4 ರಷ್ಟು ಉಖಆಕ ಬೆಳವಣಿಗೆಯ ದರವನ್ನು ಸಾಧಿಸಲು ಸಜ್ಜಾಗಿದೆ. ಇದು ರಾಷ್ಟ್ರೀಯ ಬೆಳವಣಿಗೆಯ ದರ ಶೇ. 6.4 ಕ್ಕಿಂತ ಹೆಚ್ಚಾಗಿದೆ" ಎಂದು ಸಿಎಂ ಒತ್ತಿ ಹೇಳಿದರು.

# ಗ್ಯಾರಂಟಿ-ಅಭಿವೃದ್ಧಿಗೆ ಒತ್ತು ನೀಡಿದ ಸಿಎಂ ಸಿದ್ದು




ಬೆಂಗಳೂರು:ಹಣಕಾಸು ಖಾತೆಯನ್ನೂ ಹೊಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶುಕ್ರವಾರ 2025-26ನೇ ಸಾಲಿನ ಬಜೆಟ್ ಮಂಡಿಸಿದ್ದು, ಗ್ಯಾರಂಟಿ ಯೋಜನೆಗಳಿಗೆ ಬರೋಬ್ಬರಿ 51 ಸಾವಿರ ಕೋಟಿ ರೂ. ನೀಡುವುದರ ಜೊತೆಗೆ ಹತ್ತು ಹಲವು ಹೊಸ ಘೋಷಣೆಗಳನ್ನೂ ಮಾಡಿದ್ದಾರೆ.

ಇಂದು ವಿಧಾನಸಭೆಯಲ್ಲಿ 4,09,549 ಕೋಟಿ ರೂ. ಗಾತ್ರದ ಬಜೆಟ್ ಮಂಡಿಸಿದ ಸಿಎಂ ಸಿದ್ದರಾಮಯ್ಯ ಅವರು ಇದರಲ್ಲಿ 19,262 ಕೋಟಿ ರೂ. ರಾಜಸ್ವ ಕೊರತೆಯನ್ನು ಉಲ್ಲೇಖಿಸಿದ್ದಾರೆ.

1994 ರಲ್ಲಿ ಜನತಾ ದಳದ ಆಡಳಿತದಲ್ಲಿ ಡಿಸಿಎಂ ಆಗಿ ಮೊದಲ ಬಾರಿ ಬಜೆಟ್ ಮಂಡಿಸಿದ್ದ ಸಿದ್ದರಾಮಯ್ಯ ಅವರು ಶುಕ್ರವಾರ ತಮ್ಮ 16ನೇ ಬಜೆಟ್ ಅನ್ನು ಮಂಡಿಸಿದ್ದಾರೆ.

ಒಂದು ರೀತಿಯ ಇತಿಹಾಸವನ್ನು ಸೃಷ್ಟಿಸಿದರು. ಎರಡನೇ ಅವಧಿಗೆ ರಾಜ್ಯದ ಮುಖ್ಯಮಂತ್ರಿಯಾಗಿ ಇದು ಅವರ ಮೂರನೇ ಬಜೆಟ್ ಮತ್ತು ಸತತ ಎರಡನೇ ಆದಾಯ ಕೊರತೆ ಬಜೆಟ್ ಆಗಿದೆ.

ಈ ಬಾರಿಯೂ ಪಂಚ ಗ್ಯಾರಂಟಿಗೆ 51,034 ಕೋಟಿ ರೂ. ಅನುದಾನ ನೀಡಲಾಗಿದೆ. ಹೀಗಾಗಿ ಇನ್ನೂ ಹೆಚ್ಚಿನ ಸಾಲದೊಂದಿಗೆ 4,09,549 ಕೋಟಿ ರೂ. ಮೊತ್ತದ ಆಯವ್ಯಯ ಮಂಡಿಸಿದ್ದಾರೆ.

"ಕರ್ನಾಟಕವು ಭಾರತದಲ್ಲಿ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ರಾಜ್ಯಗಳಲ್ಲಿ ಒಂದಾಗಿದೆ, ಇದು ರಾಷ್ಟ್ರೀಯ ಒಟ್ಟು ದೇಶೀಯ ಉತ್ಪನ್ನಕ್ಕೆ ಶೇ. 8.4ರಷ್ಟು ಕೊಡುಗೆ ನೀಡುತ್ತದೆ. ಇದು 2024-25ನೇ ಸಾಲಿನಲ್ಲಿ ತನ್ನ ಪ್ರಭಾವಶಾಲಿ ಬೆಳವಣಿಗೆಯ ಪಥವನ್ನು ಮುಂದುವರೆಸಿದೆ ಮತ್ತು ಶೇ. 7.4 ರಷ್ಟು ಉಖಆಕ ಬೆಳವಣಿಗೆಯ ದರವನ್ನು ಸಾಧಿಸಲು ಸಜ್ಜಾಗಿದೆ. ಇದು ರಾಷ್ಟ್ರೀಯ ಬೆಳವಣಿಗೆಯ ದರ ಶೇ. 6.4 ಕ್ಕಿಂತ ಹೆಚ್ಚಾಗಿದೆ" ಎಂದು ಸಿಎಂ ಒತ್ತಿ ಹೇಳಿದರು.

ಈ ಯೋಜನೆಯು ಎಲ್ಲಾ 224 ವಿಧಾನಸಭಾ ಕ್ಷೇತ್ರಗಳಲ್ಲಿ ಸಣ್ಣ ನೀರಾವರಿ, ರಸ್ತೆಗಳು ಮತ್ತು ನಗರ ಮೂಲಸೌಕರ್ಯಗಳ ಮೇಲೆ ಕೇಂದ್ರೀಕರಿಸುವ ಮೂಲಕ ರಾಜ್ಯಾದ್ಯಂತ ಸಮತೋಲಿತ ಅಭಿವೃದ್ಧಿಯನ್ನು ಖಚಿತಪಡಿಸುತ್ತದೆ.

ಇನ್ನು ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ವಿವಿಧ ಯೋಜನೆಗಳನ್ನು ಘೋಷಿಸಿದ ಸಿಎಂ, ರಾಜಧಾನಿ ಬೆಂಗಳೂರಿನ ಅಭಿವೃದ್ಧಿಗಾಗಿ ದೇವನಹಳ್ಳಿಯವರೆಗೆ ಮೆಟ್ರೋ ರೈಲು ಯೋಜನೆಯ ವಿಸ್ತರಣೆ ಸೇರಿದಂತೆ ಬಂಪರ್ ಕೊಡುಗೆ ನೀಡಿದ್ದಾರೆ.

ಈ ಬಜೆಟ್ ನಲ್ಲಿ ಶಿಕ್ಷಣ ಇಲಾಖೆಗೆ 45,286 ಕೋಟಿ ರೂಪಾಯಿ ಅನುದಾನ ನೀಡಲಾಗಿದೆ. ಹಾಗೆಯೇ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ 34,955 ಕೋಟಿ, ಇಂಧನ ಇಲಾಖೆಗೆ 26,896 ಕೋಟಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಗೆ 26,735 ಕೋಟಿ, ನೀರಾವರಿ ಇಲಾಖೆಗೆ 22,181 ಕೋಟಿ, ನಗರಾಭಿವೃದ್ಧಿ ಮತ್ತು ವಸತಿ ಇಲಾಖೆಗೆ 21,405 ಕೋಟಿ ಹಾಗೂ ಒಳಾಡಳಿತ ಮತ್ತು ಸಾರಿಗೆ ಇಲಾಖೆಗೆ 20,625 ಕೋಟಿ ಹಣ ಮೀಸಲಿಡಲಾಗಿದೆ.

ಹೀಗೆ ಎಲ್ಲ ಇಲಾಖೆಗಳಿಗೂ ಅನುಕೂಲಕ್ಕೆ ಅನುಗುಣವಾಗಿ ಬಜೆಟ್ ಹಂಚಿಕೆ ಮಾಡಲಾಗಿದೆ. ಹೊಸ ಯೋಜನೆ, ನೂತನ ಘೋಷಣೆಗಳೊಂದಿಗೆ ಸರ್ಕಾರ ಸಮಗ್ರ ರಾಜ್ಯದ ಅಭಿವೃದ್ಧಿಯ ಗುರಿ ಹೊಂದಿದೆ.

> ಈ ಬಜೆಟ್ ನಲ್ಲಿ ಶಿಕ್ಷಣ ಇಲಾಖೆಗೆ 45,286 ಕೋಟಿ ರೂಪಾಯಿ ಅನುದಾನ ನೀಡಲಾಗಿದೆ. ಹಾಗೆಯೇ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ 34,955 ಕೋಟಿ, ಇಂಧನ ಇಲಾಖೆಗೆ 26,896 ಕೋಟಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಗೆ 26,735 ಕೋಟಿ, ನೀರಾವರಿ ಇಲಾಖೆಗೆ 22,181 ಕೋಟಿ, ನಗರಾಭಿವೃದ್ಧಿ ಮತ್ತು ವಸತಿ ಇಲಾಖೆಗೆ 21,405 ಕೋಟಿ ಹಾಗೂ ಒಳಾಡಳಿತ ಮತ್ತು ಸಾರಿಗೆ ಇಲಾಖೆಗೆ 20,625 ಕೋಟಿ ಹಣ ಮೀಸಲಿಡಲಾಗಿದೆ.

## ಕೇಂದ್ರದ ವಿರುದ್ಧ ಸಿದ್ದು ಕಿಡಿ

ಬೆಂಗಳೂರು: ಸಿಎಂ ಸಿದ್ದರಾಮಯ್ಯನವರು ಬಜೆಟ್ ಭಾಷಣದಲ್ಲಿ ಕೇಂದ್ರ ಸರ್ಕಾರದ ವಿರುದ್ಧ ಕಿಡಿಕಾರಿದ್ದಾರೆ.

15ನೇ ಹಣಕಾಸು ಆಯೋಗದ ಶಿಫಾರಸ್ಸಿನ ಅನ್ವಯ ತೆರಿಗೆ ಹಂಚಿಕೆಯಲ್ಲಿ ಅತಿ ಹೆಚ್ಚು ನಷ್ಟವನ್ನು ಅನುಭವಿಸಿದ ರಾಜ್ಯ ಕರ್ನಾಟಕ. 14ನೇ ಹಣಕಾಸು ಆಯೋಗವು ಕರ್ನಾಟಕಕ್ಕೆ ಶಿಫಾರಸ್ಸು ಮಾಡಿದ್ದ ತೆರಿಗೆ ಪಾಲು ಶೇ. 4.713 ರಿಂದ, 15ನೇ ಹಣಕಾಸು ಆಯೋಗದ ಅವಧಿಯಲ್ಲಿ ಶೇ.3.647ಕ್ಕೆ ಇಳಿಕೆಯಾಯಿತು. ಇದರಿಂದಾಗಿ ರಾಜ್ಯದ ತೆರಿಗೆ ಹಂಚಿಕೆಯು ಶೇ.23ರಷ್ಟು ಕುಸಿತವಾಗಿ, ರಾಜ್ಯವು ವಾರ್ಷಿಕ ಅಂದಾಜು 12 ಸಾವಿರ ಕೋಟಿ ರೂ. ನಷ್ಟ ಅನುಭವಿಸಬೇಕಾಯಿತು. ಅಲ್ಲದೇ, 15ನೇ ಹಣಕಾಸು ಆಯೋಗವು ರಾಜ್ಯದ ತೆರಿಗೆ ಪಾಲು ಕಡಿಮೆಯಾದ ಕಾರಣ 5,495 ಕೋಟಿ ರೂ.ಗಳ ವಿಶೇಷ ಅನುದಾನ, ಬೆಂಗಳೂರಿನಲ್ಲಿ ಕೆರೆಗಳ ಸಂರಕ್ಷಣೆಗಾಗಿ 3,000 ಕೋಟಿ ರೂ. ಮತ್ತು ಪೆರಿಫೆರಲ್ ರಿಂಗ್ ರಸ್ತೆ ಅಭಿವೃದ್ಧಿಗೆ 3,000 ಕೋಟಿ ರೂ. ಸೇರಿ ಒಟ್ಟು 11,495 ಕೋಟಿ ರೂ.ಗಳನ್ನು ತನ್ನ ವರದಿಯಲ್ಲಿ ಶಿಫಾರಸ್ಸು ಮಾಡಿತು.

## ಹಲಾಲ್ ಬಜೆಟ್: ಬಿಜೆಪಿ




ಬೆಂಗಳೂರು: ಹಣಕಾಸು ಖಾತೆಯನ್ನೂ ಹೊಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶುಕ್ರವಾರ 2025-26ನೇ ಸಾಲಿನ ಬಜೆಟ್ ಮಂಡಿಸಿದ್ದು, ಈ ಬಜೆಟ್ ಹಲಾಲ್ ಬಜೆಟ್ ಎಂದು ಪ್ರತಿಪಕ್ಷ ಬಿಜೆಪಿ ತೀವ್ರವಾಗಿ ಟೀಕಿಸಿದೆ. ಬಜೆಟ್ ಬಗ್ಗೆ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಬಿಜೆಪಿ, ಕರ್ನಾಟಕ ಬಜೆಟ್ ಅನ್ನು ಇಸ್ಲಾಮೀಕರಣಗೊಳಿಸಿರುವ ಸಿಎಂ ಸಿದ್ದರಾಮಯ್ಯ ಅವರು, ಬಜೆಟ್ ನಲ್ಲಿ ಎಸ್ಸಿ, ಎಸ್ಟಿ, ಒಬಿಸಿ ಸಮುದಾಯಗಳಿಗೆ ನೀವು ಕೊಟ್ಟಿರುವುದು ಕೇವಲ ಚಿಪ್ಪು ಮಾತ್ರ!! ಎಂದು ವಾಗ್ದಾಳಿ ನಡೆಸಿದೆ.

ವಿಧಾನಸಭೆಯಲ್ಲಿ 4,09,549 ಕೋಟಿ ರೂ. ಗಾತ್ರದ ಬಜೆಟ್ ಮಂಡಿಸಿದ ಸಿಎಂ ಸಿದ್ದರಾಮಯ್ಯ ಅವರು, ಗ್ಯಾರಂಟಿ ಯೋಜನೆಗಳಿಗೆ ಬರೋಬ್ಬರಿ 51 ಸಾವಿರ ಕೋಟಿ ರೂ. ನೀಡುವುದರ ಜೊತೆಗೆ ಹತ್ತು ಹಲವು ಹೊಸ ಘೋಷಣೆಗಳನ್ನೂ ಮಾಡಿದ್ದಾರೆ. "ಕಾಂಗ್ರೆಸ್ ಸರ್ಕಾರ ಜನ ವಿರೋಧಿ ಹಾಗೂ ಮುಸ್ಲಿಮರ ಬಜೆಟ್ ಮಂಡಿಸಿದೆ. ಜೊತೆಗೆ ಕರ್ನಾಟಕದ ಇತಿಹಾಸದಲ್ಲೇ ಮೊದಲ ಬಾರಿಗೆ ದಾಖಲೆಯಂತೆ 1.16 ಲಕ್ಷ ಕೋಟಿ ರೂ. ಸಾಲ ಮಾಡಲಾಗಿದೆ ಎಂದರು.

## ಹೆಚ್ಚು ವಿದೇಶಿ ಹೂಡಿಕೆಗೆ ಆದ್ಯತೆ

ಬೆಂಗಳೂರು: ಪ್ರಸಕ್ತ ಸಾಲಿನ ಅಂತ್ಯದ ವೇಳೆಗೆ ರಾಜ್ಯದಲ್ಲಿ 4.4 ಬಿಲಿಯನ್ ಡಾಲರ್ ವಿದೇಶಿ ಹೂಡಿಕೆ ಆಕರ್ಷಿಸುವುದರೊಂದಿಗೆ ದೇಶದಲ್ಲೇ ಮೂರನೇ ಸ್ಥಾನಕ್ಕೆ ಬರುವ ಗುರಿ ಹೊಂದಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಇದಲ್ಲದೇ 88,853 ಮಿಲಿಯನ್ ಡಾಲರ್ ರಫ್ತು ಮಾಡುವುದರೊಂದಿಗೆ ಅಗ್ರ ಸ್ಥಾನಕ್ಕೇರುವ ಗುರಿಯಿದ್ದು, ಹಿಂದಿನ ವರ್ಷಕ್ಕೆ ಹೋಲಿಸಿದರೆ ಶೇ.11.17 ರಷ್ಟು ಬೆಳವಣಿಗೆ ಸಾಧನೆಯಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಕರ್ನಾಟಕ ರಾಜ್ಯ ಕೇಂದ್ರ ಸರ್ಕಾರದ ಸುಗಮ ವ್ಯಾವಹಾರ ವಲಯದಲ್ಲೂ ಅತ್ಯುತ್ತಮ ಸಾಧಕ ಎಂದು ಗುರುತಿಸಲ್ಪಟ್ಟಿದೆ. ಇತ್ತೀಚೆಗೆ ನಡೆದ ವಿಶ್ವ ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ ವಿವಿಧ ಕಂಪನಿಗಳಿಂದ 10.20 ಲಕ್ಷ ಕೋಟಿ ಒಪ್ಪಂದವನ್ನು ಮಾಡಿಕೊಳ್ಳಲಾಗಿದ್ದು, ಇದರಿಂದ 6 ಕ್ಕಿಂತ ಹೆಚ್ಚು ಉದ್ಯೋಗವಕಾಶವನ್ನು ನಿರೀಕ್ಷಿಸಲಾಗಿದೆ ಎಂದು ತಿಳಿಸಿದ್ದಾರೆ.

## ಬೆಂಗಳೂರು ಅಭಿವೃದ್ಧಿಗೆ ಒತ್ತು




ಬೆಂಗಳೂರು: ರಾಜಧಾನಿಯಲ್ಲಿ ಹೆಚ್ಚಳವಾಗು ತ್ತಿರುವ ವಾಹನ ದಟ್ಟಣೆ ನಿಯಂತ್ರಣ ಹಾಗೂ ಸುಗಮ ವಾಹನಗಳ ಸಂಚಾರಕ್ಕಾಗಿ ಮುಖ್ಯರಸ್ತೆಗಳಲ್ಲಿ ಸಿಗ್ನಲ್ ಫ್ರೀ ಮಾಡಲು ಸರ್ಕಾರ ಮುಂದಾಗಿದೆ. ನೆನೆಗುದಿಗೆ ಬಿದ್ದಿದ್ದ ಫೆರಿಫೆರಲ್ ಹೊರವರ್ತುಲ ರಸ್ತೆ ಯೋಜನೆ ಕಾರ್ಯ ಚುರುಕು ಜೊತೆಗೆ ಡಬಲ್ ಡೆಕ್ಕರ್ ರಸ್ತೆ ನಿರ್ಮಾಣಕ್ಕೆ ಆದ್ಯತೆ ನೀಡಿದೆ.

ದಿನೇ ದಿನೆ ವಾಹನಗಳ ಸಂಖ್ಯೆ ಅಧಿಕಗೊಂಡಂತೆ ನಗರದಲ್ಲಿ ವಿಪರೀತ ಟ್ರಾಫಿಕ್ ಜಾಮ್ ಆಗುತ್ತಿದೆ. ಕಿ.ಮೀ. ಗಟ್ಟಲೇ ವಾಹನಗಳು ದಟ್ಟಣೆಯಲ್ಲಿ ಇರಬೇಕಾದ ಅನಿವಾರ್ಯತೆ ಎದುರಾಗಿದೆ. ಹೀಗಾಗಿ ದಟ್ಟಣೆಯನ್ನ ನಿವಾರಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಿಗ್ನಲ್ ರಹಿತ ರಸ್ತೆಗಳನ್ನ ನಿರ್ಮಿಸುವುದಾಗಿ ಬಜೆಟ್‌ನಲ್ಲಿ ಉಲ್ಲೇಖಿಸಿದ್ದಾರೆ.

ನಮ್ಮ ಮೆಟ್ರೊ ಹಂತ-3 ಯೋಜನೆ ಕಾಮಗಾರಿ ಚಾಲ್ತಿಯಲ್ಲಿದೆ. ಈ ಯೋಜನೆಯೊಂದಿಗೆ 8,916 ಕೋಟಿ ವೆಚ್ಚದಲ್ಲಿ 40.50 ಕಿ.ಮೀ. ಉದ್ದದ ಡಬಲ್ ಡೆಕ್ಕರ್ ಫ್ಲೈ ಓವರ್ ರಸ್ತೆ ನಿರ್ಮಿಸಲು ಮುಂದಾಗಿದೆ. ರಾಜಕಾಲುವೆ ಬಫರ್ ಜೋನ್ ಪ್ರದೇಶ ಬಳಸಿಕೊಂಡು 3 ಸಾವಿರ ಕೋಟಿ ವೆಚ್ಚದಲ್ಲಿ 300 ಕಿ.ಮೀ. ಹೆಚ್ಚುವರಿ ರಸ್ತೆ ಜಾಲ ಅಭಿವೃದ್ಧಿ, ಬಿಬಿಎಂಪಿ ವ್ಯಾಪ್ತಿಯಲ್ಲಿರುವ 460 ಕಿ.ಮೀ. ಆರ್ಟಿರಿಯಲ್ ಮತ್ತು ಸಬ್ ಆರ್ಟಿರಿಯಲ್ ರಸ್ತೆ ಜಾಲ ನಿರ್ಮಿಸಲು 660 ಕೋಟಿ ರೂ.

ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುವುದು ಹಾಗೂ 120 ಕಿ.ಮೀ ಉದ್ದ ಮೇಲುಸೇತುವೆ ಹಾಗೂ ಗ್ರೇಡ್ ಸಪರೇಟರ್ ನಿರ್ಮಿಸಲಾಗುವುದು ಎಂದು ಸರ್ಕಾರ ಬಜೆಟ್ ನಲ್ಲಿ ಉಲ್ಲೇಖಿಸಿದೆ. ಮೆಟ್ರೋ ಜಾಲವನ್ನ ದೇವನಹಳ್ಳಿವರೆಗೂ ವಿಸ್ತರಿಸುವುದಾಗಿ ಬಜೆಟ್‌ನಲ್ಲಿ ಸಿದ್ದರಾಮಯ್ಯ ತಿಳಿಸಿದ್ದಾರೆ.



# ಸೂರ್ಯಕಾನ್ ಬೆಂಗಳೂರು 2025ಕ್ಕೆ ಅದ್ದೂರಿ ಚಾಲನೆ

ಬೆಂಗಳೂರು: ಈಕ್ಯೂ ಮ್ಯಾಗಝೀನ್ ಸಂಸ್ಥೆಯು ಬೆಂಗಳೂರಿನ ದಿ ಲಲಿತ್ ಅಶೋಕ್ ಹೋಟೆಲ್ ನಲ್ಲಿ ಆಯೋಜಿಸಿದ್ದ ಬಹುನಿರೀಕ್ಷಿತ ಸೂರ್ಯಕಾನ್ ಬೆಂಗಳೂರು 2025 ಕಾರ್ಯಕ್ರಮವು ಅದ್ದೂರಿಯಾಗಿ ನಡೆದಿದೆ.

ಈ ಕಾರ್ಯಕ್ರಮದಲ್ಲಿ ಕರ್ನಾಟಕದ ಸೌರ ಶಕ್ತಿ ಕ್ಷೇತ್ರದ ಭವಿಷ್ಯವನ್ನು ರೂಪಿಸುವ ನಿಟ್ಟಿನಲ್ಲಿ ಉದ್ಯಮದ ಮುಖಂಡರು, ನೀತಿ ನಿರೂಪಕರು ಮತ್ತು ಸಂಶೋಧಕರು ಮಹತ್ವದ ಸಂವಾದವನ್ನು ನಡೆಸಿದರು.

ಕಾರ್ಯಕ್ರಮದಲ್ಲಿ ಚರ್ಚಾ ಗೋಷ್ಠಿಗಳು, ತಂತ್ರಜ್ಞಾನ ಪ್ರದರ್ಶನಗಳು, ನೆಟ್ ವರ್ಕಿಂಗ್ ಸೆಷನ್ ಗಳು ನಡೆದುವು. ಜೊತೆಗೆ ಪ್ರತಿಷ್ಠಿತ ಕರ್ನಾಟಕ ವಾರ್ಷಿಕ ಸೋಲಾ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಯಿತು.



ಈ ಕಾರ್ಯಕ್ರಮವು 25 ಗಿಗಾ ವ್ಯಾಟ್ ಗಿಂತಲೂ ಹೆಚ್ಚು ಸಾಮರ್ಥ್ಯ ಹೊಂದಿರುವ ಕರ್ನಾಟಕವನ್ನು ಸೌರ ಶಕ್ತಿಯ ಪ್ರಮುಖ ಕೇಂದ್ರವಾಗಿ ಪ್ರಸ್ತುತಪಡಿಸಿತು.

ಉದ್ಯಮದ ದಿಗ್ಗಜರು ಸೌರ ಮಾರುಕಟ್ಟೆ ಟ್ರೆಂಡ್ ಗಳು, ನೀತಿ ನವೀಕರಣಗಳು, ಯೋಜನೆಗಳು ಮತ್ತು ರಾಜ್ಯದ ನಿಯಂತ್ರಣ ಚೌಕಟ್ಟಿನ ಬಗ್ಗೆ ಚರ್ಚೆ ನಡೆಸಿದರು. ಗ್ರಿಡ್ ಕರ್ಟೈಲ್‌ಮೆಂಟ್, ಪಿಪಿಎ ಮರು ಮಾತುಕತೆ, ಮತ್ತು ಓಪನ್ ಆಕ್ಸೆಸ್ ಅವಕಾಶಗಳಂತಹ ವಿಚಾರಗಳ ಕುರಿತು ಸಂವಾದ ನಡೆಯಿತು. ಕರ್ನಾಟಕದ ಸೌರ ಪಾರ್ಕ್ ಗಳು ಮತ್ತು ಕೆ ಆರ್ ಇ ಡಿ ಎಲ್ ನ ಶಕ್ತಿ ಸಂಗ್ರಹ ಯೋಜನೆಗಳ ಕುರಿತೂ ಬೆಳಕು ಚೆಲ್ಲಲಾಯಿತು.

ಗೋಷ್ಠಿಯಲ್ಲಿ ಭಾಗವಹಿಸಿದ ಸಂಪನ್ಮೂಲ ವ್ಯಕ್ತಿಗಳು ಕರ್ನಾಟಕದ ರೂಫ್ ಟಾಪ್ ಸೌರ ವಲಯವನ್ನು ಮುನ್ನಡೆಸಲು ಅವಶ್ಯವಿರುವ ಸ್ಮಾರ್ಟ್ ತಂತ್ರಜ್ಞಾನಗಳು, ಶಕ್ತಿ ಸಂಗ್ರಹ ಮತ್ತು ಗ್ರಿಡ್ ಏಕೀಕರಣದ ಮಹತ್ವವನ್ನು ಚರ್ಚಿಸಿದರು.

ಉದ್ಯಮ ಮಾದರಿಗಳು, ನೀತಿ ಬದಲಾವಣೆಗಳು ಮತ್ತು ಸರ್ಕಾರಿ ಕಟ್ಟಡಗಳಲ್ಲಿ ಸೌರ ಶಕ್ತಿ ಬಳಕೆಯನ್ನು ಹೆಚ್ಚಿಸುವ ರಾಜ್ಯದ ಪ್ರಯತ್ನಗಳ ಕುರಿತು ಮಾತುಕತೆ ನಡೆಯಿತು.

ಉದ್ಯಮ ತಜ್ಞರು ಭಾರತದ ಸೌರ ಉತ್ಪಾದನಾ ಕ್ಷೇತ್ರದ ಕುರಿತು ಮಾತನಾಡುತ್ತಾ ಇಪಿಸಿ ಗುಣಮಟ್ಟ, ಹೊಸ ಸೌರ ತಂತ್ರಜ್ಞಾನಗಳು ಮತ್ತು ಸೌರ ಕಾರ್ಯಾಚರಣೆ ಮತ್ತು ನಿರ್ವಹಣೆಯಲ್ಲಿ ಎಐ, ಎಸ್ ಸಿ ಎ ಡಿ ಎ ಮತ್ತು ಡ್ರೋನ್ ಗಳ ಪಾತ್ರಗಳ ಕುರಿತು ಚರ್ಚೆ ನಡೆಸಿದರು. 'ಮೇಕ್ ಇನ್ ಇಂಡಿಯಾ'

# ನಾಲ್ವರಿಗೆ ಶಿಕ್ಷಾಗ್ರಹ ಪ್ರಶಸ್ತಿ

ಬೆಂಗಳೂರು: ಶಿಬುಲಾಲ್ ಫ್ಯಾಮಿಲಿ ಲೋಕೋಪಕಾರಿ ಉಪಕ್ರಮಗಳು ನೀಡುವ ಶಿಕ್ಷಾಗ್ರಹ ಪ್ರಶಸ್ತಿಗಳು 2025ಕ್ಕೆ ನಾಲ್ಕು ಜನರು ಭಾಗಿಯಾಗಿದ್ದಾರೆ. ತಮ್ಮ ಸಮುದಾಯಗಳಲ್ಲಿ ಶಿಕ್ಷಣವನ್ನು ಪರಿವರ್ತಿಸಿ, ಗುಣಮಟ್ಟದ ಕಲಿಕೆಯನ್ನು ಹೆಚ್ಚು ಅಂತರ್ಗತ ಮತ್ತು ಸಮಾನವಾಗಿಸಿದ ದೂರದೃಷ್ಟಿಯ ನಾಯಕತ್ವವನ್ನು ಹೊಂದಿರುವ ನಾಲ್ಕು ಅಸಾಧಾರಣ ಬದಲಾವಣೆ ಮಾಡಿದವರನ್ನು ಈ ಸಂದರ್ಭದಲ್ಲಿ ಗುರುತಿಸಿ ಗೌರವಿಸಲಾಯಿತು.



ಎಸ್ಎಫ್ಪಿಐ ಆಶ್ರಯದಲ್ಲಿ ಸ್ಥಾಪಿಸಲಾದ ಶಿಕ್ಷಾಲೋಕಂ ಆಯೋಜಿಸಿದ್ದ ಭಾರತದ ಅತಿದೊಡ್ಡ ಶಿಕ್ಷಣ ನಾಯಕತ್ವ ಸಂವಾದವಾದ ಇನ್ವೊಕೆಡ್ 4.0 ನಲ್ಲಿ ಪ್ರಸ್ತುತಪಡಿಸಿದ ಈ ಪ್ರಶಸ್ತಿಗಳು ವಿನೂತನ ಮತ್ತು ಸ್ಥಿತಿಸ್ಥಾಪಕತ್ವದ ಮೂಲಕ ಶಿಕ್ಷಣವನ್ನು ಮರು ವ್ಯಾಖ್ಯಾನಿಸಿದವರನ್ನು ಗುರುತಿಸಿವೆ.

ಬೆಂಗಳೂರಿನ ಪ್ರೆಸ್ಟೀಜ್ ಸೆಂಟರ್ ಫಾರ್ ಪರ್ಫಾರ್ಮಿಂಗ್ ಆರ್ಟ್ಸ್ (ಪಿಸಿಪಿಎ) ನಲ್ಲಿ ಈ ಸಮಾರಂಭವನ್ನು ಆಯೋಜಿಸಲಾಗಿತ್ತು. ತಮ್ಮ ಸಮುದಾಯಗಳಲ್ಲಿ ಶಾಶ್ವತ ಪರಿಣಾಮ ಬೀರುವ ಪ್ರಯತ್ನಗಳನ್ನು ಮುಂದುವರಿಸಲು ಪ್ರತಿ ವಿಜೇತರಿಗೆ 10 ಲಕ್ಷ ರೂಗಳನ್ನು ನೀಡಲಾಯಿತು.

ಕರ್ನಾಟಕದ ಮೈಸೂರು ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಮೇಲ್ವಿಚಾರಕರಾಗಿರುವ ರಜಿತಾ ಎನ್, ಬುಡಕಟ್ಟು ಪ್ರದೇಶಗಳಲ್ಲಿ ಬಾಲ್ಯದ ಶಿಕ್ಷಣವನ್ನು ಸುಧಾರಿಸಲು ತಮ್ಮ ಪ್ರಯತ್ನಗಳನ್ನು ಸಮರ್ಪಿಸಿದ್ದಾರೆ. ಅವರು ಸಾಂಸ್ಕೃತಿಕವಾಗಿ ಸೂಕ್ಷ್ಮ ಕಾರ್ಯತಂತ್ರಗಳು ಮತ್ತು ತಂತ್ರಜ್ಞಾನ-ಚಾಲಿತ ಮಧ್ಯಸ್ಥಿಕೆಗಳ ಮೂಲಕ ಶಾಲಾಪೂರ್ವ ದಾಖಲಾತಿಯನ್ನು ಗಮನಾರ್ಹವಾಗಿ ಹೆಚ್ಚಿಸಿದ್ದಾರೆ.

ಇನ್ನು ಬಿಹಾರದ ಬೇಗುಸರಾಯ್ನ ರಾಜ್ಕಿಯಾ ಮಿಡಲ್ ಸ್ಕೂಲ್ನ ನಾಯಕ ರಂಜನ್ ಕುಮಾರ್ ಸಾಧನೆ ಕೂಡ ತುಂಬಾ ದೊಡ್ಡದು. ಯಾಕೆಂದರೆ ಇವರು ವಿದ್ಯಾರ್ಥಿಗಳಿಲ್ಲದೇ, ಯಾವುದೇ ಸವಲತ್ತುಗಳು ಇಲ್ಲದ ಒಂದು ಸಂಸ್ಥೆಯನ್ನು ಮಾದರಿ ಶಾಲೆಯಾಗಿ ಪರಿವರ್ತಿಸಿ, ವಿದ್ಯಾರ್ಥಿಗಳ ದಾಖಲಾತಿಯನ್ನು 169% ಹೆಚ್ಚಿಸಿದ್ದಾರೆ.ಇನ್ನು ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತಹ ವಿನೂತನ ಕಲಿಕಾ ಪದ್ಧತಿಗಳನ್ನು ಕೂಡ ಜಾರಿಗೊಳಿಸಿದ್ದರು. ಮಲ್ಟಿಮೀಡಿಯಾ ವರ್ಚುವಲ್ ತರಗತಿ ಮತ್ತು ವಿದ್ಯಾರ್ಥಿ-ನಡೆಸುವ ಪ್ರಕಟಣೆಗಳು ಸೇರಿದಂತೆ ಅವರ ನವೀನ ಉಪಕ್ರಮಗಳು ಎಲ್ಲಾ ವಿದ್ಯಾರ್ಥಿಗಳಿಗೆ ರೋಮಾಂಚಕ ಕಲಿಕೆಯ ವಾತಾವರಣವನ್ನು ಒದಗಿಸಿದೆ.

# 'ಬಾಲ್ಯ ವಿವಾಹ ತಡೆಗಟ್ಟಲು ಒಗ್ಗೂಡಿ ಕೆಲಸ ಮಾಡಬೇಕು'

ರಾಮನಗರ: ಪೋಕ್ಸೋ ಪ್ರಕರಣಗಳು ಹಾಗೂ ಬಾಲ್ಯ ವಿವಾಹವನ್ನು ತಡೆಗಟ್ಟಲು ಸರ್ಕಾರದ ಎಲ್ಲಾ ಇಲಾಖೆಗಳು ಹಾಗೂ ಸಮಾಜದ ನಾಗರೀಕರ ಒಗ್ಗೂಡಿ ಕೆಲಸ ಮಾಡಬೇಕು ಎಂದು ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸವಿತಾ ಪಿ. ಆರ್. ಅವರು ಕರೆ ನೀಡಿದರು.

ಅವರು ಮಾ.6ರ ಗುರುವಾರ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಹಯೋಗದೊಂದಿಗೆ ವಿವಿಧ ಇಲಾಖೆಯ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಆಯೋಜಿಸಲಾಗಿದ್ದ ಮಕ್ಕಳ ಹಕ್ಕು ಹಾಗೂ ರಕ್ಷಣೆಗೆ ಸಂಬಂಧಿಸಿದಂತೆ ವಿವಿಧ ಹಂತದ ಸಮಿತಿಗಳ ರಚನೆ ಮತ್ತು ಮಕ್ಕಳ ವಿವಿಧ ಕಾನೂನುಗಳ ಅನುಷ್ಠಾನದಲ್ಲಿ ಅಧಿಕಾರಿಗಳ ಪಾತ್ರ, ಕರ್ತವ್ಯ, ಜವಬ್ದಾರಿ ಹಾಗೂ ಹೊಣೆಗಾರಿಕೆ ಕುರಿತ ಒಂದು ದಿನದ ತರಬೇತಿ ಕಾರ್ಯಗಾರ ಉದ್ಘಾಟಿಸಿ ಮಾತನಾಡಿದರು.

ದುರ್ಬಲ ವರ್ಗದವರು, ಮಕ್ಕಳು ಹಾಗೂ ಮಹಿಳೆಯರ ಮೇಲಾಗುವ ದಬ್ಬಾಳಿಕೆಗಳನ್ನು ತಡೆಗಟ್ಟಲು ಪೋಷಕರು, ಅಧಿಕಾರಿಗಳು, ಸಮಾಜದಲ್ಲಿರುವ ಜವಬ್ದಾರಿಯುತ ನಾಗರೀಕರು ಒಗ್ಗೂಡಿ ಕೆಲಸ ಮಾಡಬೇಕು, ಅದಕ್ಕೆ ಅನುಕೂಲವಾಗುವಂತೆ ವಿವಿಧ ಹಂತದ ಸಮಿತಿಗಳ ರಚನೆ ಮತ್ತು ಮಕ್ಕಳ ವಿವಿಧ ಕಾನೂನುಗಳ ಅನುಷ್ಠಾನದಲ್ಲಿ ಅಧಿಕಾರಿಗಳ ಪಾತ್ರ, ಕರ್ತವ್ಯ, ಜವಬ್ದಾರಿ ಹಾಗೂ ಹೊಣೆಗಾರಿಕೆ ಕುರಿತ ಒಂದು ದಿನದ ತರಬೇತಿಯಲ್ಲಿ ಅಧಿಕಾರಿಗಳು ವಹಿಸಬೇಕಾದ ಪಾತ್ರವನ್ನು ಮನವರಿಕೆ ಮಾಡಿಕೊಡಲಾಗುತ್ತಿದೆ ಎಂದವರು ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ಪದ್ಮರಾಜ್ ಮಾತನಾಡಿ, ಗರ್ಭಿಣಿಯರಿಗೆ ಪೌಷ್ಠಿಕ ಆಹಾರ ನೀಡಬೇಕು, ಅದಕ್ಕೆ ಪೂರಕವಾಗಿ ಅವರಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಸಾಕಷ್ಟು ನೆರವು ನೀಡಲಾಗುತ್ತಿದೆ ಎಂದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಜನಿ ಆರ್., ಜಿಲ್ಲಾ ಕಾರ್ಮಿಕ ಅಧಿಕಾರಿ ನಾಗೇಂದ್ರ ಎಚ್., ಲೀಡ್ ಬ್ಯಾಂಕ್ ಮ್ಯಾನೇಜರ್ ಪ್ರಭುರಾಜ್, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರಾದ ಷಣ್ಮುಗಂ ಸುಂದರಂ, ಬಾಲ ನ್ಯಾಯಾಲಯ ಮಂಡಳಿ ಸದಸ್ಯರಾದ ಕೀರ್ತಿ, ಶಂಕರಪ್ಪ ಸೇರಿದಂತೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಆರೋಗ್ಯ, ಶಿಕ್ಷಣ, ಕಾರ್ಮಿಕ, ಪೊಲೀಸ್ ಇಲಾಖೆಯ ಸಿಬ್ಬಂದಿಗಳಿದ್ದರು.



# ಬೆಂಗಳೂರಿನಲ್ಲಿ ಹೂಡಿಕೆದಾರರ ಸಮಾವೇಶ

ಬೆಂಗಳೂರು: ಫೈನ್ ಏಸರ್ಸ್, ವಾರಾಂತ್ಯದಲ್ಲಿ ಪ್ರತಿಷ್ಠಿತ ರಾಡಿಸನ್ ಬೆಂಗಳೂರು ಸಿಟಿ ಸೆಂಟರ್ ನಲ್ಲಿ ವಿಶೇಷ ಹೂಡಿಕೆದಾರರ ಸಮಾವೇಶವನ್ನು ಆಯೋಜಿಸಿದೆ.

ಈ ಕಾರ್ಯಕ್ರಮವು ಹೂಡಿಕೆದಾರರು ಮತ್ತು ಚಾನೆಲ್ ಪಾಲುದಾರರಿಗೆ ಸಮಾನ ಮನಸ್ಕ ವ್ಯಕ್ತಿಗಳೊಂದಿಗೆ ಸಂಪರ್ಕ ಸಾಧಿಸಲು ಮತ್ತು ಲಾಭದಾಯಕ ಹೂಡಿಕೆ ಅವಕಾಶಗಳನ್ನು ಅನ್ವೇಷಿಸಲು ಸಹಯೋಗದ ವೇದಿಕೆಯನ್ನು ಒದಗಿಸುವ ಗುರಿಯನ್ನು ಹೊಂದಿದೆ. ಗಣನೀಯ ಆದಾಯ ಮತ್ತು ದೀರ್ಘಕಾಲೀನ ಮೌಲ್ಯವನ್ನು ಭರವಸೆ ನೀಡುವ ಉತ್ಪನ್ನಗಳನ್ನು ನೀಡುವ ಮೂಲಕ ಪಾಲುದಾರರು ಮತ್ತು ಹೂಡಿಕೆದಾರರನ್ನು ಸಬಲೀಕರಣಗೊಳಿಸುವುದು ಕಾರ್ಯಕ್ರಮದ ಉದ್ದೇಶವಾಗಿದೆ.

ಈ ಭೇಟಿಯ ಬಗ್ಗೆ ಮಾತನಾಡಿದ ಫೈನ್ ಏಸರ್ಸ್ ನ ಸ್ಥಾಪಕ ಮತ್ತು ವ್ಯವಸ್ಥಾಪಕ ಪಾಲುದಾರ ದಿನೇಶ್ ಯಾದವ್,



"ಉತ್ತರ ಭಾರತದಿಂದ ಪ್ರೋತ್ಸಾಹದಾಯಕ ಪ್ರತಿಕ್ರಿಯೆಯ ನಂತರ ಬೆಂಗಳೂರಿನಲ್ಲಿ ನಡೆಯಲಿರುವ ಈ ಸಭೆಯಿಂದ ದಕ್ಷಿಣ ಭಾರತದಲ್ಲಿ ನಮ್ಮ ಹೆಜ್ಜೆಗುರುತನ್ನು ವಿಸ್ತರಿಸಲು ನಾವು ನೋಡುತ್ತಿದ್ದೇವೆ" ಎಂದು ಹೇಳಿದರು.

ಫೈನ್ ಏಸರ್ಸ್ 55 ಲಕ್ಷ ರೂ. ಗಳಿಂದ ಪ್ರಾರಂಭವಾಗುವ ಹೂಡಿಕೆ ಅವಕಾಶಗಳೊಂದಿಗೆ ಬ್ರಾಂಡೆಡ್ ರೆಸಾರ್ಟ್ ಗಳನ್ನು ನೀಡುವ ಮೂಲಕ ಆತಿಥ್ಯ ಹೂಡಿಕೆ ಭೂದೃಶ್ಯದಲ್ಲಿ ಕ್ರಾಂತಿಯನ್ನುಂಟು ಮಾಡುತ್ತಿದೆ. ಅದರ ನವೀನ ಮಾರಾಟ ಮತ್ತು ಲೀಸ್ಬ್ಯಾಕ್ ಮಾದರಿಯ ಮೂಲಕ, ಹೂಡಿಕೆದಾರರು ಕನಿಷ್ಠ 7% ಖಚಿತ ಆದಾಯದಿಂದ ಪ್ರಯೋಜನ ಪಡೆಯುತ್ತಾರೆ, ಜೊತೆಗೆ ಫೈನ್ ಏಸರ್ಸ್ ಬ್ರಾಂಡ್ ರೆಸಾರ್ಟ್ಗಳಲ್ಲಿ ಕಾಂಪ್ಲಿಮೆಂಟರಿ ವಾಸ್ತವ್ಯಗಳು ಮತ್ತು ಗಮ್ಯಸ್ಥಾನ ವಿವಾಹ ವ್ಯವಸ್ಥೆಗಳಂತಹ ವಿಶೇಷ ಸವಲತ್ತುಗಳನ್ನು ಪಡೆಯುತ್ತಾರೆ.

ಈ ಉಪಕ್ರಮವು ಮುಂದಾಲೋಚನೆಯ ಹೂಡಿಕೆದಾರರು ಮತ್ತು ಪಾಲುದಾರರ ಸಮುದಾಯವನ್ನು ಬೆಳೆಸುವಾಗ ಹೆಚ್ಚಿನ ಮೌಲ್ಯದ ಹೂಡಿಕೆ ಪರಿಹಾರಗಳನ್ನು ತಲುಪಿಸುವ ಫೈನ್ ಏಸರ್ಸ್ನ ಸಮರ್ಪಣೆಯನ್ನು ಒತ್ತಿಹೇಳುತ್ತದೆ

# ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವ

ವಿಶ್ವವಾರಿಧಿ । ಶ್ರೀ ರಂಭಾಪುರಿ ಪೀಠ(ಬಾಳೆಹೊನ್ನೂರು)

ವೀರಶೈವ ಮಹಾಮತ ಸಂಸ್ಥಾಪಕರಾದ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವದ ಅಂಗವಾಗಿ ಮಾರ್ಚ 10ರಿಂದ 14ರ ವರೆಗೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಮತ್ತು ವಿವಿಧ ಗೋಷ್ಠಿಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಾರ್ಚ 10ರಂದು ವೀರಗಾಸೆ-ಪುರವಂತರ ಸಮ್ಮೇಳನವನ್ನು ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯರು ಉದ್ಘಾಟಿಸಲಿದ್ದು ಮುಖ್ಯ ಅತಿಥಿಗಳಾಗಿ ಶಾಸಕರಾದ ಹೆಚ್.ಡಿ.ತಮ್ಮಯ್ಯ, ಜಗದೀಶ



ಗುಡಗುಂಟಿಮಠ, ಮಾಜಿ ಸಂಸದ ಮಂಜುನಾಥ ಕುನ್ನೂರು, ವಾಣಿಜ್ಯ ತೆರಿಗೆ ಅಧಿಕಾರಿ ಭುವನೇಶ್ವರಿ ಪಾಟೀಲ ಆಗಮಿಸುವರು. ಶ್ರೀ ಜಗದ್ಗುರು ರೇಣುಕಾಚಾರ್ಯ ವಿದ್ಯಾ ಸಂಸ್ಥೆ ಅಧ್ಯಕ್ಷ ಯು.ಎಂ.ಬಸವರಾಜ್ ರಂಭಾಪುರಿ ಬೆಳಗು ಮಾಸ ಪತ್ರಿಕೆ ಬಿಡುಗಡೆ ಮಾಡುವರು. ದಿನಾಂಕ 11ರಂದು ಬೆಳಿಗ್ಗೆ 11 ಗಂಟೆಗೆ ನರಸಿಂಹರಾಜಪುರ ತಾಲ್ಲೂಕ ಪತ್ರಕರ್ತರ ಸಂಘದಿಂದ ಕೃಷಿ ಸಮ್ಮೇಳನ ಹಾಗೂ ಕಾಫಿ-ಅಡಿಕೆ ಬೆಳೆಗಾರರ ಹಿತ ಚಿಂತನ ಮಂಥನ ಸಮಾರಂಭ ನಡೆಯಲಿದ್ದು ಶಾಸಕ-ಕರ್ನಾಟಕ ಬಿ.ಜೆಪಿ. ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಶಾಸಕರಾದ ಟಿ.ಡಿ.ರಾಜೇಗೌಡ, ಹೆಚ್.ಡಿ.ರೇವಣ್ಣ, ಮಾಜಿ ಶಾಸಕ ಕೆ.ಎಸ್.ಲಿಂಗೇಶ್, ಎಂ.ಜೆ.ದಿನೇಶ್, ಕಾರ್ಯ ನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಅನಿವಾಸಿ ಭಾರತೀಯ ಸಮಿತಿ ಉಪಾಧ್ಯಕ್ಷೆ ಡಾ.ಆರತಿ ಕೃಷ್ಣ, ಸುಜಾತ ಹೆಚ್. ಎಲ್., ಧರ್ಮರಾಜ ಹೊಂಕ್ರವಲ್ಲಿ, ಹೆಚ್.ಬಿ.ರಾಜಗೋಪಾಲ್, ರವಿಚಂದ್ರ, ಕೊರಟಗೆರೆ ಪ್ರಕಾಶ್ ಪಾಲ್ಗೊಳ್ಳುವರು. ಅಂದು ಸಂಜೆ 6.30 ಗಂಟೆಗೆ ಜರುಗುವ ಕೃಷಿ ಮೇಳ-ಒಂದು ಚಿಂತನ ಮಂಥನ ಸಮಾರಂಭವನ್ನು ಸಣ್ಣ ಕೈಗಾರಿಕೆ ಸಚಿವ ಶರಣಬಸಪ್ಪಗೌಡ ದರ್ಶನಾಪುರ ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಶಾಸಕರಾದ ಹೆಚ್.ಕೆ.ಸುರೇಶ್, ಜೆ.ಟಿ.ಪಾಟೀಲ, ವಿ.ಪ.ಸದಸ್ಯ ಸಿ.ಟಿ.ರವಿ, ಭಾಸ್ಕರ ವೆನಿಲ್ಲಾ, ಎಸ್.ಹೆಚ್.ರಾಜಶೇಖರ್, ಸಿದ್ಧೇಶ ನಾಗೇಂದ್ರ, ಎಂ.ಎಸ್. ಚನ್ನಕೇಶವ, ಹೆಚ್.ಎಂ.ಲೋಕೇಶ್, ಕುಮಾರಿ ಬಿ.ಸಿ.ಗೀತಾ, ಸುನೀಲ ವರ್ಣೇಕರ್, ಟಿ.ಎಂ. ಉಮೇಶ ಕಲ್ಮಕ್ಕಿ, ಬಿ.ಎಸ್. ನಾಗರಾಜಭಟ್ ಭಾಗವಹಿಸುವರು. ರಾಯಚೂರಿನ ಡಾ.ಚನ್ನಬಸವಯ್ಯ ಹಿರೇಮಠ ಇವರು ಡಾ॥ ಮಮತಾ ರಾಣಿ ಅವರ ಸಂಶೋಧಿತ ಕೃತಿ"ಅವಿಭಜಿತ ಬೆಂಗಳೂರು ಜಿಲ್ಲೆಯ ವೀರಭದ್ರ ಆರಾಧನೆ-ಒಂದು ಅಧ್ಯಯನ" ಕೃತಿ ಬಿಡುಗಡೆ ಮಾಡುವರು.

ದಿನಾಂಕ 12ರ ಬೆಳಿಗ್ಗೆ 11 ಗಂಟೆಗೆ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವದ ಅಂಗವಾಗಿ ಶಿವಾದ್ವೈತ ಸಮಾವೇಶ ನಡೆಯಲಿದ್ದು ವಿ.ಆರ್.ಎಲ್. ಸಮೂಹ ಸಂಸ್ಥೆ ಚೇರ್ಮನ್ ಡಾ. ವಿಜಯ ಸಂಕೇಶ್ವರ ಉದ್ಘಾಟಿಸುವರು. ಪ್ರತಿಷ್ಠಿತ ಶ್ರೀ ಜಗದ್ಗುರು ರೇಣುಕಾಚಾರ್ಯ ಪ್ರಶಸ್ತಿಯನ್ನು ರಾಯಚೂರು ಜಿಲ್ಲೆ ಕವಿತಾಳ ಗ್ರಾಮದ ಸಾವಯವ ಕೃಷಿ ತಜ್ಞೆ ಡಾ॥ ಕವಿತಾ ಮಿಶ್ರಾ ಇವರಿಗೆ ಪ್ರದಾನ ಮಾಡಲಾಗುವುದು.

# ಎಂಡೊಮೆಟ್ರಿಯೊಸಿಸ್: ಜಾಗೃತಿ, ಆರಂಭಿಕ ರೋಗನಿರ್ಣಯ ಮತ್ತು ಉತ್ತಮ ಚಿಕಿತ್ಸೆ ಅಗತ್ಯ

ಬರಹ: ಡಾ. ಜ್ಯೋತಿ ಬಂಡಿ

ಫರ್ಟಿಲಿಟಿ ತಜ್ಞೆ ಮತ್ತು ಡಿವೈಯು ಮಹಿಳಾ ಮತ್ತು ಮಕ್ಕಳ ಆರೈಕೆ ವಿಭಾಗದ ನಿರ್ದೇಶಕರು

ಎಂಡೊಮೆಟ್ರಿಯೊಸಿಸ್: ಆರೋಗ್ಯಕ್ಕಿರುವ ಒಂದು ಪ್ರಮುಖ ಸವಾಲು

ಎಂಡೊಮೆಟ್ರಿಯೊಸಿಸ್, ವಿಶ್ವಾದ್ಯಂತ ಲಕ್ಷಾಂತರ ಮಹಿಳೆಯರ ಮೇಲೆ ಪರಿಣಾಮ ಬೀರುವ ಪ್ರಸ್ತುತ, ಆದರೆ ಅನೇಕ ಬಾರಿ ತಪ್ಪಾಗಿ ಅರ್ಥೈಸಿಕೊಳ್ಳುವ ವೈದ್ಯಕೀಯ ಸ್ಥಿತಿ. ಸಂತಾನೋತ್ಪತ್ತಿ ಸಾಮರ್ಥ್ಯ ಮತ್ತು ಒಟ್ಟಾರೆ ಆರೋಗ್ಯದ ಮೇಲೆ ಅದರ ಗಮನಾರ್ಹ ಪರಿಣಾಮದ ಹೊರತಾಗಿಯೂ, ಅರಿವಿನ ಕೊರತೆ ಮತ್ತು ಅದರ ರೋಗಲಕ್ಷಣಗಳ ಬಗ್ಗೆ ತಪ್ಪು ಕಲ್ಪನೆಗಳಿಂದಾಗಿ ಇದನ್ನು ಆಗಾಗ್ಗೆ ಪತ್ತೆಹಚ್ಚಲಾಗುವುದಿಲ್ಲ. ಈ ಲೇಖನದಲ್ಲಿ ಡಾ. ಜ್ಯೋತಿ ಬಂಡಿ, ಎಂಡೊಮೆಟ್ರಿಯೊಸಿಸ್ ಅನ್ನು ಗುರುತಿಸುವ ಪ್ರಾಮುಖ್ಯತೆ, ಅದು ಒಡ್ಡುವ ಸವಾಲುಗಳು-ವಿಶೇಷವಾಗಿ ಬಂಜೆತನಕ್ಕೆ ಸಂಬಂಧಿಸಿದಂತೆ, ಮತ್ತು ಆರಂಭಿಕ ರೋಗನಿರ್ಣಯ ಮತ್ತು ಪರಿಣಾಮಕಾರಿ ಚಿಕಿತ್ಸೆಯ ಅಗತ್ಯದ ಬಗ್ಗೆ ಬೆಳಕು ಚೆಲ್ಲಿದ್ದಾರೆ. ಇದರ ರೋಗಲಕ್ಷಣಗಳು, ಕಾರಣಗಳು ಮತ್ತು ನಿರ್ವಹಣೆಗೆ ಇರುವ ಆಯ್ಕೆಗಳ ಮೇಲೆ ಬೆಳಕು ಚೆಲ್ಲುವ ಮೂಲಕ, ಮಹಿಳೆಯರು ಸಮಯೋಚಿತ ವೈದ್ಯಕೀಯ ಮಧ್ಯಸ್ಥಿಕೆಯನ್ನು ಪಡೆಯಲು ಮತ್ತು ಅವರ ಜೀವನದ ಗುಣಮಟ್ಟವನ್ನು ಸುಧಾರಿಸಿಕೊಳ್ಳಲು ಪ್ರೋತ್ಸಾಹಿಸುವುದು ಇದರ ಉದ್ದೇಶ.

ಎಂಡೊಮೆಟ್ರಿಯೊಸಿಸ್ ಎಂದರೆ ಗರ್ಭಕೋಶ ಎಂದೂ ಕರೆಯಲ್ಪಡುವ ಎಂಡೊಮೆಟ್ರಿಯಮ್ ಅನ್ನು ಆವರಿಸಿರುವ ಅಂಗಾಂಶ, ಸಂತಾನೋತ್ಪತ್ತಿ ವ್ಯವಸ್ಥೆಯ ಇತರ ಅಂಗಗಳಾದ ಫಾಲೋಪಿಯನ್ ಟ್ಯೂಬ್‌ಗಳು, ಅಂಡಾಶಯಗಳು ಅಥವಾ ಸೊಂಟದ ಒಳಪದರದಲ್ಲಿ ಬೆಳೆಯುವ ಸಮಸ್ಯೆಯಾಗಿದೆ. ಮುಟ್ಟಿನ ಸಮಯದಲ್ಲಿ ಗರ್ಭಾಶಯದ ಎಂಡೊಮೆಟ್ರಿಯಲ್ ಅಂಗಾಂಶ ಸ್ವಾಭಾವಿಕವಾಗಿ ಚೆಲ್ಲುತ್ತದೆ, ಆದರೆ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಅಂಗಾಂಶದ ನೈಸರ್ಗಿಕ ನಿರ್ಗಮನಕ್ಕೆ ವ್ಯವಸ್ಥೆ ಇರುವುದಿಲ್ಲ. ಈ ಆಕ್ರಮಣಕಾರಿ ಅಂಗಾಂಶ ಉರಿಯೂತ, ಅಂಟಿಕೊಳ್ಳುವಿಕೆ ಮತ್ತು ಗಾಯದ ಗುರುತಿಗೆ ಕಾರಣವಾಗುತ್ತದೆ.

ಎಂಡೊಮೆಟ್ರಿಯೊಸಿಸ್ನ ಲಕ್ಷಣಗಳೆಂದರೆ:

- ಅನಿಯಮಿತ ಅಥವಾ ಮುಟ್ಟಿನ ಸಮಯದಲ್ಲಿ ಭಾರೀ ರಕ್ತಸ್ರಾವ
- ಮುಟ್ಟಿನ ಸಮಯದಲ್ಲಿ ನೋವು, ಇದನ್ನು ಡಿಸ್ಮೆನೊರಿಯಾ ಎಂದೂ ಕರೆಯಲಾಗುತ್ತದೆ
- ಸಂಭೋಗ ಮಾಡುವಾಗ ನೋವು
- ಅಸಹಜ ಆಯಾಸ
- ಜೀರ್ಣಕ್ರಿಯೆಯ ಸಮಸ್ಯೆಗಳು
- ಗರ್ಭಧರಿಸಲು ಅಸಮರ್ಥತೆ
- ಶ್ರೋಣಿ ಕುಹರ (ಪೆಲ್ವಿಕ್) ದ ಪ್ರದೇಶದಲ್ಲಿ ದೀರ್ಘಕಾಲದ ನೋವು

ಬಂಜೆತನ: ಇದು ಎಂಡೊಮೆಟ್ರಿಯೊಸಿಸ್‌ನಿಂದ ಹೇಗೆ ಉಂಟಾಗುತ್ತದೆ



ಡಾ. ಜ್ಯೋತಿ ಅವರು, ಗರ್ಭಧರಿಸಲು ಪ್ರಯತ್ನಿಸುತ್ತಿರುವ 50% ಮಹಿಳೆಯರಲ್ಲಿ ಬಂಜೆತನಕ್ಕೆ ಕಾರಣವಾಗುವ ಅತ್ಯಂತ ಸಾಮಾನ್ಯ ಸ್ತ್ರೀರೋಗ ಪರಿಸ್ಥಿತಿಗಳ ಬಗ್ಗೆ ಇಲ್ಲಿ ಬೆಳಕು ಚೆಲ್ಲಿದ್ದಾರೆ.

ಎಂಡೊಮೆಟ್ರಿಯೊಸಿಸ್ ಫಲವತ್ತತೆಯ ಮೇಲೆ ಹೇಗೆ ಪರಿಣಾಮ ಬೀರುತ್ತದೆ ಎಂಬುದಕ್ಕೆ ಉತ್ತರ ಇಲ್ಲಿದೆ:

1. ಅಂಡೋತ್ಪತ್ತಿಯಲ್ಲಿ ಅಡಚಣೆ: ಆಕ್ರಮಣಕಾರಿ ಅಂಗಾಂಶದಿಂದ ಉಂಟಾಗುವ ಉರಿಯೂತ ಸಾಮಾನ್ಯ ಅಂಡೋತ್ಪತ್ತಿಗೆ ಅಡ್ಡಿಯಾಗಬಹುದು.
2. ಹಾರ್ಮೋನ್‌ಗಳ ಅಸಮತೋಲನ: ಎಂಡೊಮೆಟ್ರಿಯೊಸಿಸ್ ಹಾರ್ಮೋನ್ ಮಟ್ಟವನ್ನು ಸಹ ಬದಲಾಯಿಸಬಹುದು, ಇದರಿಂದಾಗಿ ಅಂಡಾಣುಗಳನ್ನು ಫರ್ಟಿಲೈಸ್ ಆಗಲು ಕಷ್ಟವಾಗುತ್ತದೆ.
3. ಶ್ರೋಣಿ ಕುಹರ (ಪೆಲ್ವಿಕ್) ದ ಪ್ರದೇಶದ ವಿರೂಪ: ಹೊರಗಿನ ಮತ್ತು ಗಾಯಗೊಂಡ ಅಂಗಾಂಶಗಳು ಫಾಲೋಪಿಯನ್ ಟ್ಯೂಬ್‌ಗಳನ್ನು ವಿರೂಪಗೊಳಿಸಬಹುದು ಅಥವಾ, ವೀರ್ಯ ಅಂಡಾಣುಗಳನ್ನು ತಲುಪುವುದನ್ನು ತಡೆಯಬಹುದು.
4. ಅಂಡಾಣುಗಳ ಕಳಪೆ ಗುಣಮಟ್ಟ: ಎಂಡೊಮೆಟ್ರಿಯೊಸಿಸ್‌ನಿಂದ ಉಂಟಾಗುವ ದೀರ್ಘಕಾಲದ ಉರಿಯೂತ ಅಂಡಾಣುಗಳ ಬೆಳವಣಿಗೆ ಮತ್ತು ಗುಣಮಟ್ಟದ ಮೇಲೆ ಪರಿಣಾಮ ಬೀರಬಹುದು.
5. ದುರ್ಬಲ ಫರ್ಟಿಲೈಸೇಶನ್: ಗರ್ಭಾಶಯದ ಒಳಪದರದಲ್ಲಿನ ಅಡೆತಡೆಗಳು ಅಂಡಾಣುಗಳ ಫರ್ಟಿಲೈಸೇಶನ್‌ಗೆ ಅಡ್ಡಿಯಾಗಬಹುದು.

ರೋಗನಿರ್ಣಯ ಮತ್ತು ಚಿಕಿತ್ಸೆ: ಎಂಡೊಮೆಟ್ರಿಯೊಸಿಸ್ ಅನ್ನು ನಿರ್ವಹಿಸುವುದು

ಈಗಾಗಲೇ ಹೇಳಿದಂತೆ, ಎಂಡೊಮೆಟ್ರಿಯೊಸಿಸ್‌ನ ಸಕಾಲಿಕ ಮತ್ತು ಪರಿಣಾಮಕಾರಿ ನಿರ್ವಹಣೆಗೆ ಮತ್ತು ರೋಗಲಕ್ಷಣಗಳನ್ನು ತಗ್ಗಿಸಲು ಆರಂಭಿಕ ರೋಗನಿರ್ಣಯ ನಿರ್ಣಾಯಕವಾಗಿದೆ. ಮೇಲಿನ ರೋಗಲಕ್ಷಣಗಳನ್ನು ಹೊಂದಿರುವ ಮಹಿಳೆಯರು ಮತ್ತು ಹುಡುಗಿಯರು ತ್ವರಿತ ಶ್ರೋಣಿ ಕುಹರ(ಪೆಲ್ವಿಕ್)ದ ಪರೀಕ್ಷೆಗಳು, ಎಂಆರ್‌ಐ, ಅಥವಾ ಅಲ್ಟ್ರಾಸೌಂಡ್ ಇಮೇಜಿಂಗ್ ಪರೀಕ್ಷೆಗಳು ಅಥವಾ ಇತರ ರೋಗನಿರ್ಣಯ ವಿಧಾನಗಳಿಗೆ ಒಳಗಾಗಬೇಕು. ಎಂಡೊಮೆಟ್ರಿಯಲ್ ಅಂಗಾಂಶದ ಇರುವಿಕೆಯನ್ನು ದೃಢೀಕರಿಸುವಲ್ಲಿ ಲ್ಯಾಪರೊಸ್ಕೋಪಿ ಅತ್ಯಂತ ನಿಖರವಾಗಿದೆ.

ಚಿಕಿತ್ಸೆಯ ಆಯ್ಕೆಗಳು ಅಂಗಾಂಶಗಳ ಬೆಳವಣಿಗೆಯ ವ್ಯಾಪ್ತಿ, ರೋಗಲಕ್ಷಣಗಳ ತೀವ್ರತೆ ಮತ್ತು ಗರ್ಭಧಾರಣೆಯ ಗುರಿಗಳನ್ನು ಅವಲಂಬಿಸಿರುತ್ತದೆ. ಅವುಗಳೆಂದರೆ:

- ಔಷಧಿಗಳು: ಎನ್. ಎಸ್. ಎ. ಐ. ಡಿ. ಎಸ್., ಜಿ. ಎನ್. ಆರ್. ಎಚ್. ಅಗೊನಿಸ್ಟ್ಗಳು ಮತ್ತು ಹಾರ್ಮೋನ್ ಚಿಕಿತ್ಸೆಯಂತಹ ಔಷಧಿಗಳು ನೋವು ನಿವಾರಣೆಗೆ ಸಹಾಯ ಮಾಡುತ್ತವೆ ಮತ್ತು ಹೊಸ ಅಂಗಾಂಶಗಳ ಬೆಳವಣಿಗೆಯನ್ನು ನಿಗ್ರಹಿಸುತ್ತವೆ.
- ಶಸ್ತ್ರಚಿಕಿತ್ಸೆಯ ಮಧ್ಯಸ್ಥಿಕೆ: ಅಂಡಾಣು ಫರ್ಟಿಲೈಸೇಶನ್‌ನ ಸಾಧ್ಯತೆಗಳನ್ನು ಸುಧಾರಿಸಲು ಲ್ಯಾಪರೊಸ್ಕೋಪಿಕ್ ಶಸ್ತ್ರಚಿಕಿತ್ಸೆ ಎಂಡೊಮೆಟ್ರಿಯಲ್ ಅಂಗಾಂಶ ಮತ್ತು ಗಾಯಗಳು ಮತ್ತು ಅಂಟಿಕೊಳ್ಳುವಿಕೆಯನ್ನು ತೆಗೆದುಹಾಕುತ್ತದೆ.
- ಸಹಾಯಕ ಸಂತಾನೋತ್ಪತ್ತಿ ತಂತ್ರಜ್ಞಾನಗಳು: ಚಿಕಿತ್ಸೆಯ ಹೊರತಾಗಿಯೂ ಗರ್ಭಧರಿಸಲು ಸಾಧ್ಯವಾಗದ ಮಹಿಳೆಯರಿಗೆ ಇನ್-ವಿಟ್ರೊ ಫರ್ಟಿಲೈಸೇಶನ್ (ಐವಿಎಫ್) ನಂತಹ ಎಆರ್‌ಟಿ ತಂತ್ರಜ್ಞಾನಗಳನ್ನು ಶಿಫಾರಸು ಮಾಡಲಾಗುತ್ತದೆ.

ಕ್ರಮ ಕೈಗೊಳ್ಳಿ ಮತ್ತು ಸಹಾಯ ಪಡೆಯಿರಿ: ಮೌನವಾಗಿ ದುಃಖಿಸುವುದನ್ನು ನಿಲ್ಲಿಸಿ

ಎಂಡೊಮೆಟ್ರಿಯೊಸಿಸ್ ಕೇವಲ ಮುಟ್ಟಿನ ಅಸ್ವಸ್ಥತೆ ಮತ್ತು ನೋವಿನ ಬಗ್ಗೆ ಅಲ್ಲ. ಇದು ಗಂಭೀರ ಪರಿಣಾಮಗಳನ್ನು ಉಂಟುಮಾಡಬಹುದಾದ ದೈಹಿಕ ಮತ್ತು ವೈದ್ಯಕೀಯ ಸ್ಥಿತಿ. ಮೇಲೆ ತಿಳಿಸಿದ ಯಾವುದೇ ರೋಗಲಕ್ಷಣಗಳನ್ನು ಅನುಭವಿಸುವ ಮಹಿಳೆಯರು ತಕ್ಷಣದ ವೈದ್ಯಕೀಯ ಚಿಕಿತ್ಸೆಯನ್ನು ಪಡೆಯಬೇಕು. ಈ ಮಾರ್ಚ್‌ನಲ್ಲಿ ನಾವು ಗಮನಾರ್ಹ ಜಾಗೃತಿ ಮೂಡಿಸಲು ಸಾಧ್ಯವಾದರೆ ಮತ್ತು ಆರಂಭಿಕ ರೋಗನಿರ್ಣಯ ಮತ್ತು ಸಮಯೋಚಿತ ಚಿಕಿತ್ಸೆಯ ಮಹತ್ವವನ್ನು ಅರ್ಥಮಾಡಿಕೊಳ್ಳಲು ಸಾಧ್ಯವಾದರೆ, ನಾವು ಮಹಿಳೆಯರ ಸಂತಾನೋತ್ಪತ್ತಿ ಆರೋಗ್ಯ ಮತ್ತು ಒಟ್ಟಾರೆ ಜೀವನದ ಗುಣಮಟ್ಟವನ್ನು ಬಹಳವಾಗಿ ಸುಧಾರಿಸಬಹುದು.

ಎಂಡೊಮೆಟ್ರಿಯೊಸಿಸ್ ನಿಮ್ಮ ಫರ್ಟಿಲಿಟಿಯ ಮೇಲೆ ಪರಿಣಾಮ ಬೀರಿದರೆ, ನೀವು ತಕ್ಷಣವೇ ಗರ್ಭಧಾರಣೆ ಮತ್ತು ಗರ್ಭಧಾರಣೆಯ ಪರಿಹಾರಗಳಲ್ಲಿ ಪರಿಣತಿ ಹೊಂದಿರುವ ಫರ್ಟಿಲಿಟಿ ತಜ್ಞರನ್ನು ಸಂಪರ್ಕಿಸಬೇಕು. ಸಕಾಲಿಕ ವೈದ್ಯಕೀಯ ನೆರವು ಎಂಡೊಮೆಟ್ರಿಯಲ್ ಅಂಗಾಂಶದ ಬೆಳವಣಿಗೆಯನ್ನು ತಡೆಯುತ್ತದೆ, ಜೀವನದ ಗುಣಮಟ್ಟವನ್ನು ಹೆಚ್ಚಿಸುತ್ತದೆ ಮತ್ತು ಗರ್ಭಿಣಿಯಾಗುವ ಸಾಧ್ಯತೆಗಳನ್ನು ಗಣನೀಯವಾಗಿ ಹೆಚ್ಚಿಸುತ್ತದೆ.


# ಜಿನಗಲಕುಂಟೆ ಹೊಸ ಹುಡ್ಯಾ ಅರಣ್ಯ ಒತ್ತುವರಿ ವರದಿ ಹೈಕೋರ್ಟ್‌ಗೆ ಸಲ್ಲಿಕೆ

ಬೆಂಗಳೂರು: ಕೋಲಾರ ಜಿಲ್ಲೆ ಶ್ರೀನಿವಾಸಪುರ ತಾಲ್ಲೂಕಿನ ಜಿನಗಲಕುಂಟೆಯ ಹೊಸಹುಡ್ಯದಲ್ಲಿರುವ ಸರ್ವೆ ನಂಬರ್ 1ರಲ್ಲಿನ 10 ಎಕರೆ 34 ಗುಂಟೆ ಹಾಗೂ ಸರ್ವೆ ನಂಬರ್ 2ರಲ್ಲಿನ 53 ಎಕರೆ 30 ಗುಂಟೆ ಜಮೀನಿಗೆ ಸಂಬಂಧಿಸಿದ ಮೇಲ್ಮನವಿಯ ವಿಚಾರಣೆಗೆ ಹಾಜರಾಗುವಂತೆ ವಿಧಾನಸಭಾ ಮಾಜಿ ಸಭಾಧ್ಯಕ್ಷ ಕೆ ಆರ್ ರಮೇಶ್ ಕುಮಾರ್ ಅವರಿಗೆ ಮೇಲ್ಮನವಿ ಪ್ರಾಧಿಕಾರಿಯಾದ ಅರಣ್ಯ ಸಂರಕ್ಷಣಾಧಿಕಾರಿ ನೀಡಿರುವ ನೋಟಿಸ್ ಸಂಬಂಧ ಯಾವುದೇ ಆತುರ ಕ್ರಮಕೈಗೊಳ್ಳಬಾರದು ಮತ್ತು ಪಕ್ಷಕಾರರು ಯಥಾಸ್ಥಿತಿ ಕಾಯ್ದುಕೊಳ್ಳಬೇಕು ಎಂದು ಕರ್ನಾಟಕ ಹೈಕೋರ್ಟ್ ಆದೇಶಿಸಿದೆ.

ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಮೇಲ್ಮನವಿ ಪ್ರಾಧಿಕಾರ ಜಾರಿ ಮಾಡಿರುವ ನೋಟಿಸ್ ವಜಾ ಮಾಡಬೇಕು ಹಾಗೂ ಆಕ್ಷೇಪಾರ್ಹವಾದ ಭೂಮಿಗೆ ಸಂಬಂಧಿಸಿದಂತೆ ನಡೆಸಲಾಗಿರುವ ಮೂರು ಸರ್ವೆ ವರದಿಯ ಕುರಿತು ನಿರ್ಧಾರ ಕೈಗೊಳ್ಳಲು ರಾಜ್ಯ ಸರ್ಕಾರಕ್ಕೆ ನಿರ್ದೇಶಿಸುವಂತೆ ಕೋರಿ ರಮೇಶ್ ಕುಮಾರ್ ಸಲ್ಲಿಸಿರುವ ಅರ್ಜಿಯ ವಿಚಾರಣೆಯನ್ನು ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರ ಏಕಸದಸ್ಯ ಪೀಠ ನಡೆಸಿತು.

ವಾದ–ಪ್ರತಿವಾದ ಆಲಿಸಿದ ಪೀಠವು "ಮುಂದಿನ ವಿಚಾರಣೆವರೆಗೆ ಪ್ರತಿವಾದಿಗಳು ಯಾವುದೇ ಆತುರದ ಕ್ರಮಕೈಗೊಳ್ಳಬಾರದು ಮತ್ತು ಪಕ್ಷಕಾರರು ಯಥಾಸ್ಥಿತಿ ಕಾಯ್ದುಕೊಳ್ಳಬೇಕು" ಎಂದು ನ್ಯಾಯಾಲಯ ಆದೇಶಿಸಿದ್ದು, ವಿಚಾರಣೆಯನ್ನು ಮಾರ್ಚ್ 10ಕ್ಕೆ ಮುಂದೂಡಿದೆ.

ಇದಕ್ಕೂ ಮುನ್ನ, ಅರ್ಜಿದಾರರ ಪರ ವಕೀಲ ಆರ್ ಶ್ರೀನಿವಾಸ್ ಗೌಡ ಅವರು "ಕಂದಾಯ ಭೂಮಿಯಿಂದ ರಮೇಶ್ ಕುಮಾರ್ ಅವರನ್ನು ತೆರವು ಮಾಡಲು ಅರಣ್ಯ ಇಲಾಖೆಯವರು ಪ್ರಯತ್ನಿಸಿದ್ದರು. ಇದನ್ನು ಪ್ರಶ್ನಿಸಿ ಮೇಲ್ಮನವಿ ಪ್ರಾಧಿಕಾರಿಯಾದ ಅರಣ್ಯ ಸಂರಕ್ಷಣಾಧಿಕಾರಿಯ ಮುಂದೆ ಸಲ್ಲಿಸಿದ್ದ ಮೇಲ್ಮನವಿ ಪುರಸ್ಕಾರವಾಗಿತ್ತು. ಆದರೆ, 2014ರಲ್ಲಿ ಮೇಲ್ಮನವಿ ಪ್ರಾಧಿಕಾರಿಯಾದ ಅರಣ್ಯ ಸಂರಕ್ಷಣಾಧಿಕಾರಿಯವರ ಆದೇಶವನ್ನು ಹೈಕೋರ್ಟ್ ಬದಿಗೆ ಸರಿಸಿ, ಸರ್ವೆ ನಡೆಸುವಂತೆ ಸೂಚಿಸಿತ್ತು. ಆನಂತರ ಎರಡು ಸರ್ವೆ ನಡೆಸಿ, ಅದರ ವರದಿಯನ್ನು ಸರ್ಕಾರದ ಮುಂದೆ ಇಡಲಾಗಿದೆ" ಎಂದರು.



ಗುರುವಾರದಂದು ಶ್ರೀ ರಾಘವೆಂದ್ರ ಸ್ವಾಮಿಗಳ 430ನೇ ಜನ್ಮದಿನೋತ್ಸವ ಪ್ರಯುಕ್ತ ಚಾಮರಾಜಪೇಟೆಯ ರಾಘವೇಂದ್ರ ಕಾಲೋನಿಯಲ್ಲಿರುವ ಶ್ರೀ ಪಾದರಾಜ ಮಠದಲ್ಲಿ ಶ್ರೀರಾಘವೇಂದ್ರ ಸ್ವಾಮಿಗಳ ಬೃಂದಾವನಕ್ಕೆ, ಶ್ರೀ ಶ್ರೀನಿವಾಸ ದೇವರಿಗೆ, ಮುಖ್ಯ ಪ್ರಾಣ ದೇವರಿಗೆ ಸೇರಿದಂತೆ ಆಲಯದಲ್ಲಿರುವ ಎಲ್ಲ ದೇವರುಗಳಿಗೆ ವಿಶೇಷ ಅಲಂಕಾರ, ಅಭಿಷೇಕ ಮತ್ತು ಹೋಮ ಹವನಾಧಿಗಳನ್ನು ಕೈಗೊಳ್ಳಲಾಗಿತ್ತು. ಸಾವಿರಾರು ಭಕ್ತರು ದೇವರ ದರ್ಶನ ಪಡೆದು ತೀರ್ಥ ಪ್ರಸಾದ ಸ್ವೀಕರಿಸಿದರು.

# ರಸಪ್ರಶ್ನೆಗೆ ಶಶಾಂಕ್ ಆಯ್ಕೆ



ಮಧುಗಿರಿ: ರಾಷ್ಟ್ರೀಯ ಅವಿಷ್ಕಾರ್ ಅಭಿಯಾನ ಅಡಿಯಲ್ಲಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ರಸಪ್ರಶ್ನೆ ಸ್ಪರ್ಧೆಯಲ್ಲಿ ಶಶಾಂಕ್, GLPS, ಜವನಯ್ಯನಪಾಳ್ಯ, ದೊಡ್ಡೇರಿ ಕ್ಲಸ್ಟರ್, ಮಧುಗಿರಿ ತಾಲೂಕು ಈ ವಿದ್ಯಾರ್ಥಿ ವಿಜೇತನಾಗಿ ವಿಭಾಗ ಮಟ್ಟಕ್ಕೆ ಆಯ್ಕೆಯಾಗಿದ್ದಾನೆ. ವಿದ್ಯಾರ್ಥಿಗೆ ಹಾಗೂ ಮಾರ್ಗದರ್ಶನ ಮಾಡಿದ ಶಾಲಾ ಶಿಕ್ಷಕರಾದ ಲೋಕೇಶ್ ಕೆಟಿ ಹಾಗೂ ಮಹದೇವಮ್ಮ ಅವರಿಗೆ, ಹಾಗೂ ಸಿಆರ್‌ಪಿ. ಗೋಪಾಲಕೃಷ್ಣ ರವರಿಗೆ ಜವನಯ್ಯನಪಾಳ್ಯದ ಹಳೆ ವಿದ್ಯಾರ್ಥಿಗಳು ಹಾಗೂ ಪೋಷಕ ವರ್ಗವು ಅಭಿನಂದನೆಗಳನ್ನು ಸಲ್ಲಿಸಿದೆ.

# ರಾಜಕೀಯ ದ್ವೇಷದಿಂದ ಡಿಸಿಸಿ ಬ್ಯಾಂಕ್ ಚುನಾವಣೆ ವಿಳಂಬ: ದಯಾನಂದ್

ಕೋಲಾರ: ರಾಜಕೀಯ ದ್ವೇಷದಿಂದ ಡಿಸಿಸಿ ಬ್ಯಾಂಕ್ ಚುನಾವಣೆ ವಿಳಂಬವಾಗುತ್ತಿದ್ದು, ಮಹಿಳೆಯರು, ರೈತರು ಬಡ್ಡಿರಹಿತ ಸಾಲದಿಂದ ವಂಚಿತರಾಗುತ್ತಿದ್ದಾರೆ. ಇದರ ಹಿಂದೆ ಕಾಣದ ಕೈಗಳು ಕೆಲಸ ಮಾಡುತ್ತಿದ್ದು, ಮುಂದಿನ ದಿನಗಳಲ್ಲಿ ಜನರೇ ಇದಕ್ಕೆ ಉತ್ತರ ನೀಡಬೇಕು ಎಂದು ತಾಲೂಕಿನ ಕಡಗಟ್ಟೂರು ವಿವಿಧೋದ್ದೇಶ ಪ್ರಾಥಮಿಕ ಕೃಷಿ ಗ್ರಾಮೀಣ ಸಂಘದ ಅಧ್ಯಕ್ಷ ಕೆ.ವಿ. ದಯಾನಂದ್ ಹೇಳಿದರು.

ತಾಲೂಕಿನ ಕಡಗಟ್ಟೂರು ವಿವಿಧೋದ್ದೇಶ ಪ್ರಾಥಮಿಕ ಕೃಷಿ ಗ್ರಾಮೀಣ ಸಂಘದಿಂದ ಗುರುವಾರ ಹಮ್ಮಿಕೊಂಡಿದ್ದ 16 ಮಹಿಳಾ ಸ್ವಸಹಾಯ ಸಂಘಗಳಿಗೆ ತಲಾ 5 ಲಕ್ಷ ರೂ. ನವೀಕೃತ ಸಾಲದ ಚೆಕ್ ವಿತರಿಸಿ ಮಾತನಾಡಿದರು.

ಮಹಿಳಾ ಸದಸ್ಯರು ಪ್ರಾಮಾಣಿಕವಾಗಿ ಮರುಪಾವತಿ ಮಾಡಿರುವ ಹಿನ್ನಲೆ ಸೊಸೈಟಿಯು ಸ್ವಂತ ಬಂಡವಾಳದಿಂದ 80 ಲಕ್ಷ ರೂ. ಸಾಲ ನೀಡಲಾಗುತ್ತಿದೆ ಎಂದರು.

ಕಡಗಟ್ಟೂರು ಸೊಸೈಟಿಯು ರೈತರಿಗೆ, ಮಹಿಳೆಯರಿಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸುವಲ್ಲಿ ಮುಂಚೂಣಿಯಲ್ಲಿ ಕೆಲಸ ಮಾಡುತ್ತಿದೆ. ಇದರ ಬಗ್ಗೆ ನಂಬಿಕೆ ಉಳಿಸಿ ಕೊಂಡಿರುವವರು ಸ್ವಯಂ ಪ್ರೇರಿತರಾಗಿ ಠೇವಣಿ



ಇಟ್ಟಿದ್ದಾರೆ. ಇದರಿಂದ ಸರ್ಕಾರ, ಯಾವುದೇ ಬ್ಯಾಂಕ್ ಮೇಲೆ ಅವಲಂಬನೆಯಾಗಿಲ್ಲ ಎಂದರು.

ಮಹಿಳಾ ಸಂಘಗಳು ಎರಡೂ ಜಿಲ್ಲೆಯಲ್ಲಿ ಸೇರಿ 26,000 ಇದ್ದವು, ನೀಡಲಾಗಿರುವ ಸಾಲ ವಸೂಲಿಯಾಗುತ್ತಿಲ್ಲ, ಇದರಿಂದಾಗಿ ಹೊಸದಾಗಿ ಸಾಲ ನೀಡಲು ತೊಂದರೆಯಾಗುತ್ತಿದೆ. ಇದಕ್ಕೆಲ್ಲ ಬ್ಯಾಂಕಿನ ಕೆಲ ಅಧಿಕಾರಿಗಳು ಹಾಗೂ ಕೆಲ ಸೊಸೈಟಿ ಸಿಬ್ಬಂದಿ ನೇರ ಕಾರಣರಾಗಿದ್ದಾರೆ ಎಂದು ದೂರಿದರು.

ಡಿಸಿಸಿ ಬ್ಯಾಂಕಿನ ಆಡಳಿತ ಮಂಡಳಿ ಅಧಿಕಾರದಲ್ಲಿ ಇದ್ದಾಗ ಶೇ.90ರಷ್ಟು ಸಾಲ ವಸೂಲಿ ಆಗುತ್ತಿತ್ತು, ಆದರೆ ಈಗ ವಸೂಲಿಯು ದಾರಿ ತಪ್ಪಿದೆ, ಇದಕ್ಕೆಲ್ಲ ಅಧಿಕಾರಿಗಳು ಕಾರಣರಾಗಿದ್ದಾರೆ. ಬ್ಯಾಂಕಿನ ಚುನಾವಣೆಯಲ್ಲಿ ಸಕಾಲಕ್ಕೆ ನಡೆಸಿದ್ದರೆ ಈ ಸಮಸ್ಯೆ ಉದ್ಭವಿಸುತ್ತಿರಲಿಲ್ಲ ಎಂದು ತಿಳಿಸಿದರು.

ಚುನಾವಣೆ ನಡೆಸಲು ರಾಜಕೀಯ ದ್ವೇಷ ಅಸೂಯೆ ಕಾರಣವಾಗಿದೆ. ಸೊಸೈಟಿಗಳಲ್ಲಿ ಭ್ರಷ್ಟಾಚಾರ ನಡೆಸಲು ಕಾರಣರಾಗಿರುವವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ ಕ್ರಮಕೈಗೊಂಡರೆ ವ್ಯವಸ್ಥೆಯನ್ನು ಸರಿಪಡಿಸಬಹುದು. ಆದರೆ ರಾಜಕೀಯ ಮೇಲಾಟಗಳಿಗೆ ಬ್ಯಾಂಕ್ ಬಲಿಯಾಗುತ್ತಿದೆ ಎಂದು ಕಿಡಿಕಾರಿದರು.

ಬ್ಯಾಂಕಿನಲ್ಲಿ ತಪ್ಪು ಮಾಡಿ ಸಿಕ್ಕಾಕಿಕೊಂಡು ಅಮಾನತು ಆಗಿರುವ ಅಧಿಕಾರಿಗಳನ್ನು ಅದೇ ಜಾಗದಲ್ಲಿ ಮುಂದುವರೆಸಿರುವುದು ತಪ್ಪು, ಅವರು ಮತ್ತೆ ತಪ್ಪು ಮಾಡುವ ಸಾಧ್ಯತೆ ಇರುತ್ತದೆ. ಅವರನ್ನು ಬೇರೆ ಬೇರೆ ಶಾಖೆಗಳಿಗೆ ವರ್ಗಾವಣೆ ಮಾಡಬೇಕು. ತಪ್ಪು ಮಾಡಿರುವವರಿಗೆ ಪೊಲೀಸ್ ರುಚಿ ತೋರಿಸಬೇಕು ಎಂದರು. ರಾಜ್ಯ ಹಾಗೂ ನಬಾರ್ಡ್ ಬ್ಯಾಂಕಿನಿಂದ ಬರುವ ಇಂಟ್ರಸ್ಟ್ ರಿಸಿವಲ್ ಹೆಡ್ ಇಟ್ಟುಕೊಂಡು ಅಜೆಸ್ಟ್ ಮೆಂಟ್ ಮಾಡಿರುವುದು ಹಗರಣಕ್ಕೆ ಕಾರಣವಾಗಿದೆ ಎಂದರೆ ತಪ್ಪಾಗದು. ಹೆಡ್ ವಹಿವಾಟು ನಡೆಸುವುದನ್ನು ನಿಲ್ಲಿಸಬೇಕು. ಸಿಬ್ಬಂದಿಯ ಪ್ರಾಮಾಣಿಕ ಹಾಗೂ ರೈತರ, ಮಹಿಳೆಯರ ಸಹಕಾರದಿಂದ ಈ ಭಾಗಕ್ಕೆ ಮೈಕ್ರೋ ಫೈನಾನ್ಸ್‌ಗಳು ನುಸುಳಲು ಬಿಟ್ಟಿಲ್ಲ ಎಂದರು. ಕಾರ್ಯಕ್ರಮದಲ್ಲಿ ಸೊಸೈಟಿ ಉಪಾಧ್ಯಕ್ಷ ಮಂಜುನಾಥ್, ನಿರ್ದೇಶಕ ರಮೇಶ್, ಕುರಗಲ್ ನಾರಾಯಣಮ್ಮ, ಸುಳದೇನಹಳ್ಳಿ ನಾರಾಯಣಮ್ಮ, ಮುನಿಕೃಷ್ಣ, ಎಂ.ಡೇವಿಡ್, ಕುಮಾರಚಾರಿ, ಎಂ.ಬೈಯಣ್ಣ, ಎಂ.ವಿ.ಮಂಜುನಾಥ್, ಬಿ.ಎಂ. ರಾಮೇಗೌಡ, ಸಿ.ಡಿ.ರಾಮಚಂದ್ರ, ಸಿಇಒ ಮುನೀಶ್ವರಪ್ಪ, ಸಿಂಧೂ ಉಪಸ್ಥಿತರಿದ್ದರು.

# ವೈದ್ಯಾಧಿಕಾರಿ ಮನೆ ಮೇಲೆ ಲೋಕಾ ದಾಳಿ

ತುಮಕೂರು: ಆದಾಯಕ್ಕಿಂತ ಹೆಚ್ಚು ಅಕ್ರಮವಾಗಿ ಆಸ್ತಿ ಗಳಿಸಿದ್ದಾರೆ ಎಂಬ ಆರೋಪದ ಮೇರೆಗೆ ಬೆಳ್ಳಂಬೆಳಗ್ಗೆ ಇಲ್ಲಿನ ಲೋಕಾಯುಕ್ತ ಪೊಲೀಸರು ಸಿರಾ ತಾಲ್ಲೂಕಿನ ತಾವರೆಕೆರೆ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಜಗದೀಶ್ ಮನೆ ಸೇರಿದಂತೆ ಒಟ್ಟು ಆರು ಕಡೆ ಏಕಕಾಲದಲ್ಲಿ ದಾಳಿ ನಡೆಸಿದರು.

ಸಿರಾ ತಾಲೂಕು ತಾವರೆಕೆರೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವೈದ್ಯರಾಗಿರುವ ಡಾ. ಜಗದೀಶ್ ತುಮಕೂರಿನ ಬಟವಾಡಿ ಬಳಿಯ ಮನೆ, ಸಿರಾ ತಾಲ್ಲೂಕಿನ ಫಾರಂ ಹೌಸ್, ಬರಗೂರಿನಲ್ಲಿರುವ ವಾಣಿಜ್ಯ ಕಟ್ಟಡ ಸೇರಿದಂತೆ ಆರು ಕಡೆ ಲೋಕಾಯುಕ್ತ ಪೊಲೀಸರು ಏಕಕಾಲದಲ್ಲಿ ದಾಳಿ ನಡೆಸಿ ದಾಖಲಾತಿಗಳನ್ನು ಪರಿಶೀಲನೆ ನಡೆಸಿದರು.

ಆದಾಯಕ್ಕಿಂತ ಹೆಚ್ಚಿಗೆ ಆಸ್ತಿ ಗಳಿಸಿದ್ದಾರೆ ಹಾಗೂ ಅಕ್ರಮ ಆಸ್ತಿಗಳಿಕೆ ಆರೋಪದಡಿ ಲೋಕಾಯುಕ್ತ ಅಧಿಕಾರಿಗಳು ಬರಗೂರಿ ನಲ್ಲಿರುವ ವಾಣಿಜ್ಯ ಕಟ್ಟಡ, ತುಮಕೂರಿನ



ಬಟವಾಡಿ ಬಳಿ ಇರುವ ಮನೆ, ಮಂಜುನಾಥ್ ನಗರದಲ್ಲಿರುವ ಕಾಂಪ್ಲೆಕ್ಸ್ ಮೇಲೆ ದಾಳಿ ನಡೆಸಿದ್ದಾರೆ.

ಯಲ್ಪೆನಹಳ್ಳಿ ಗ್ರಾಮದ ವಾಸದ ಮನೆ, ಸಹೋದರ ಕಾಂತರಾಜ್ ಹಾಗೂ ಡಾ. ಜಗದೀಶ್ ಪತ್ನಿ ರೂಪ ಹೆಸರಿನಲ್ಲಿರುವ ಮನೆ ಜಮೀನಿನ ಮೇಲೂ ದಾಳಿ ಮಾಡಿ ದಾಖಲಾತಿಗಳ ಪರಿಶೀಲನೆ ನಡೆಸಿದಾಗ ಸಿರಾ ತಾಲ್ಲೂಕಿನ ಬರಗೂರಿನಲ್ಲಿ ತನ್ನ ತಾಯಿ ಹೆಸರಿನಲ್ಲಿ ಆಸ್ತಿ ಪತ್ತೆಯಾಗಿದೆ ಎಂದು ಹೇಳಲಾಗಿದೆ.

ಬರಗೂರಿನಲ್ಲಿ ಮೂರು ಕಡೆ, ತುಮಕೂರು ಸೇರಿದಂತೆ ಒಟ್ಟು 6 ಕಡೆ ದಾಳಿ ನಡೆಸಿರುವ ಲೋಕಾಯುಕ್ತ ಅಧಿಕಾರಿಗಳಿಗೆ ಮಹತ್ತರವಾದ ದಾಖಲೆಗಳನ್ನು ದೊರೆತಿದ್ದು, ಮತ್ತಷ್ಟು ತಪಾಸಣಾ ಕಾರ್ಯ ನಡೆಸಿದ್ದಾರೆ ಎಂದು ತಿಳಿದು ಬಂದಿದೆ.

ಜಿಲ್ಲಾ ಲೋಕಾಯುಕ್ತ ಎಸ್ಪಿ ಲಕ್ಷ್ಮೀ ನಾರಾಯಣ್ ನೇತೃತ್ವದಲ್ಲಿ ನಡೆದ ದಾಳಿಯಲ್ಲಿ ಡಿವೈಎಸ್ಪಿ ರಾಮಕೃಷ್ಣ ಕೆ.ಜಿ., ಇನ್ಸ್‌ಪೆಕ್ಟರ್‌ಗಳಾದ ಶಿವರುದ್ರಪ್ಪ ಮೇಟಿ, ಸುರೇಶ್, ಸಲೀಂ ಅಹಮದ್ ಮತ್ತು ಸಿಬ್ಬಂದಿಗಳು ಪಾಲ್ಗೊಂಡಿದ್ದು, ದಾಖಲಾತಿಗಳ ಪರಿಶೀಲನೆಯಲ್ಲಿ ತೊಡಗಿದ್ದರು.



ಗುರುವಾರದಂದು ತುಮಕೂರಿನ ಶೆಟ್ಟಿಹಳ್ಳಿ ಗೇಟ್‌ನಲ್ಲಿರುವ ಶ್ರೀ ರಾಘವೇಂದ್ರ ಸ್ವಾಮಿ ಮಠದಲ್ಲಿ ಶ್ರೀ ರಾಘವೇಂದ್ರ ಸ್ವಾಮಿಯವರ ವರ್ಧಂತಿ ಮಹೋತ್ಸವವು ವಿಜೃಂಭಣೆಯಿಂದ ನಡೆಯಿತು.

# ಬ್ರಾಹ್ಮಣ ಸಮುದಾಯ ಏಳಿಗೆಗಾಗಿ ನನ್ನ ಹೋರಾಟ: ರಘುನಾಥ್

ಬೆಂಗಳೂರು: ಶ್ರೀ ಮಲ್ಲಿಕಾರ್ಜುನ ಸ್ವಾಮಿ ಸನ್ನಿಧಿ ಶ್ರೀ ಭ್ರಮರಾಂಬಿಕ ಮಂಗಳ ಸದನದಲ್ಲಿ ರಾಜ್ಯಾದ್ಯಂತ ಇರುವ ನೂರಾರು ವೇದ, ಅಗಮ ಪಂಡಿತರು, ವೈದಿಕರು, ಅರ್ಚಕರಿಂದ ರುದ್ರ ಪಾರಯಣ, ಮತ್ತು ಶ್ರೀ ಗುರುರಾಯರ ವರ್ಧಂತಿ ಕಾರ್ಯಕ್ರಮದ ಪ್ರಯುಕ್ತ ವಿಶೇಷ ಪೂಜೆ ಕಾರ್ಯಕ್ರಮ ನೆರವೇರಿಸಲಾಯಿತು.

ಅಧ್ಯಕ್ಷೀಯ ಅಭ್ಯರ್ಥಿ ಎಸ್.ರಘುನಾಥ್ ಅವರು ಮಾತನಾಡಿ, ಬ್ರಾಹ್ಮಣ ಸಮುದಾಯದ ಹಿರಿಯ ಮುಖಂಡರುಗಳಾದ ಬಿಎನ್‌ವಿ. ಸುಬ್ರಮಣ್ಯಂ ಮತ್ತು ಸಿವಿಎಲ್ ಶಾಸ್ತ್ರೀರವರು ಕುಟುಂಬ ಮತ್ತು ಅವರ ಅನುಯಾಯಿಗಳು ನನಗೆ ಸಂಪೂರ್ಣ ಸಹಕಾರ ನೀಡುತ್ತಿದ್ದಾರೆ. ಬ್ರಾಹ್ಮಣ ಸಮುದಾಯ ಏಳಿಗೆಯಾಗಬೇಕು, ಆರ್ಥಿಕವಾಗಿ ಸಬಲರಾಗಬೇಕು ಮತ್ತು ಮಕ್ಕಳಿಗೆ ಉತ್ತಮ ಶಿಕ್ಷಣ, ಉದ್ಯೋಗ ಸಿಗಬೇಕು. ಬ್ರಾಹ್ಮಣರು ಸಂಘಟಿತರಾಗಬೇಕು ಆಗ ಮಾತ್ರ ಸಾಧ್ಯ.



ಬ್ರಾಹ್ಮಣ ಸಮುದಾಯದ ಶ್ರೇಯೋಭಿವೃದ್ಧಿಗಾಗಿ ನನ್ನ ಹೋರಾಟ ಇದಕ್ಕಾಗಿ ನಾನು ದೃಢ ಸಂಕಲ್ಪ ಮಾಡಿದ್ದೇನೆ.

ಆರ್.ಲಕ್ಷ್ಮಿಕಾಂತ್ ಸಂಘಟನೆಯಿಂದ ಬಲ ಈ ಹಿಂದೆ ನಾನು ಸ್ಪರ್ಧೆ ಮಾಡಿದ್ದೇ ಇಬ್ಬರ ಜಗಳ ಮೂರನೇಯವರಿಗೆ ಲಾಭವಾಯಿತು. ಆದರೆ ನಾನು ಈ ಬಾರಿ ಎಸ್.ರಘುನಾಥ್ ರವರಿಗೆ ಸಹಕಾರ, ಬೆಂಬಲ ನೀಡುತ್ತಿದ್ದೇನೆ.

ರಾಜ್ಯದಲ್ಲಿ 65 ಸಾವಿರಕ್ಕೂ ಹೆಚ್ಚು ಮತದಾರರು ಇದ್ದಾರೆ. ಎರಡು ಬಾರಿ ರಾಜ್ಯ ಪ್ರವಾಸ ಮಾಡಿದ್ದೀವಿ ಉತ್ತಮ ಬೆಂಬಲ ಸಿಗುತ್ತಿದೆ. ಈ ಬಾರಿ ಅಖಿಲ ಕರ್ನಾಟ ಬ್ರಾಹ್ಮಣ ಮಹಾಸಭಾ ಚುನಾವಣೆಯಲ್ಲಿ ಅತ್ಯಧಿಕ ಮತಗಳಿಂದ ಎಸ್.ರಘುನಾಥ್ ರವರು ಜಯಶಾಲಿಯಾಗಲಿದ್ದಾರೆ ಎಂದು ಹೇಳಿದರು.

ಲಕ್ಷ್ಮೀನಾರಾಯಣ ವೇದ ಅಗಮ ಪಾಠಶಾಲೆಯ ಅಚ್ಯುತ್ ಮೂರ್ತಿ, ಬ್ರಾಹ್ಮಣ ಸಮುದಾಯದ ಮುಖಂಡರುಗಳಾದ ರಾಮ್ ಪ್ರಸಾದ್, ಕೆ.ವಿ. ರಾಮಚಂದ್ರ, ನಾಗೇಂದ್ರ ಜೋಯಿಸ್ ಜೆ.ಹೆಚ್. ಅನಿಲ್ ಕುಮಾರ್, ರಾಜಶೇಖರ್, ಮೋಹನ್, ನಾಗೇಂದ್ರ, ರವಿಶಂಕರ್, ರಥಯಾತ್ರೆ ಸುರೇಶ್ ಭಾಗವಹಿಸಿದ್ದರು.

## *ಉಪಸ್ಥಾವರ ವಿದ್ಯುದ್ದೀಕರಣ: ಸಾರ್ವಜನಿಕರಿಗೆ ಎಚ್ಚರಿಕೆ*

ತುಮಕೂರು: ಕರ್ನಾಟಕ ವಿದ್ಯುತ್ ಪ್ರಸರಣ ನಿಗಮವು ಜಿಲ್ಲೆಯ ಗುಬ್ಬಿ ತಾಲ್ಲೂಕು ಕಸಬ ಹೋಬಳಿ ಜಿ.ಹೊಸಹಳ್ಳಿ ಗ್ರಾಮದ ಬಳಿ ನೂತನವಾಗಿ ನಿರ್ಮಾಣ ಮಾಡುವ 110/11ಕೆವಿ ಉಪಸ್ಥಾವರಕ್ಕೆ ಇದೇ 7 ಅಥವಾ ತದನಂತರ ಹಾಲಿ ಇರುವ 110ಕೆವಿ ನಿಟ್ಟೂರು–ಕೆ.ಜಿ.ಟೆಂಪಲ್ ಏಕಮುಖ ವಿದ್ಯುತ್ ಮಾರ್ಗದಿಂದ 5.771 ಕಿಮೀ ಉದ್ದದ ದ್ವಿಮುಖ ಗೋಪುರಗಳ ಮೇಲೆ ಲಿಲೋ ವಿದ್ಯುತ್ ಮಾರ್ಗವನ್ನು ವಿದ್ಯುದ್ದೀಕರಣಗೊಳಿಸಲಾಗುವುದು.

ಸಾರ್ವಜನಿಕರು ಈ ಉಪಸ್ಥಾವರದ ಗೋಪುರವನ್ನು ಹತ್ತುವುದು, ಲೋಹದ ತಂತಿ, ಹಸಿರು ಬಳ್ಳಿ, ಕೊಂಬೆ, ಮತ್ತಿತರ ವಸ್ತುಗಳನ್ನು ಪ್ರಸರಣ ಮಾರ್ಗಕ್ಕೆ ಎಸೆಯುವುದು, ದನ–ಕರು ಮತ್ತಿತರ ಜಾನುವಾರುಗಳನ್ನು ವಿದ್ಯುತ್ ಗೋಪುರಕ್ಕೆ ಕಟ್ಟುವುದನ್ನು ನಿರ್ಬಂಧಿಸಲಾಗಿದೆ. ಒಂದು ವೇಳೆ ನಿರ್ಬಂಧಿತ ಚಟುವಟಿಕೆಗಳನ್ನು ನಡೆಸಿ ವಿದ್ಯುತ್ ಅಪಘಾತ ಸಂಭವಿಸಿದಲ್ಲಿ ನಿಗಮವು ಯಾವುದೇ ರೀತಿಯಲ್ಲಿ ಜವಾಬ್ದಾರಿಯಾಗಿರುವುದಿಲ್ಲವೆಂದು ಸ್ಪಷ್ಟಪಡಿಸಲಾಗಿದೆ.

ಈ ಪ್ರಸರಣ ಮಾರ್ಗವು ಜಿಲ್ಲೆಯ ಗುಬ್ಬಿ ತಾಲ್ಲೂಕು ಕಸಬಾ ಹೋಬಳಿ ಸುರಿಗೇನಹಳ್ಳಿ ಕಾವಲ್, ಕೊನೆಮಾದೇನಹಳ್ಳಿ, ಕಟ್ಟಿಗೇನಹಳ್ಳಿ ಮತ್ತು ಜಿ. ಹೊಸಹಳ್ಳಿ ಗ್ರಾಮಗಳ ಸರಹದ್ದಿನಲ್ಲಿ ಹಾದುಹೋಗಿದೆ ಎಂದು ನಿಗಮದ ಕಾರ್ಯನಿರ್ವಾಹಕ ಇ ಂ ಜಿ ನಿ ೦ ು ್ ು ರ್ ( ವಿ ) ತಿಳಿಸಿದ್ದಾರೆ.




ಗುರುವಾರದಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆದ ಮಾಜಿ ಸಚಿವ, ಶಾಸಕ ಎಸ್.ಟಿ. ಸೋಮಶೇಖರ್ ಅವರ ಪುತ್ರ ನಿಶಾಂತ್ ಹಾಗೂ ರುಹಿಕಾ ಅವರ ವಿವಾಹ ಕಾರ್ಯಕ್ರಮದಲ್ಲಿ ಡಿಸಿಎಂ ಡಿ.ಕೆ.ಶಿವಕುಮಾರ್ ಪಾಲ್ಗೊಂಡು, ನೂತನ ದಂಪತಿಗೆ ಶುಭ ಹಾರೈಸಿದರು.

# ದಾನಿಗಳಿಂದ ಪಡೆದ ನಗದು ಲೆಕ್ಕ ಬುಕ್ಕಿಲ್ಲ: ಬೋಜರಾಜ್

ರಾಮನಗರ: ನಗರದ ಶ್ರೀ ಅರ್ಕೇಶ್ವರಸ್ವಾಮಿ ಪುರಾತನ ದೇವಾಲಯದ ಜೀರ್ಣೋದ್ಧಾರ ಹೆಸರಿನಲ್ಲಿ ಸೇವಾ ಸಮಿತಿ ಪದಾಧಿಕಾರಿಗಳು ದಾನಿಗಳಿಂದ ವಸೂಲು ಮಾಡಿರುವ ಕೋಟ್ಯಾಂತರ ರೂ. ಹಣ ದುರುಪಯೋಗವಾಗಿರುವ ಶಂಕೆಯಿದೆ. ಈ ಬಗ್ಗೆ ಸಮಗ್ರ ತನಿಖೆಗೆ ಒತ್ತಾಯಿಸಿ ಜಿಲ್ಲಾಧಿಕಾರಿಗಳು ಹಾಗೂ ತಾಲ್ಲೂಕು ತಹಸೀಲ್ದಾರ್‌ರವರಿಗೆ ದೂರು ನೀಡಲಾಗುವುದು ಎಂದು ಸಮಾಜ ಸೇವಕ ಬೋಜರಾಜ್ ತಿಳಿಸಿದರು.

ನಗರದ ಅರ್ಕೇಶ್ವರಸ್ವಾಮಿ ದೇವಾಲಯದ ಆವರಣದಲ್ಲಿ ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿ, ನೂತನ ದೇವಾಲಯ ನಿರ್ಮಿಸಲು ಸೇವಾ ಸಮಿತಿಯವರು ಬ್ಯಾಂಕಿನಲ್ಲಿ ಎರಡು ಖಾತೆ ತೆರೆದು ವ್ಯವಹರಿಸಿದ್ದಾರೆ. ತೆರಿಗೆ ವಿನಾಯಿತಿ ಪಡೆಯಲು ದೇವಾಲಯದ ಹೆಸರಿನಲ್ಲಿ ಚಾಲ್ತಿ ಖಾತೆ(ಕರೆಂಟ್ ಅಕೌಂಟ್) ತೆರೆದಿದ್ದು ಮತ್ತೊಂದು ಉಳಿತಾಯ ಖಾತೆ ಬ್ಯಾಂಕ್ ಹೆಸರಿನಲ್ಲಿ ಉಳಿಸಿಕೊಂಡಿರುವುದು ಸಾಕಷ್ಟು ಅನುಮಾನಕ್ಕೆ ಕಾರಣವಾಗಿದೆ. ಹಾಗಾಗಿ ಎರಡು ಖಾತೆಗಳಲ್ಲಿ ಭಕ್ತರು ದಾನ ನೀಡಿರುವ ಹಣಕಾಸಿನ ವಿವರ ಹಾಗೂ ಈವರೆಗಿನ ಖರ್ಚು ವೆಚ್ಚದ ವಿವರ ನೀಡಬೇಕೆಂದು ಆಗ್ರಹಿಸಿದರು.

ಅರ್ಕೇಶ್ವರಸ್ವಾಮಿ ದೇವಾಲಯ ನಿರ್ಮಾಣಕ್ಕೆ 21 ಅಡಿಯಷ್ಟು ಆಳದ ತಳಪಾಯ ಹಾಕಲಾಗಿದೆ. ಇದಕ್ಕೆ 600 ಟ್ರಾಕ್ಟರ್ ಕಲ್ಲು ಬಳಕೆ ಮಾಡಲಾಗಿದೆ ಎಂದು ಸೇವಾ ಸಮಿತಿ ಪದಾಧಿಕಾರಿಗಳು ಸುಳ್ಳು ಹೇಳಿದ್ದಾರೆ. ಆದರೆ ವಾಸ್ತವದಲ್ಲಿ 11 ಅಡಿ ಮಾತ್ರ ತಳಪಾಯ ಹಾಕಲಾಗಿದೆ. ದಾನದ ರೂಪದಲ್ಲಿ ಸಿಮೆಂಟ್ ಮತ್ತಿತರ ಸಾಮಾಗ್ರಿಗಳನ್ನು ನೀಡಿರುವ ದಾನಿಗಳ ಹೆಸರು ಹೇಳುತ್ತಿಲ್ಲ. ಎಷ್ಟು ಹಣ



ವಸೂಲಾಗಿದೆ ಎಂಬ ಬಗ್ಗೆ ನಿಖರ ಮಾಹಿತಿಯಿಲ್ಲ. ದೇವಾಲಯ ನಿರ್ಮಾಣದ ಹೆಸರಿನಲ್ಲಿ ನಡೆದಿರುವ ಅಕ್ರಮದ ಸತ್ಯಾಸತ್ಯತೆ ಹೊರತರಲು ಜಿಲ್ಲಾಧಿಕಾರಿಗಳಿಗೆ ದೂರು ನೀಡಲಾಗುತ್ತಿದೆ ಎಂದರು.

ಪಕ್ಕದಲ್ಲಿ ಶ್ರೀಶನೈಶ್ವರಸ್ವಾಮಿ ದೇವಾಲಯ ನಿರ್ಮಾಣ ಕಾಮಗಾರಿ ನಡೆಯುತ್ತಿದ್ದು ಭಕ್ತರು ಹಾಗೂ ದಾನಿಗಳು ನೀಡಿರುವ ನಗದು ಹಾಗೂ ಕಟ್ಟಡ ಸಾಮಾಗ್ರಿಗಳ ಬಗ್ಗೆ ಮಾಹಿತಿಯನ್ನು ಬೋರ್ಡ್ ಹಾಕಿ ಪ್ರಕಟಿಸಿದ್ದಾರೆ. ಆದರೆ, ಅರ್ಕೇಶ್ವರಸ್ವಾಮಿ ದೇವಾಲಯ ಸೇವಾ ಸಮಿತಿಯವರು ಈ ರೀತಿಯ ವ್ಯವಸ್ಥೆ ಏಕೆ ಮಾಡಿಲ್ಲ ಎಂದು ಪ್ರಶ್ನಿಸಿದರು. ಕೆಲವು ಜನಪ್ರತಿನಿಧಿಗಳು ತಮ್ಮ ಪ್ರದೇಶಾಭಿವೃದ್ಧಿ ಅನುದಾನದಡಿ ಜಿಲ್ಲಾಧಿಕಾರಿಗಳ ಖಾತೆಗೆ ನೀಡಿರುವ ದೇಣಿಗೆ ಹಣದ ಬಗ್ಗೆ ಮಾತ್ರ ಮಾಹಿತಿ ಹೇಳುತ್ತಿದ್ದಾರೆ ವಿನಹ ಹೊರಗಿನಿಂದ ದಾನಿಗಳು ನೀಡಿರುವ ಹಣವೆಷ್ಟು ಜನರಿಗೆ ತಿಳಿಸಬೇಕೆಂದು ಬೋಜರಾಜ್ ಸವಾಲು ಹಾಕಿದರು.

2021ರಲ್ಲಿ ಅರ್ಕೇಶ್ವರಸ್ವಾಮಿ ಪುರಾತನ ದೇವಾಲಯವನ್ನು ಕೆಡವಲು ಸೇವಾ ಸಮಿತಿಯವರು ನಿಶ್ಚಯಿಸಿದ್ದರು. ಮಹಾಶಿವರಾತ್ರಿ ಹಬ್ಬದ ನಂತರ ನಿರ್ಮಾಣ ಕಾರ್ಯ ಮಾಡಿ, ಪುರಾತನ ದೇವಾಲಯ ಕಡವುದಕ್ಕೂ ಮುನ್ನ ಆನೆ ಕರೆಯಿಸಿ ಉತ್ಸವ ಮಾಡುವುದಾಗಿ ಮನವಿ ಮಾಡಿದ್ದೆ ಇದಕ್ಕೆ ಸಮಿತಿಯವರು ಒಪ್ಪಿದ್ದರು. ಹಾಗಾಗಿ ನಾನು ಮೊದಲ ಬಾರಿಗೆ ಆನೆಯನ್ನು ಕರೆಯಿಸಿ ಉತ್ಸವ ಆಚರಿಸಿದ್ದೆ. ಇದಾದ 3 ತಿಂಗಳ ನಂತರ ಅರ್ಕೇಶ್ವರಸ್ವಾಮಿ ಪುರಾತನ ದೇವಾಲಯವನ್ನು 2021ರಲ್ಲಿ ಕೆಡವಿದರು. ಆದರೆ 2022ರಲ್ಲಿ ಕಡವಲಾಗಿದೆ ಎಂದು ಸುಳ್ಳು ಹೇಳಿಕೆ ನೀಡಿದ್ದಾರೆಂದು ಆಪಾದಿಸಿದರು.

ಅರ್ಕೇಶ್ವರಸ್ವಾಮಿ ದೇವಾಲಯದ ಜತೆಗೆ ಶ್ರೀ ಪ್ರಸನ್ನಾಂಭಿಕೆ, ವಿಘ್ನೇಶ್ವರ, ಸುಬ್ರಹ್ಮಣ್ಯಸ್ವಾಮಿ, ವೇಣುಗೋಪಾಲಸ್ವಾಮಿ, ಆಂಜನೇಯಸ್ವಾಮಿ, ಕಾಲಭೈರವೇಶ್ವರಸ್ವಾಮಿ, ದಕ್ಷಿಣಾಮೂರ್ತಿ ಹಾಗೂ ನವಗ್ರಹ ದೇವಾಲಯ, ರಾಜಗೋಪುರ, ಇತರೆ ಪರಿವಾರ ದೇವರುಗಳು ದೇವಾಲಯ ನಿರ್ಮಾಣಕ್ಕಾಗಿ ಮೊದಲಿಗೆ 8.50 ಕೋಟಿ ಅಂದಾಜುವೆಚ್ಚ ತಯಾರಿಸಲಾಗಿತ್ತು. ಆದರೆ ಈಗ 15 ಕೋಟಿ ಬೇಕಾಗಿದೆ ಎಂದು

ಮುಜರಾಯಿ ಇಲಾಖೆಗೆ ಒಳಪಟ್ಟಿರುವ ಅರ್ಕೇಶ್ವರಸ್ವಾಮಿ ದೇವಾಲಯದ ಹೊಸ ಕಟ್ಟಡ ನಿರ್ಮಾಣ ಕಾಮಗಾರಿಯ ಹೊಣೆ ನೀಡಿರುವುದು ಹಾಗೂ ದಾನಿಗಳಿಂದ ಸ್ವೀಕರಿಸಿದ ಹಣದ ಖರ್ಚುವೆಚ್ಚದ ವಿವರವನ್ನು ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಏಕೆ ಪಡೆದಿಲ್ಲ. ಎಲ್ಲಾ ಜವಾಬ್ದಾರಿಯನ್ನೂ ಸೇವಾ ಸಮಿತಿಗೆ ವಹಿಸಿ ಕಣ್ಮುಚ್ಚಿ ಕುಳಿತಿರುವ ಅಧಿಕಾರಿಗಳ ನಡೆಯ ಬಗ್ಗೆಯೂ ಅನುಮಾನವಿದೆ. ಹೀಗಾಗಿ ದೇವಾಲಯ ನಿರ್ಮಾಣದ ಖರ್ಚು ವೆಚ್ಚದ ಸಂಪೂರ್ಣ ತನಿಖೆ ನಡೆಯಬೇಕು. ಅದರ ಸತ್ಯಾಂಶ ಜನರಿಗೆ ಗೊತ್ತಾಗಬೇಕು.

- ಬೋಜರಾಜು, ಸಮಾಜ ಸೇವಕ.

ದಾನಿಗಳಿಂದ ವಸೂಲು ಮಾಡಲಾಗುತ್ತಿದೆ. ಇನ್ನು 8 ತಿಂಗಳಲ್ಲಿ ದೇವಾಲಯ ಲೋಕಾರ್ಪಣೆ ಮಾಡುವುದಾಗಿ ಮಾಧ್ಯಮಗಳ ಮೂಲಕ ಹೇಳಿದ್ದಾರೆ. ಹಾಗಾದರೆ 15 ಕೋಟಿ ಹಣ ಖಾತೆಯಲ್ಲಿ ಜಮಾ ಇದೆಯೇ ಸ್ಪಷ್ಟಪಡಿಸಿ ಎಂದು ಒತ್ತಾಯಿಸಿದರು.

ಈ ವೇಳೆ ಮುಖಂಡರಾದ ರೈಡ್‌ನಾಗರಾಜು, ವಿ.ನರಸಿಂಹಮೂರ್ತಿ, ಸಬ್ಬಕೆರೆ ಶಿವಲಿಂಗಯ್ಯ,

# ನೇಮಕಾತಿಗೆ ಅರ್ಜಿ ಆಹ್ವಾನ

ತುಮಕೂರು: ತುಮಕೂರು ಉಪ ವಿಭಾಗ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿಗೆ ಅಧಿಕಾರೇತರ ಸದಸ್ಯರನ್ನು ನೇಮಕ ಮಾಡಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ. ಈ ಹಿಂದೆ 2024ರ ಮೇ 1ರಂದು ಅಂತಿಮ ದಿನಾಂಕವನ್ನು ನಿಗಧಿಗೊಳಿಸಿ ಅರ್ಜಿ ಆಹ್ವಾನಿಸಲಾಗಿತ್ತು. ನಿಗಧಿತ ದಿನಾಂಕದೊಳಗೆ ಅರ್ಜಿಗಳು ಸ್ವೀಕೃತವಾಗದ ಕಾರಣ ಮತ್ತೊಮ್ಮೆ ಅರ್ಜಿಯನ್ನು ಆಹ್ವಾನಿಸಲಾಗಿದೆ.

ದಲಿತಪರ/ ಹಿಂದುಳಿದ ಪರ ಸಂಘಟನೆಗಳಲ್ಲಿ ಜನಾಂಗದ ಪರವಾಗಿ ನಿಷ್ಪಕ್ಷಪಾತವಾಗಿ ಶ್ರಮಿಸಿರುವ ಜಿಲ್ಲೆಯ ಆಸಕ್ತ ವಿವಿಧ ದಲಿತ ಸಂಘಟನೆಗಳ ಮುಖಂಡರು ಹಾಗೂ ಇತರೆ ವರ್ಗದ ಎನ್.ಜಿ.ಒ ಸಂಸ್ಥೆಗಳ ಪ್ರತಿನಿಧಿಗಳು ನಿಗಧಿತ ಅರ್ಜಿ ನಮೂನೆಯನ್ನು ಭರ್ತಿ ಮಾಡಿ ಸಹಾಯಕ ನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ಜಿಲ್ಲಾ ಪಂಚಾಯತ್ ಕಚೇರಿ, ಬಿ.ಹೆಚ್. ರಸ್ತೆ, ತುಮಕೂರು ತಾಲ್ಲೂಕು ಇವರಿಗೆ ಮಾರ್ಚ್ 20ರೊಳಗಾಗಿ ಸಲ್ಲಿಸಬಹುದಾಗಿದೆ.

ಅರ್ಜಿ ಹಾಗೂ ಮತ್ತಿತರೆ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ತುಮಕೂರು ತಾಲ್ಲೂಕು ಅಥವಾ ದೂ.ವಾ.ಸಂ. 0816–20063051ನ್ನು ಸಂಪರ್ಕಿಸಬಹುದಾಗಿದೆ.

ಅರ್ಜಿ ಸಲ್ಲಿಸುವವರು ಈ ಹಿಂದೆ ಅಥವಾ ಪ್ರಸ್ತುತ ಜಿಲ್ಲಾ/ ಉಪ ವಿಭಾಗ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿಗಳಲ್ಲಿ ಸದಸ್ಯರಾಗಿರಕೂಡದು ಹಾಗೂ ಸಮಾಜ ಕಲ್ಯಾಣ ಇಲಾಖೆಯ ಯಾವುದೇ ಸಮಿತಿಗಳಲ್ಲಿ ಕಾರ್ಯನಿರ್ವಹಿಸುತ್ತಿರಬಾರದು. ಚುನಾಯಿತ ಪ್ರತಿನಿಧಿಯಾಗಿರಬಾರದು ಹಾಗೂ ಯಾವುದೇ ರಾಜಕೀಯ ಪಕ್ಷದ ಸದಸ್ಯತ್ವ ಪಡೆದಿರಬಾರದು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಇಬ್ಬರು ಹಾಗೂ ಇತರೆ ವರ್ಗದ ಇಬ್ಬರು ಎನ್.ಜಿ.ಒಗಳಿಗೆ ಪ್ರಾತಿನಿಧ್ಯವಿರುವಂತೆ ಆಯ್ಕೆ ಮಾಡಲಾಗುವುದು. ಹೆಚ್ಚಿನ ಸಂಖ್ಯೆಯ ಅರ್ಜಿಗಳು ಸ್ವೀಕೃತವಾದರೆ ಆಯ್ಕೆ ಪ್ರಕ್ರಿಯೆಯನ್ನು ಲಾಟರಿ ಮೂಲಕ ನಡೆಸಲಾಗುವುದು. ನಿಗಧಿತ ನಮೂನೆಯಲ್ಲಿ ಮಾತ್ರ ಅರ್ಜಿ ಸಲ್ಲಿಸಬೇಕು ಎಂದು ಸಮಾಜ ಕಲ್ಯಾಣ ಇಲಾಖೆ ಪ್ರಕಟಣೆ ತಿಳಿಸಿದೆ.

# ವಿಶ್ವ ವಿದ್ಯಾಲಯಗಳನ್ನು ಮುಚ್ಚಲ್ಲ; ವಿಲೀನವಷ್ಟೇ- ಡಿಕೆಶಿ

ಬೆಂಗಳೂರು: ಬಿಜೆಪಿ ಆಡಳಿತಾವಧಿಯಲ್ಲಿ ಸ್ಥಾಪಿಸಲಾದ 10 ಹೊಸ ವಿಶ್ವವಿದ್ಯಾಲಯಗಳ ಪೈಕಿ 9 ವಿಶ್ವವಿದ್ಯಾಲಯಗಳನ್ನು ಮುಚ್ಚವ ಬಗ್ಗೆ ಚರ್ಚೆ ನಡೆದಿದ್ದು, ಇದರ ವಿರುದ್ಧ ಭಾರೀ ವಿರೋಧಗಳು ವ್ಯಕ್ತವಾಗುತ್ತಿವೆ.

ಈ ಬಗ್ಗೆ ವಿಪಕ್ಷ ನಾಯಕ ಆರ್ ಅಶೋಕ್ ಗುರುವಾರ ವಿಧಾನಸಭೆ ಸದನದಲ್ಲಿ ರಾಜ್ಯಪಾಲರ ಭಾಷಣದ ಮೇಲಿನ ಚರ್ಚೆ ವೇಳೆ ಪ್ರಸ್ತಾಪಿಸಿ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು.

ಬಳಿಕ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕೂಡಲೇ ಎದ್ದು ನಿಂತು ವಿಶ್ವವಿದ್ಯಾಲಯಗಳನ್ನು ಬೇರೆ ವಿವಿಗಳ ಜತೆ ವಿಲೀನ ಮಾಡುತ್ತಿದ್ದೇವೆ ಅಷ್ಟೇ. ಮುಚ್ಚುತ್ತಿದ್ದೇವೆ ಅಂತಲ್ಲ ಎಂದು ಸ್ಪಷ್ಟಪಡಿಸಿದರು. ಅಲ್ಲದೇ ಈ ಬಗ್ಗೆ ವಿಜಯೇಂದ್ರ ಅವರ ಅಕ್ಕನ ಮಗನಿಗೆ ವಿದೇಶದಲ್ಲಿ ಸೀಟು ಸಿಗದಿದ್ದನ್ನು ಉದಾಹರಣೆ ನೀಡಿದರು.

ಮೈಸೂರು ವಿಶ್ವ ವಿದ್ಯಾಲಯದಲ್ಲಿ ಸರ್ಟಿಫಿಕೇಟ್ ತೆಗೆದು ಕೊಳ್ಳುವುದಕ್ಕೂ ಚಾಮರಾಜನಗರ ಅಥವಾ ಮಂಡ್ಯ ವಿವಿಯಲ್ಲಿ ತೆಗೆದು ಕೊಳ್ಳುವುದಕ್ಕೂ ವ್ಯತ್ಯಾಸ ಇದೆ. ಎಸ್.ಎಂ. ಕೃಷ್ಣ ವಿದೇಶಾಂಗ ಸಚಿವರಾಗಿದ್ದಾಗ ವಿಜಯೇಂದ್ರ ಅವರ ಅಕ್ಕನ ಮಗನಿಗೆ ಪಿಇಎಸ್ ವಿವಿಯಲ್ಲಿ ಓದಿದ್ದರೂ ವಿದೇಶಿ ವಿಶ್ವವಿದ್ಯಾಲಯದಲ್ಲಿ ಪ್ರವೇಶ ಸಿಗಲಿಲ್ಲ.



ಬೆಂಗಳೂರಿಗೆ ಪಿಇಎಸ್ ಫೇಮಸ್ ಕಾಲೇಜು. ಆದರೆ ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರವೇಶ ಸಿಗಲಿಲ್ಲ. ವಿಶ್ವವಿದ್ಯಾಲಯಗಳನ್ನು ಬೇರೆ ವಿವಿಗಳ ಜತೆ ವಿಲೀನ ಮಾಡುತ್ತಿದ್ದೇವೆ ಅಷ್ಟೇ ಮುಚ್ಚುತ್ತಿದ್ದೇವೆ ಅಂತಲ್ಲ ಎಂದು ಸ್ಪಷ್ಟಪಡಿಸಿದರು.

ಬೆಂಗಳೂರು ವಿಶ್ವವಿದ್ಯಾಲಯ, ಮೈಸೂರು ವಿವಿಗಳಿಗೆ ಅವುಗಳದ್ದೇ ಆದ ಸ್ಥಾನ, ಮೌಲ್ಯ ಇದೆ ಎಂದು ಹೇಳಿದ ಡಿಕೆ ಶಿವಕುಮಾರ್, ಬೈ ಚಾಯ್ಸ್ ಐಯಾಮ್ ಎಜ್ಯುಕೇಶನಿಸ್ಟ್, ಪೊಲಿಟಿಕ್ಸ್ ಈಸ್ ಮೈ ಫ್ಯಾಷನ್ ಎಂದರು. ಬಳಿಕ ವಿಪಕ್ಷ ನಾಯಕ ಅಶೋಕ್ ಮಧ್ಯಪ್ರವೇಶಿಸಿ ಮತ್ತೊಮ್ಮೆ ಆ ಡೈಲಾಗ್ ಹೇಳಿ ಎಂದರು.

ಬಳಿಕ ಮಾತು ಮುಂದುವರಿಸಿದ ಡಿಕೆಶಿ, ನೀವು ನನ್ನನ್ನು ತಿಹಾರ್ ಜೈಲಿಗೆ ಕಳುಹಿಸಿದ ಮೇಲೆ ನಾನು ಅಲ್ಲಿಂದ ಬಂದು ಪಕ್ಷದ ಕಚೇರಿಯಲ್ಲಿ ಒಂದು ಮಾತು ಆಡಿದ್ದೆ. ನಾನು ಬೈ ಬರ್ತ್ ನಾನು ಅಗ್ರಿಕಲ್ಚರಿಸ್ಟ್, ಬೈ ಚಾಯ್ಸ್ ನಾನು ಎಜುಕೇಷನಿಸ್ಟ್, ಬೈ ಪ್ರೊಫೆಷನ್ ನಾನು ಬ್ಯುಸಿನೆಸ್ ಮ್ಯಾನ್, ಬೈ ಪ್ಯಾಷನ್ ನಾನೊಬ್ಬ ಪೊಲಿಟಿಷಿಯನ್. ಹೊಸ ವಿವಿಗಳನ್ನು ವಿಲೀನ ಮಾಡುತ್ತಿದ್ದೇವೆ. ಯಾರೂ ಲೆಕ್ಚರರ್ ಗಳು ಹೋಗುತ್ತಿರಲಿಲ್ಲ. ನಾವು ಮುಚ್ಚಿಲ್ಲ, ವಿಲೀನ ಮಾಡುತ್ತಿದ್ದೇವೆ. ನೀವು ಭಾಗ ಮಾಡುತ್ತೀರಿ, ನಾವು ವಿಲೀನ ಮಾಡುತ್ತೇವೆ. ನಮಗೂ ನಿಮಗೂ ಇಷ್ಟೇ ವ್ಯತ್ಯಾಸ, ನೀವು ಜನರನ್ನು ವಿಭಜಿಸುತ್ತೀರಿ, ನಾವು ಒಂದು ಮಾಡುತ್ತೇವೆ ಎಂದು ವಿಪಕ್ಷಗಳಿಗೆ ಟಾಂಗ್ ಕೊಟ್ಟರು.

ಇನ್ನು ಡಿಕೆ ಶಿವಕುಮಾರ್ ಸ್ಪಷ್ಟನೆಗೂ ಮುನ್ನವೇ ವಿಪಕ್ಷ ನಾಯಕ ಅಶೋಕ್ ಅವರು ಸದನದಲ್ಲಿ ರಾಜ್ಯಪಾಲರ ಭಾಷಣದ ಮೇಲಿನ ಚರ್ಚೆ ವೇಳೆ ವಿವಿ ಮುಚ್ಚುವ ಬಗ್ಗೆ ಪ್ರಸ್ತಾಪಿಸಿದರು. ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ಸಮಿತಿ ಮಾಡಿ ಸರ್ಕಾರ 9 ವಿವಿ ಮುಚ್ಚುವ ನಿರ್ಧಾರ ಮಾಡಿದೆ.

ನಾವು ವಿವಿಗಳನ್ನು ಮಾನದಂಡಗಳ ಮೇಲೆ ಆರಂಭಿಸಿದ್ದೆವು. ಸುಮ್ಮ ಸುಮ್ಮನೆ ವಿವಿಗಳಿಗೆ ಅನುಮತಿ ಕೊಡಲಿಲ್ಲ. ಮಂಡ್ಯ ವಿವಿಗೆ ಕೇಂದ್ರ ಸರ್ಕಾರ 50 ಕೋಟಿ ಕೊಟ್ಟಿದೆ, ಕಟ್ಟಡ ಇದೆ, ವಿದ್ಯಾರ್ಥಿಗಳು ಇದ್ದಾರೆ. ಆದ್ರೆ, ಕಾಂಗ್ರೆಸ್ ಸರ್ಕಾರ ಮಂಡ್ಯ ವಿವಿ ರದ್ದು ಮಾಡುತ್ತೇವೆ ಅಂದರೆ ಹೇಗೆ? ಎಂದು ಪ್ರಶ್ನಿಸಿದರು.

ಶಾಸಕ ರವಿ ಗಣಿಗ ಎಲ್ಲಪ್ಪ? ಗಣಿಗ ನೀನು ಮಂಡ್ಯಕ್ಕೆ ಹೋದರೆ ಅಲ್ಲಿನವರು ಗಾಣಕ್ಕೆ ಹಾಕಿ ರುಬ್ಬಿ ಬಿಡುತ್ತಾರೆ ಎಂದರು. ಅಶೋಕ್ ಮಾತಿಗೆ ಪ್ರತಿಕ್ರಿಯಿಸಿದ ಮಂಡ್ಯ ಶಾಸಕ ರವಿ ಗಣಿಗ, ನಾನು ಈಗಾಗಲೇ ಡಿಸಿಎಂಗೆ ಹಾಗೂ ಮಂತ್ರಿಗಳಿಗೆ ಮಂಡ್ಯ ವಿವಿ ರದ್ದು ಬೇಡ, ಮಂಡ್ಯದ ಜನರ ಪರವಾಗಿ ವಿವಿ ಬೇಕು ಅಂತಾ ಕೇಳಿಕೊಂಡಿದ್ದೇನೆ ಎಂದು ಹೇಳಿದರು. ರವಿ ಗಣಿಗ ಅವರ ಈ ಮಾತಿಗೆ ಅಶೋಕ್ ಶ್ಲಾಘಿಸಿದ್ದು, ಇದು ಚಾಲೆಂಜ್ ಅಂದರೆ. ಶಾಸಕರಿಗೆ ಇರುವ ಧಮ್ ಜಿಲ್ಲಾ ಉಸ್ತುವಾರಿ ಸಚಿವರಿಗಿಲ್ಲ ಎಂದು ಸಚಿವ ಚಲುವರಾಯಸ್ವಾಮಿಗೆ ಮಾತಿನಲ್ಲೇ ತಿವಿದರು. ಇನ್ನು 450 ಕೋಟಿ ರೂಪಾಯಿ ಅಷ್ಟೇ 9 ವಿವಿಗಳಿಗೆ ಬೇಕಾಗಿರುವುದು. ಸರ್ಕಾರ ಈ ಹಣ ಕೊಡದಷ್ಟು ಪಾಪರ್ ಆಗಿದೆಯಾ ಅಂತ ಟೀಕಿಸಿದರು.

## ಕೆಎಫ್‌ಡಿಗೆ ಬರುವ ವರ್ಷ ಲಸಿಕೆ ಸಿಗುವ ಸಾಧ್ಯತೆ: ಗುಂಡೂರಾವ್

ಬೆಂಗಳೂರು: ಮಂಗನ ಕಾಯಿಲೆ (ಕೆಎಫ್‌ಡಿ)ಗೆ ಬರುವ ವರ್ಷ ಲಸಿಕೆ ಸಿಗುವ ಸಾಧ್ಯತೆ ಇದೆ ಎಂದು ಆರೋಗ್ಯ ಸಚಿವ ದಿನೇಶ್‌ಗುಂಡೂರಾವ್ ವಿಧಾನಸಭೆಯಲ್ಲಿಂದು ತಿಳಿಸಿದರು.

ಪ್ರಶ್ನೋತ್ತರ ಅವಧಿಯಲ್ಲಿ ಬಿಜೆಪಿಯ ಅರಗ ಜ್ಞಾನೇಂದ್ರ ರವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕ್ಯಾಸನೂರು ಫಾರೆಸ್ಟ್ ಡಿಸೀಸ್ (ಕೆಎಫ್‌ಡಿ) ಎಂಬ ಮಂಗನ ಕಾಯಿಲೆಗೆ ಈ ಹಿಂದೆ ನೀಡಲಾಗುತ್ತಿದ್ದ ಲಸಿಕೆ ಪರಿಣಾಮಕಾರಿಯಾಗಿಲ್ಲ ಎನ್ನುವ ಕಾರಣಕ್ಕೆ ಆ ಲಸಿಕೆಯನ್ನು ಬಳಸುತ್ತಿಲ್ಲ. ಪರಿಣಾಮಕಾರಿಯಾದ ಹೊಸ ಲಸಿಕೆ ಬಗ್ಗೆ ಸಂಶೋಧನೆ ನಡೆದಿದ್ದು, ಬರುವ ವರ್ಷ ಹೊಸ ಲಸಿಕೆ ಲಭ್ಯವಾಗಲಿದೆ ಎಂದು ಹೇಳಿದರು.

ಮಂಗನ ಕಾಯಿಲೆಗೆ ಹೊಸ ಲಸಿಕೆ ಸಂಬಂಧ ತಾವು ಐಸಿಎಂಆರ್ ಜತೆ ಚರ್ಚೆ ನಡೆಸಿದ್ದು, ಐಸಿಎಂಆರ್ ಸಹ ಈ ಬಗ್ಗೆ ಸಂಶೋಧನೆ ಮಾಡುತ್ತಿದೆ. ಬರುವ ವರ್ಷ ಈ ಲಸಿಕೆ ತಯಾರು ಮಾಡುವ ಸಾಧ್ಯತೆ ಇದೆ. ಇದು ಬಹಳ ಒಳ್ಳೆಯ ಬೆಳವಣಿಗೆ ಎಂದರು.

ಬಹಳ ಹಳೇಯ ಕಾಯಿಲೆಯಾದ ಇದಕ್ಕೆ ಲಸಿಕೆ ಕಂಡು ಹಿಡಿಯಲು ಸಾಧ್ಯವಾಗಿರಲಿಲ್ಲ. ಇದು ಕೇವಲ ಕರ್ನಾಟಕಕ್ಕೆ ಮಾತ್ರ ಸೀಮಿತವಾದ ಕಾಯಿಲೆಯಾದ್ದರಿಂದ ಕೇಂದ್ರ ಸರ್ಕಾರ ಸಹ ಈ ಸಂಶೋಧನೆಗೆ ಹಣ ಕೊಟ್ಟಿರಲಿಲ್ಲ. ಈಗ ರಾಜ್ಯ ಸರ್ಕಾರವೇ ಕಾರ್ಪೋರೇಟ್ ನಿಧಿಯ ಮೂಲಕ ಮಂಗನ ಕಾಯಿಲೆಗೆ ಲಸಿಕೆ ತಯಾರಿಕೆಗೆ ಹಣವನ್ನು ಹೊಂದಿಕೆ ಮಾಡಿದೆ. ಸಂಶೋಧನೆ ನಡೆದಿದೆ ಎಂದು ಅವರು ಹೇಳಿದರು.

ಮಂಗನ ಕಾಯಿಲೆಗೆ ಒಳಗಾಗುವವರಿಗೆ ಚಿಕಿತ್ಸೆ ನೀಡಲು ಸಂಚಾರಿ ವಾಹನವನ್ನು ಒದಗಿಸುವ ಪ್ರಕ್ರಿಯೆ ನಡೆದಿದ್ದು, ಇನ್ನೊಂದು ತಿಂಗಳೊಳಗೆ ಮೊಬೈಲ್ ಸಂಚಾರ ವಾಹನ ಒದಗಿಸುವುದಾಗಿಯೂ ಅವರು ಭರವಸೆ ನೀಡಿದರು.

ಈ ಮಂಗನ ಕಾಯಿಲೆ ಮಲೆನಾಡು ಪ್ರದೇಶದಲ್ಲಿ ಬೇಸಿಗೆಯಿಂದ ಚಳಿಗಾಲದವರೆಗೂ ಕಾಣಿಸಿಕೊಳ್ಳುತ್ತದೆ. ಈ ಅವಧಿಯಲ್ಲಿ ಮಂಗನ ಕಾಯಿಲೆಯಿಂದ ಯಾವುದೇ ಸಾವು ಸಂಭವಿಸದಂತೆ ಮುಂಜಾಗ್ರತಾ ಕ್ರಮ ವಹಿಸಲಾಗಿದೆ ಎಂದು ಸಚಿವರು ಹೇಳಿದರು.

## ಫೈನಾನ್ಸ್ ತಡೆಗೆ ವಿಧೇಯಕ ಮಂಡನೆ

ಬೆಂಗಳೂರು: ಮೈಕ್ರೋ ಫೈನಾನ್ಸ್ ಕಿರುಕುಳ ತಡೆಯುವ ವಿಧೇಯಕವನ್ನು ವಿಧಾನಸಭೆಯಲ್ಲಿಂದು ಮಂಡಿಸಲಾಯಿತು.

ಮೈಕ್ರೋ ಫೈನಾನ್ಸ್‌ಗಳ ಕಿರುಕುಳ ತಡೆ ಸಂಬಂಧ ರಾಜ್ಯ ಸರ್ಕಾರ ಈಗಾಗಲೇ ಸುಗ್ರಿವಾಜ್ಞೆ ಹೊರಡಿಸಿದ್ದು, ಸುಗ್ರಿವಾಜ್ಞೆ ರೂಪದಲ್ಲಿರುವ ಕರ್ನಾಟಕ ಕಿರುಸಾಲ ಮತ್ತು ಸಣ್ಣಸಾಲ ಬಲವಂತದ ಕ್ರಮಗಳ ಪ್ರತಿಬಂಧಕ ವಿಧೇಯಕ–2025ನ್ನು ವಿಧಾನಸಭೆಯಲ್ಲಿಂದು ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ. ಪಾಟೀಲ್ ಮಂಡಿಸಿದರು. ಈ ವಿಧೇಯಕದ ಬಗ್ಗೆ ವಿಧಾನಸಭೆಯಲ್ಲಿ ಚರ್ಚೆ ನಡೆಯಬೇಕಿದ್ದು ನಂತರ ವಿಧೇಯಕಕ್ಕೆ ಅಂಗೀಕಾರ ಸಿಗಲಿದೆ. ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಸಾಲಗಾರರಿಗೆ ಕಿರುಕುಳ ಕೊಡುವುದನ್ನು ತಡೆಯುವ ಸಂಬಂಧ ರಾಜ್ಯ ಸರ್ಕಾರ ಸುಗ್ರಿವಾಜ್ಞೆ ರೂಪದಲ್ಲಿ ಈ ವಿಧೇಯಕವನ್ನು ಜಾರಿ ಮಾಡಿತ್ತು. ಸಾಲಗಾರರಿಂದ ಬಲವಂತಾಗಿ ಸಾಲ ವಸೂಲಾತಿಯನ್ನು ಈ ವಿಧೇಯಕ ನಿರ್ಬಂಧಿಸುತ್ತದೆ. ಈ ವಿಧೇಯಕದ ಪ್ರಕಾರ ಬಲವಂತದ ಸಾಲ ವಸೂಲು ಮಾಡುವವರಿಗೆ ಜೈಲು ಶಿಕ್ಷೆ ಮತ್ತು ದಂಡ ವಿಧಿಸಲು ಅವಕಾಶವಿದೆ.

## 100 ಹೊಸ ವಿದುತ್ಯ್ ಕೇಂದ್ರ ಆರಂಭ

ಬೆಂಗಳೂರು: ರಾಜ್ಯದಲ್ಲಿ ಬರುವ ವರ್ಷ 100 ಹೊಸ ವಿದ್ಯುತ್ ಉಪಕೇಂದ್ರಗಳನ್ನು ಆರಂಭಿಸಲಾಗುವುದು ಎಂದು ಇಂಧನ ಸಚಿವ ಕೆ.ಜೆ. ಜಾರ್ಜ್ ವಿಧಾನಸಭೆಯಲ್ಲಿಂದು ಹೇಳಿದರು

ಪ್ರಶ್ನೋತ್ತರ ಅವಧಿಯಲ್ಲಿ ಬಿಜೆಪಿಯ ಸಿದ್ದು ಸವದಿ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಈ ವರ್ಷ 56 ಹೊಸ ವಿದ್ಯುತ್ ಉಪಕೇಂದ್ರಗಳನ್ನು ಆರಂಭಿಸಲಾಗುವುದು. ಮುಂದಿನ ವರ್ಷ ನೂರು ಹೊಸ ವಿದ್ಯುತ್ ಉಪಕೇಂದ್ರಗಳನ್ನು ಆರಂಭಿಸಲಾಗುವುದು ಎಂದರು.

ಗ್ರಾಮೀಣ ಭಾಗದಲ್ಲಿ ಎಲ್‌ಟಿ ವಾಹಕಗಳು, ಎಚ್‌ಟಿ ವಾಹಕಗಳ ಬದಲಾವಣೆ ಕಾರ್ಯ ನಡೆದಿದೆ. ಮುಂದಿನ ಎರಡು ವರ್ಷಗಳಲ್ಲಿ ಈ ಎಲ್ಲ ಸಮಸ್ಯೆಗಳಿಗ ಪರಿಹಾರ ಸಿಗಲಿದೆ ಎಂದರು.

ಎಲ್‌ಟಿ ಮತ್ತು ಎಚ್ ಟಿ ವಾಹಕಗಳನ್ನು ಹಂತ ಹಂತವಾಗಿ ಬದಲಾವಣೆ ಮಾಡಲಾಗುತ್ತಿದೆ ಎಂದು ಅವರು ಹೇಳಿದರು.

ವಿದ್ಯುತ್ ಉಪಕೇಂದ್ರಗಳಲ್ಲಿ ಹೆಚ್ಚು ವಿದ್ಯುತ್ ಒತ್ತಡ ಇರುವ ಕುಸುಂ–ಸಿ ಮತ್ತು ಕುಸುಂ–ಬಿ ಯೋಜನೆಯಡಿ ಸೋಲಾರ್ ಮೂಲಕ ವಿದ್ಯುತ್ ಉತ್ಪಾದನೆ ಮಾಡಿ ಸರಬರಾಜು ಮಾಡಲಾಗುತ್ತಿದೆ. ಕುಸುಂ–ಸಿ ಯೋಜನೆಯಿಂದ ರೈತರಿಗೆ ಅನುಕೂಲವಾಗುತ್ತಿದೆ ಎಂದರು.

ಕೆಲವೆಡೆ ರೈತರ ಪಂಪ್‌ಸೆಟ್‌ಗಳಿಗೆ ಶೀಘ್ರ ಸಂಪರ್ಕಕ್ಕೂ ಅರ್ಜಿ ಬಂದಿದ್ದೂ, ಅವುಗಳಿಗೂ ವಿದ್ಯುತ್ ಸಂಪರ್ಕ ಒದಗಿಸುವಂತೆ ಆದೇಶಿಸಲಾಗಿದೆ ಎಂದರು.

## 'ಭ್ರಷ್ಟ ಅಧಿಕಾರಿಗಳ ಬೇಟೆಯಾಡಿದ ಲೋಕಾಯುಕ್ತ'

ಬೆಂಗಳೂರು: ಭ್ರಷ್ಟ ಸರ್ಕಾರಿ ಅಧಿಕಾರಿಗಳ ಲೋಕಾಯುಕ್ತ ಬೇಟೆಯಾಡಿದೆ. ಏಕಕಾಲದಲ್ಲಿ ಕರ್ನಾಟಕದ 8 ವಿವಿಧ ಅಧಿಕಾರಿಗಳಿಗೆ ಶಾಕ್ ಕೊಟ್ಟ ಲೋಕಾಯುಕ್ತ, ಮನೆಯ ಇಂಚಿಂಚು ಜಾಲಾಡಿದೆ. ಬೆಂಗಳೂರು, ತುಮಕೂರು, ಕೊಲಾರ ಸೇರಿದಂತೆ 7 ಜಿಲ್ಲೆಗಳಲ್ಲಿ ಒಟ್ಟು 8 ಅಧಿಕಾರಿಗಳಿಗೆ ಶಾಕ್ ನೀಡಿದ್ದು, ಅಧಿಕಾರಿಗಳ ಕಚೇರಿ, ಮನೆಗಳ ಮೇಲೆ ದಾಳಿ ಮಾಡಿದ್ದು, ಅಪಾರ ಸಂಪತ್ತು ಪತ್ತೆ ಮಾಡಿದ್ದಾರೆ.



ಬೆಂಗಳೂರಿನಲ್ಲಿ ವಾಸವಿರುವ ರೂರಲ್ ಡೆವಲಪ್ಮೆಂಟ್ ಪಂಚಾಯತ್ ರಾಜ್‌ನ ಚೀಫ್ ಇಂಜಿನಿಯರ್ ನಂಜುಡಪ್ಪಗೆ ಶಾಕ್ ನೀಡಿದ ಲೋಕಾಯುಕ್ತ ಅಧಿಕಾರಿಗಳು, ಇಂದು ಬೆಳ್ಳಬೆಳಿಗ್ಗೆ ಬಸವೇಶ್ವರನಗರದ ಅವರ ನಿವಾಸದ ಬಾಗಿಲು ತಟ್ಟಿದ್ದರು.. 14 ಅಧಿಕಾರಿಗಳು ಎಂಟ್ರಿ ಕೊಟ್ಟು ಮನೆಯಿಡಿ ತಪಾಸಣೆ ನಡೆಸಿದರು. ಈ ವೇಳೆ ಮನೆಯಲ್ಲಿ ಬರೊಬ್ಬರಿ 60 ಲಕ್ಷ ಮೌಲ್ಯದ ವಸ್ತಗಳು ಪತ್ತೆಯಾಗಿದ್ದು, ಇದರಲ್ಲಿ 51 ಲಕ್ಷ ಮೌಲ್ಯದ 841 ಗ್ರಾಂ ಚಿನ್ನ, 4.66 ಲಕ್ಷ ಮೌಲ್ಯದ 5936 ಗ್ರಾಂ ಬೆಳ್ಳಿ, 3.91 ಲಕ್ಷ ನಗದು ಹಾಗೂ 60 ಸಾವಿರ ವಿದೇಶಿ ಕರೆನ್ಸಿಗಳು ಪತ್ತೆಯಾಗಿವೆ. ಇದರ ಜೊತೆಗೆ ಭವ್ಯವಾದ ಮನೆ ಹಾಗೂ ಆ ಮನೆಯಲ್ಲಿದ್ದ 39 ಲಕ್ಷ ಮೌಲ್ಯದ ನಾಲ್ಕು ಕಾರುಗಳು ಸಹ ಪತ್ತೆಯಾಗಿವೆ.

ಲೋಕೋಪಯೋಗಿ ಇಲಾಖೆಯ ಚೀಫ್ ಇಂಜಿನಿಯರ್ ಜಗನ್ನಾಥನ ಮನೆಯಲ್ಲಿ ಅಪಾರ ಪ್ರಮಾಣದ ವಜ್ರ, ವೈಡೂರ್ಯ ಪತ್ತೆಯಾಗಿದೆ. ಇನ್ನು ಇದು ಮನೆಯೋ, ಅರಮನೆಯೋ ಎಂದು ಎಂಥವರೂ ಒಮ್ಮೆ ಕನ್ಫ್ಯೂಸ್ ಆಗೋದು ಗ್ಯಾರಂಟಿ. ಕಲಬುರಗಿಯ NGO ಕಾಲೋನಿ ನಿವಾಸದಲ್ಲಿ 2 ಕೆಜಿಗೂ ಅಧಿಕ ಬೆಳ್ಳಿ ಪತ್ತೆಯಾಗಿದೆ. ಮನೆಯ ಲಾಕರ್‌ನಲ್ಲಿ ಡೈಮಂಡ್ ರಿಂಗ್ ಸೇರಿದಂತೆ 30ಕ್ಕೂ ಹೆಚ್ಚು ಗೋಲ್ಡ್ ಕಾಯಿನ್ ಪತ್ತೆಯಾಗಿದೆ. ಕೋಟಿ ಕೋಟಿ ಮೌಲ್ಯ ಚಿನ್ನಾಭರಣ ಕಂಡು ಅಧಿಕಾರಿಗಳೇ ಹೌಹಾರಿದ್ದಾರೆ.

> ಕೋಲಾರದಲ್ಲಿ ಬೆಸ್ಕಾಂ ಎಇಇ ನಾಗರಾಜ್‌ಗೆ ಸೇರಿದ ಮೂರು ಕಡೆಗಳಲ್ಲಿ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿದ್ರು. ಬೆಂಗಳೂರಿನ ರಾಜಾಜಿನಗರ ಬೆಸ್ಕಾಂ ಕಚೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದರು. ಕೆಆರ್.ಪುರಂ ಬಳಿಕ ಪ್ರಿಯದರ್ಶಿನಿ ಬಡಾವಣೆಯ ಮನೆ, ರಾಜಾಜಿನಗರ ಕಚೇರಿ, ಸಂಬಂಧಿಕರ ಮನೆ ಮೇಲೂ ದಾಳಿ ಮಾಡಲಾಗಿದೆ. ದಾಳಿ ವೇಳೆ ಕೋಟ್ಯಂತರ ರೂಪಾಯಿ ಮೌಲ್ಯದ ಆಸ್ತಿ ಪತ್ತೆಯಾಗಿದೆ. ಕೊಳ್ಳೇಗಾಲದಲ್ಲಿ 6 ಎಕರೆ ಜಮೀನು, ಬೆಂಗಳೂರಿನಲ್ಲಿ ಒಂದು ಮನೆ, ಎರಡು ನಿವೇಶನಗಳು ಪತ್ತೆಯಾಗಿದೆ.

ಚೀಫ್ ಇಂಜಿಯರ್ ಆಗಿರೋ ಜಗನ್ನಾಥ್, ನಿವೃತ್ತಿಗೆ ಕೇವಲ 25 ದಿನಗಳಷ್ಟೇ ಬಾಕಿ ಇತ್ತು. ಇದೇ ತಿಂಗಳ 31ಕ್ಕೆ ನಿವೃತ್ತಿ ಆಗ್ಬೇಕಿತ್ತು. ಇದೇ ಹೊತ್ತಿನಲ್ಲೇ ಲೋಕಾ ಬಲೆಗೆ ಸಿಲುಕುವಂತೆ ಆಗಿರೋದು ಟೆನ್ಷನ್ ತಂದಿಟ್ಟಿದೆ. ಒಂದೇ ಕಡೆ ದಾಳಿ ಆಗಿಲ್ಲ, ಜಗನ್ನಾಥಗೆ ಸೇರಿದ 5 ಕಡೆಗಳಲ್ಲೂ ರೇಡ್ ಮಾಡಲಾಗಿದೆ. ಆಳಂದ, ತಾವರಗರೆ, ಬೀದರ್, ಬಸವಕಲ್ಯಾಣ ಸೇರಿದಂತೆ ಹಲವು ಕಡೆ 60ಕ್ಕೂ ಹೆಚ್ಚು ಎಕರೆ ಆಸ್ತಿ ಪತ್ತೆಯಾಗಿದೆ.

ಇನ್ನು ದಾವಣಗೆರೆಯಲ್ಲಿ ಫುಡ್ ಸೇಫ್ಟಿ ಅಧಿಕಾರಿ ಡಾ.ನಾಗರಾಜ್ ಮನೆ ಮೇಲೂ ಲೋಕಾ ರೇಡ್ ಮಾಡ್ತು. ಮನೆಯಲ್ಲಿ ಲಕ್ಷಾಂತರ ಮೌಲ್ಯದ ವಾಚ್, ಚಿನ್ನ, ಬೆಳ್ಳಿ ವಸ್ತುಗಳು ಪತ್ತೆಯಾಗಿದೆ. ಇನ್ನ ನಾಗರಾಜ್‌ಗೆ ಸೇರಿದ ಐದು ಸ್ಥಳಗಳಲ್ಲಿ ಅಕ್ರಮ ಆಸ್ತಿ ಸಂಬಂಧ ತನಿಖೆ ಮಾಡಲಾಯ್ತು.

ಇನ್ನುಳಿದಂತೆ ಬಾಗಲಕೋಟೆಯಲ್ಲಿ ಪಂಚಾಯತ್ ರಾಜ್ ಇಲಾಖೆ ಅಕೌಂಟೆಂಟ್ ಮಲ್ಲೇಶ್, ವಿಜಯಪುರದಲ್ಲಿ ಕೆಹೆಚ್‌ಬಿ FDA ಶಿವಾನಂದ ಕೆಂಬಾವಿ, ತುಮಕೂರಿನಲ್ಲಿ ವೈದ್ಯ ಜಗದೀಶ್ ಮನೆ ಮೇಲೂ ರೇಡ್ ಮಾಡಲಾಯ್ತು, ಆಸ್ತಿ, ಪಾಸ್ತಿ ಸಂಬಂಧ ಶೋಧ ಮಾಡಲಾಯ್ತು.

ಅದೇನೇ ಹೇಳಿ, ಭ್ರಷ್ಟಾಚಾರ ಆರೋಪದ ಮೇಲೆ ಬೆಳ್ಳಂಬೆಳಗ್ಗೆ, ಬೆಂಗಳೂರು ಸೇರಿದಂತೆ ರಾಜ್ಯದ 7 ಕಡೆಗಳಲ್ಲಿ ಲೋಕಾಯುಕ್ತ ದಾಳಿ ಮಾಡಿದೆ. ದಾಳಿ ವೇಳೆ ಅಪಾರ ಪ್ರಮಾಣದ ವಜ್ರ, ವೈಡೂರ್ಯ ಪತ್ತೆಯಾಗಿದೆ.

## ಎಸ್‌ಸಿ, ಎಸ್‌ಟಿ ವಿದ್ಯಾರ್ಥಿ ನಿಲಯ ಪ್ರವೇಶ ಕಲಿಸಲು ಅಗತ್ಯ ಕ್ರಮ

ಬೆಂಗಳೂರು: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಕೋರಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೆ ಅವರು ಕೋರಿರುವ ವಿದ್ಯಾರ್ಥಿ ನಿಲಯಗಳಲ್ಲಿ ಅಥವಾ ಸಮೀಪದಲ್ಲಿರುವ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ಕಲ್ಪಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದು ವಿಧಾನ ಪರಿಷತ್ತಿನ ಸಭಾ ನಾಯಕರೂ ಹಾಗೂ ಸಚಿವರಾದ ಎನ್.ಎಸ್. ಭೋಸರಾಜು ವಿಧಾನಪರಿಷತ್ತಿಗಿಂದು ತಿಳಿಸಿದರು.

ಪ್ರಶ್ನೋತ್ತರ ಕಲಾಪದಲ್ಲಿ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) ಅವರ ಚುಕ್ಕೆ ಗುರುತಿನ ಪ್ರಶ್ನೆಗೆ



ಮುಖ್ಯಮಂತ್ರಿಗಳ ಪರವಾಗಿ ಉತ್ತರಿಸಿದ ಸಚಿವರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಒಟ್ಟು 270 ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿದ್ದು, 2024–25ನೇ ಸಾಲಿನಲ್ಲಿ 29867 ವಿದ್ಯಾರ್ಥಿಗಳಿಗೆ ಪ್ರವೇಶ ಕಲ್ಪಿಸಲಾಗಿದ್ದು, ಒಟ್ಟಾರೆ 23,938 ಮಂಜೂರಾತಿ ಸಂಖ್ಯೆಗೆ ಎದುರಾಗಿ 5929 ವಿದ್ಯಾರ್ಥಿಗಳಿಗೆ ಹೆಚ್ಚುವರಿಯಾಗಿ ಪ್ರವೇಶ ನೀಡಲಾಗಿರುತ್ತದೆ ಎಂದು ತಿಳಿಸಿದರು.

2024–25ನೇ ಸಾಲಿನ ಆಯವ್ಯಯ ಘೋಷಣೆಯಂತೆ ಭೋಜನಾ ವೆಚ್ಚದ ದರವನ್ನು ಮಾಸಿಕ ಪ್ರತಿ ವಿದ್ಯಾರ್ಥಿಗೆ ರೂ 100/–ರಂತೆ ಹೆಚ್ಚಿಸಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳಲ್ಲಿನ ವಿದ್ಯಾರ್ಥಿಗಳಿಗೆ ರೂ. 1750/– ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿನ ವಿದ್ಯಾರ್ಥಿಗಳಿಗೆ ರೂ 1850/–ರ ದರಗಳಲ್ಲಿ ಉತ್ತಮ ಗುಣ ಮಟ್ಟದ ಆಹಾರವನ್ನು ನೀಡಲಾಗುತ್ತಿದೆ. ಮುಂದಿನ ದಿನಗಳಲ್ಲಿ ಈ ದರವನ್ನು ಹೆಚ್ಚಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

## 'ನಾವು ಕೌರವರ ಪರ ಅಲ್ಲ, ಪಾಂಡವರ ಪಕ್ಷಪಾತಿ'

ಬೆಂಗಳೂರು: "ನಾವು ಕೌರವರ ಪರ ಅಲ್ಲ, ಪಾಂಡವರ ಪಕ್ಷಪಾತಿ" ಹೀಗೆಂದು ಬಿಜೆಪಿ ಸದಸ್ಯರನ್ನುದ್ದೇಶಿಸಿ ಕಾಂಗ್ರೆಸ್ ಶಾಸಕ ಶಿವಲಿಂಗೇ ಗೌಡ ವಿಧಾನಸಭೆ ಯಲ್ಲಿಂದು ಪರೋಕ್ಷವಾಗಿ ವ್ಯಂಗ್ಯವಾಡಿದರು.

ಪ್ರಶ್ನೋತ್ತರ ಕಲಾಪದ ನಂತರ ಸಭಾಧ್ಯಕ್ಷ ಯು.ಟಿ. ಖಾದರ್ ಮಾತನಾಡಿ, ಈ ಬಾರಿ ಶಾಸಕರ ದಿನಾಚರಣೆ ನಡೆಸಲು ತೀರ್ಮಾನಿಸಲಾಗಿದೆ. ಶಾಸಕರ ಪ್ರತಿಭೆಯನ್ನು ಹೊರ ತರಲು ಇದು ಸೂಕ್ತ ವೇದಿಕೆಯಾಗಿದೆ. ಇದಕ್ಕಾಗಿ ಸಮಿತಿ ರಚಿಸಿದ್ದು, ಯಾವ ಯಾವ ಕ್ರೀಡೆಯಲ್ಲಿ ಭಾಗವಹಿಸುತ್ತೀರಿ ಎಂಬುದನ್ನು ತಿಳಿಸುವಂತೆ ಮನವಿ ಮಾಡಿದರು.

ಅಗ ಕಾಂಗ್ರೆಸ್‌ನ ಶಿವಲಿಂಗೇಗೌಡ ಮಧ್ಯ ಪ್ರವೇಶಿಸಿ ಬರೀ ಕ್ರೀಡೆಗಷ್ಟೇ ಆದ್ಯತೆಯಲ್ಲ. ಸಾಂಸ್ಕೃತಿಕ ಚಟುವಟಿಕೆಯೂ ಇರಬೇಕು ಎಂದರು. ಪ್ರತಿಪಕ್ಷ ನಾಯಕ ಆರ್. ಅಶೋಕ್ ಮಧ್ಯ ಪ್ರವೇಶಿಸಿ ಶಿವಲಿಂಗೇ ಗೌಡರಿಗೆ ಧುರ್ಯೋಧನನ ಪಾತ್ರ ಕೊಡಿ ಎಂದರು.

ಆಗ ಶಿವಲಿಂಗೇಗೌಡರು ನಾನು ಕೌರವರ ಪರ ಅಲ್ಲ. ಪಾಂಡವರ ಪರ ಎಂದಾಗ ಸದನ ನಗೆಗಡಲಲ್ಲಿ ತೇಲಿತು. ಕ್ರೀಡೆ ಜೊತೆಗೆ ಸಾಂಸ್ಕೃತಿಕ ಚಟುವಟಿಕೆಗಳಿಗೂ ಆದ್ಯತೆ ನೀಡಲಾಗುವುದು ಎಂದು ಸ್ಪೀಕರ್ ಹೇಳಿದರು.

## ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ತ್ರೀಫೇಸ್ ವಿದ್ಯುತ್

ಬೆಂಗಳೂರು: ರಾಜ್ಯದ ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ಹಗಲಿನ ವೇಳೆಯೇ ನಿರಂತರ 7 ಗಂಟೆಗಳ ಕಾಲ ತ್ರಿಫೇಸ್ ವಿದ್ಯುತ್‌ನ್ನು ಸರಬರಾಜು ಮಾಡಲಾಗುತ್ತಿದೆ ಎಂದು ಇಂಧನ ಸಚಿವ ಕೆ.ಜೆ. ಜಾರ್ಜ್ ವಿಧಾನಸಭೆಯಲ್ಲಿಂದು ಹೇಳಿದರು.

ಪ್ರಶ್ನೋತ್ತರ ಅವಧಿಯಲ್ಲಿ ಜೆಡಿಎಸ್‌ನ ಸಿ.ಬಿ. ಸುರೇಶ್‌ಬಾಬು ಅವರ ಪ್ರಶ್ನೆಗೆ ಉತ್ತರಿಸಿದ ಅವರು, ತಾಂತ್ರಿಕ ಸಾಧ್ಯತೆ ಇರುವ ಉಪಕೇಂದ್ರಗಳಿಂದ ನಿರಂತರ 7 ಗಂಟೆ ತ್ರಿಫೇಸ್ ವಿದ್ಯುತ್ ಸರಬರಾಜು ಮಾಡಲಾಗುವುದು. ತಾಂತ್ರಿಕ ಸಾಧ್ಯತೆ ಇಲ್ಲದಿರುವ ಉಪಕೇಂದ್ರಗಳಲ್ಲಿ ಪಾಳಿಯಲ್ಲಿ ಹಗಲಿನ ವೇಳೆ 4 ಗಂಟೆ ರಾತ್ರಿ ವೇಳೆ 3 ಗಂಟೆ ಒಟ್ಟು 7 ಗಂಟೆಗಳ ಕಾಲ ತ್ರೀಫೇಸ್ ವಿದ್ಯುತ್‌ನ್ನು ಸರಬರಾಜು ಮಾಡಲಾಗುತ್ತಿದೆ ಎಂದರು.

ಅಂತರ್ಜಲ ಕುಸಿತದ ಕಾರಣಗಳನ್ನು ಉಲ್ಲೇಖಿಸಿ ತ್ರಿಫೇಸ್ ವಿದ್ಯುತ್ ಸರಬರಾಜಿನ ಬ್ಯಾಚ್‌ಗಳನ್ನು ಸಮಯ ಬದಲಾಯಿಸಲು ಯಾವುದೇ ಕೋರಿಕೆ ಬಂದಿಲ್ಲ. ಈ ರೀತಿಯ ಸಮಯ ಬದಲಾವಣೆಯೂ ಸಾಧ್ಯವೇ ಇಲ್ಲ ಎಂದರು.

**48 ಗಂಟೆಗಳಲ್ಲಿ ಟಿಸಿ ಬದಲಾವಣೆ:**

ರಾಜ್ಯದ ಯಾವುದೇ ಕಡೆ ವಿದ್ಯುತ್ ಪರಿವರ್ತಕಗಳು (ಟಿಸಿ) ಸುಟ್ಟು ಹೋದ ಸಂದರ್ಭದಲ್ಲಿ ಅದನ್ನು 48 ಗಂಟೆಗಳಲ್ಲಿ ಬದಲಿಸಬೇಕು ಎಂದು ಸರ್ಕಾರ ಹೇಳಿದೆ. 48 ಗಂಟೆಗಳಲ್ಲಿ ಟಿಸಿ ಬದಲಾವಣೆ ಮಾಡದೆ ಹೋದರೆ ಅಲ್ಲಿನ ಅಧಿಕಾರಿ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಗ್ರಾಮಾಂತರ ಪ್ರದೇಶಗಳಲ್ಲಿ ವಿದ್ಯುತ್ ಪರಿವರ್ತಕಗಳ ಸಮಸ್ಯೆ ನೀಗಿಸಲು ವಿದ್ಯುತ್ ಪರಿವರ್ತಕಗಳ ಬ್ಯಾಂಕ್‌ನ್ನು ಮಾಡಲಾಗಿದೆ. ದುರಸ್ತಿ ಕಾರ್ಯಾಗಾರವೂ ಇಲ್ಲ ಎಲ್ಲೂ ಟಿಸಿಗಳ ಸಮಸ್ಯೆ ಇಲ್ಲ ಎಂದು ಅವರು ಹೇಳಿದರು.

ಗ್ರಾಮೀಣ ಭಾಗದಲ್ಲಿ ವಿದ್ಯುತ್ ಪರಿವರ್ತಕಗಳು ಸುಟ್ಟು ಹೋಗುವುದು ಮತ್ತಿತರ ಸಮಸ್ಯೆಗಳಿಗೆ ನೀರಾವರಿ ಪಂಪ್‌ಸೆಟ್‌ಗಳ ಅಕ್ರಮ ಸಕ್ರಮ ಮುಗಿದ ನಂತರ ಪರಿಹಾರ ಸಿಗುತ್ತದೆ ಎಂದು ಅವರು ಹೇಳಿದರು. ರಾಜ್ಯದಲ್ಲಿ ಒಟ್ಟು ನೀರಾವರಿ ಪಂಪ್‌ಸೆಟ್‌ಗಳ ಸಕ್ರಮಗಳಿಗೆ 4.5 ಲಕ್ಷ ಅರ್ಜಿಗಳು ಬಂದಿದ್ದು, ಈ ಪೈಕಿ 2.5 ಲಕ್ಷ ಪಂಪ್ ಸೆಟ್‌ಗಳನ್ನು ಸಕ್ರಮಗೊಳಿಸಲಾಗಿದೆ. ಇನ್ನೊಂದು ವರ್ಷದಲ್ಲಿ ಎಲ್ಲ ನೀರಾವರಿ ಪಂಪ್ ಸೆಟ್‌ಗಳ ಅಕ್ರಮ ಸಕ್ರಮ ಕಾರ್ಯಕ್ರಮ ಪೂರ್ಣಗೊಳ್ಳಲಿದೆ ಎಂದು ಸಚಿವ ಜಾರ್ಜ್ ಹೇಳಿದರು.

## ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಆರಂಭಕ್ಕೆ ತೀರ್ಮಾನ

ಬೆಂಗಳೂರು: ಉತ್ತರ ಕನ್ನಡದ ಕಾರವಾರದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ಆರಂಭಿಸುವ ಬಗ್ಗೆ ಸರ್ಕಾರ ಪರಿಶೀಲನೆ ನಡೆಸಿದ್ದು, ಸದ್ಯದಲ್ಲೇ ಆರ್ಥಿಕ ಇಲಾಖೆಯ ಅನುಮೋದನೆ ಪಡೆದು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಆರಂಭಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣ ಪ್ರಕಾಶ್ ಪಾಟೀಲ್ ವಿಧಾನಸಭೆಯಲ್ಲಿಂದು ಹೇಳಿದರು.



ಪ್ರಶ್ನೋತ್ತರ ಅವಧಿಯಲ್ಲಿ ಬಿಜೆಪಿಯ ದಿನಕರಶೆಟ್ಟಿ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಈಗಾಗಲೇ ಮೈಸೂರು, ಕಲಬುರಗಿ ಬೆಳಗಾವಿಯಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳನ್ನು ಆರಂಭಿಸಿ ಬಡವರಿಗೆ ಉಚಿತವಾಗಿ ಎಲ್ಲ ರೀತಿಯ ರೋಗಿಗಳಿಗೆ ಚಿಕಿತ್ಸೆ ನೀಡುವ ವ್ಯವಸ್ಥೆ ಮಾಡಿದ್ದೇವೆ. ರಾಜ್ಯದ ವಿವಿಧೆಡೆ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ಆರಂಭಿಸಬೇಕು ಎಂಬುದು ಸರ್ಕಾರದ ನೀತಿಯಾಗಿದೆ .ಹಾಗಾಗಿ ಕಾರವಾರದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಆರಂಭಿಸುವ ಬಗ್ಗೆ ಪರಿಶೀಲನೆ ನಡೆದಿದೆ ಎಂದರು.

ಕಾರವಾರದಲ್ಲಿ 450 ಹಾಸಿಗೆಗಳ ಆಸ್ಪತ್ರೆಯನ್ನು ಮುಂದಿನ ಎರಡು ತಿಂಗಳಲ್ಲಿ ಲೋಕಾರ್ಪಣೆ ಮಾಡಲಾಗುವುದು. ಈ ಆಸ್ಪತ್ರೆಯಲ್ಲಿ ಪ್ರತ್ಯೇಕ ಕ್ಯಾನ್ಸರ್ ಘಟವನ್ನು ಸ್ಥಾಪಿಸಲು ತಜ್ಞ ವೈದ್ಯಕೀಯ ಸಿಬ್ಬಂದಿಯನ್ನು ನೇಮಿಸಿಕೊಳ್ಳಲಾಗುತ್ತಿದೆ. ಇದು ಮುಂದಿನ ದಿನಗಳಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯಾಗಿ ಉನ್ನತೀಕರಣಗೊಳ್ಳಲು ಸಾಧ್ಯವಾಗಲಿದೆ. ಯಾವುದೇ ಕಡೆ ಸೂಪರ್ ಸ್ಪೆಷಾಲಿಟ ಆಸ್ಪತ್ರೆ ಆರಂಭಿಸಬೇಕಾದರೆ ಹಲವು ಪೂರಕ ಸೌಲಭ್ಯಗಳ ಅಗತ್ಯವಿರುತ್ತದೆ. ಅಲ್ಲಿ ವೈದ್ಯಕೀಯ ಕಾಲೇಜು ಇರಬೇಕು, ತಜ್ಞ ವೈದ್ಯರ ಲಭ್ಯತೆ, ಜಿಲ್ಲಾಸ್ಪತ್ರೆ ಇರಬೇಕು. ಹಾಗಾಗಿ ಕುಮುಟದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಆರಂಭಿಸಲು ಸಾಧ್ಯವಿಲ್ಲ. ಕಾರವಾರದಲ್ಲಿ ಆರಂಭಿಸುತ್ತೇವೆ ಎಂದರು.

ಕಾರವಾರ ಜಿಲ್ಲೆಗೆ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಅಗತ್ಯವಿರುವುದನ್ನು ಸರ್ಕಾರ ಮನಗಂಡಿದೆ. ಕಾರವಾರ ಜಿಲ್ಲೆಯವರು ಚಿಕಿತ್ಸೆಗೆ ಗೋವಾ ರಾಜ್ಯಕ್ಕೆ ತೆರಳಿದ ಸಂದರ್ಭದಲ್ಲಿ ಬಿಪಿಎಲ್ ಕಾರ್ಡ್ ಹೊಂದಿರುವವರು ಗೋವಾದಲ್ಲಿ ಚಿಕಿತ್ಸೆ ಪಡೆದರೂ ಸರ್ಕಾರ ಹಣ ನೀಡುತ್ತಿದೆ ಎಂದು ಅವರು ಹೇಳಿದರು.

ಕುಮಟಾದಲ್ಲಿ ಸೂಪರ್ ಸ್ಪಷಾಲಿಟಿ ಆಸ್ಪತ್ರೆ ಸ್ಥಾಪನೆ ಪರಿಶೀಲನೆಯಲ್ಲಿದೆ. ಪ್ರಸ್ತಾವನೆಯನ್ನು ತಿರಸ್ಕರಿಸಿಲ್ಲ. ಜಿಲ್ಲಾ ಕೇಂದ್ರದ ಹೊರ ಭಾಗದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಸ್ಥಾಪಿಸುವುದು ಕಷ್ಟವಾಗಲಿದೆ ಎಂದು ಸಚಿವ ಡಾ. ಶರಣ ಪ್ರಕಾಶ್ ಪಾಟೀಲ್ ಹೇಳಿದರು. ಶಾಸಕರ ಸಭೆ ಕರೆದು ಸಮಸ್ಯೆ ಬಗೆಹರಿಸಲು ಪ್ರಯತ್ನಿಸಲಾಗುವುದು ಎಂದು ಭರವಸೆ ನೀಡಿದರು.

## ಶೈಕ್ಷಣಿಕ ಪ್ರವಾಸಕ್ಕೆ ಒತ್ತು: ಎಚ್.ಕೆ.ಪಾಟೀಲ್

ಬೆಂಗಳೂರು: ಧಾರ್ಮಿಕ ಹೆಸರಿನಲ್ಲಿ ಶೈಕ್ಷಣಿಕ ಪ್ರವಾಸಕ್ಕೆ ವಿಶೇಷ ಒತ್ತು ನೀಡಲಾಗಿದೆ. ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿನ ದೇವಸ್ಥಾನಗಳಿಗೆ ಮೂಲಭೂತ ಅಭಿವೃದ್ಧಿಗೆ ಸಂಬಂಧಿಸಿದಂತೆ ಕೇಂದ್ರ ಪ್ರಾಸೋದ್ಯಮ ಇಲಾಖೆಯ ಪ್ರಸಾದ್ ಯೋಜನೆಯಡಿಲ್ಲಿ ಭರಿಸಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆಯ ಸಚಿವ ಎಚ್.ಕೆ.ಪಾಟೀಲ್ ವಿಧಾನಪರಿಷತ್ತಿಗಿಂದು ತಿಳಿಸಿದರು.



ಸದಸ್ಯ ಕಿಶೋರ್ ಕುಮಾರ್ ಪುತ್ತೂರ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಪವಿತ್ರ ಕ್ಷೇತ್ರಗಳಿಗೆ ಮೂಲಭೂತ ಸೌಕರ್ಯಗಳಾದ ಶೌಚಾಲಯ, ಕ್ಲೋಕ್ ರೂಮ್, ವಿಶ್ರಾಂತಿ ಕೊಠಡಿ, ಮಾಹಿತಿ ಫಲಕಗಳು ಸೈನೇಜ್‌ಗಳು, ಪ್ರವಾಸಿ ಮಾಹಿತಿ ಕೇಂದ್ರ, ಇಂಟರ್‌ಪ್ರಿಟೇಷನ್ ಕೇಂದ್ರಗಳು, ರಸ್ತೆಬದಿ ಸೌಲಭ್ಯ, ವಾಹನಗಳ ಪಾರ್ಕಿಂಗ್ ಸೌಲಭ್ಯ, ನೀರಿನ ಕಾರಂಜಿ, ಫೆನ್ ಸಿಂಗ್, ಲೈಟಿಂಗ್ಸ್, ಪಾಥ್ ವೇ, ಆಸನಗಳು, ಕುಡಿಯುವ ನೀರಿನ ಸೌಲಭ್ಯ ಕಸದ ಬುಟ್ಟಿಗಳು ಪ್ರಥಮ ಚಿಕಿತ್ಸಾ ಕೇಂದ್ರ, ಕಾವಲು ಗೋಪುರ, ಧ್ವನಿ ಮತ್ತು ಬೆಳಕು ರಂಗಮಂದಿರ, ಕರ ಕುಶಲ ಕೇಂದ್ರ, ಕ್ಯಾಫೇಟೇರಿಯಾ, ಹೆಲಿಪ್ಯಾಡ್, ಸಿಸಿಟಿವಿ, ಹೆರಿಟೇಜ್ ವಾಕ್ ಕೌಶಲ್ಯಾಭಿವೃದ್ಧಿ ತರಬೇತಿ ಮೊಬೈಲ್ ಅಪ್ಲಿಕೇಷನ್ ಅಭಿವೃದ್ಧಿ ಮುಂತಾದುವುಗಳನ್ನು ಅಭಿವೃದ್ಧಿಪಡಿಸುವ ಸಲುವಾಗಿ ಕೇಂದ್ರ ಸರ್ಕಾರದ ಪ್ರಸಾದ ಯೋಜನೆಯಡಿ ಮಂಜೂರು ಮಾಡಲು 16 ಪ್ರಸ್ತಾವನೆಗಳನ್ನು ಸಲ್ಲಿಸಲಾಗಿತ್ತು

ಆದರೆ ಬೆಳಗಾವಿಯ ಸವದತ್ತಿ ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನಕ್ಕೆ ರೂ 18.00 ಕೋಟಿ ಬೀದರ್ ನ ಪಾಪನಾಶಂಗೆ ರೂ 20.00 ಕೋಟಿ ಹಾಗೂ ಚಾಮುಂಡಿ ದೇವಸ್ಥಾನಕ್ಕೆ ರೂ 45.00 ಕೋಟಿಗಳು ಸೇರಿದಂತೆ ಒಟ್ಟು 3 ಪ್ರಸ್ತಾವನೆಗಳು ಪ್ರಸಾದ್ ಯೋಜನೆಯಡಿ ಮಂಜುರಾಗಿವೆ ಎಂದು ಸದನದಲ್ಲಿ ತಿಳಿಸಿದರು.

ಸರ್ಕಾರಕ್ಕೂ ಪವಿತ್ರ ಕ್ಷೇತ್ರಗಳನ್ನು ಅಭಿವೃದ್ಧಿಪಡಿಸುವ ಯೋಚನೆ ಇದೆ. ಪ್ರವಾಸಿ ಕ್ಷೇತ್ರಗಳು ಅಭಿವೃದ್ಧಿಯಾದರೆ ರಾಜ್ಯದ ಪ್ರಗತಿಯೂ ಸಹ ಹೆಚ್ಚುತ್ತದೆ. ಈ ನಿಟ್ಟಿನಲ್ಲಿ ಎಲ್ಲರೂ ಒಗ್ಗಟ್ಟಿನಿಂದ ಕೈಜೋಡಿಸಿ ಕಾರ್ಯ ನಿರ್ವಹಿಸುವುದು ಅಗತ್ಯ ಎಂದು ತಿಳಿಸಿದರು.

# ೯ರಂದು ವಿದ್ಯುತ್ ಕಡಿತ

ತುಮಕೂರು: ಬೆಸ್ಕಾಂ ನಗರ ಉಪ ವಿಭಾಗ–1ರ ವ್ಯಾಪ್ತಿಯಲ್ಲಿ ಎಂಎಸ್ ಬಿಲ್ಡಿಂಗ್‌ಗೆ ವಿದ್ಯುತ್ ಸಂಪರ್ಕ ನೀಡುವ ಕಾಮಗಾರಿ ಕೈಗೊಂಡಿರುವ ಹಿನ್ನೆಲೆಯಲ್ಲಿ ಮಾರ್ಚ್ 9ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ಬಾರ್ ಲೈನ್, ಕೆ.ಆರ್. ಬಡಾವಣೆ ಹಾಗೂ ಎಮ್.ಜಿ.ರಸ್ತೆಯ 3 ಮತ್ತು 4ನೇ ಕ್ರಾಸ್‌ನಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸಬೇಕೆಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಹೆಚ್.ಪಿ. ನಾಗರಾಜು ಮನವಿ ಮಾಡಿದ್ದಾರೆ.

# 'ಲಜ್ಜೆಗೆಟ್ಟ ಕಾಂಗ್ರೆಸ್ ಸರಕಾರ'



ಬೆಂಗಳೂರು: ಲಜ್ಜೆಗೆಟ್ಟ ಕಾಂಗ್ರೆಸ್ ಸರಕಾರ ಇಡುವ ಒಂದೊಂದು ಹೆಜ್ಜೆಯೂ ಬಡವರಿಗೆ ಮಾರಕವಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಟೀಕಿಸಿದ್ದಾರೆ.

ಗುರುವಾರದಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಪ್ರಶ್ನೆಗೆ ಉತ್ತರಿಸಿದರು. ಬಡವರು ಕಣ್ಣೀರು ಹಾಕುತ್ತಿದ್ದಾರೆ. ಈ ಸರಕಾರದ ಕ್ರಮಗಳು ರೈತರಿಗೆ ಶಾಪವಾಗಿ ಪರಿಣಮಿಸಿದೆ ಎಂದು ಆಕ್ಷೇಪಿಸಿದರು. ಗ್ಯಾರಂಟಿಗೆ ಹಣ ಕ್ರೋಢೀಕರಿಸಲು ಜನರ ಮೇಲೆ ಬರೆ ಎಳೆಯುತ್ತಿದ್ದಾರೆ ಎಂದು ತಿಳಿಸಿದರು. ಎರಡನೇ ಬಾರಿಗೆ ಇದೀಗ ಹಾಲಿನ ದರ ಏರಿಸುತ್ತಿದ್ದಾರೆ. ಹಿಂದಿನ ಬಿಜೆಪಿ ಸರಕಾರವು ಹೈನುಗಾರರಿಗೆ ಪ್ರೋತ್ಸಾಹಧನ ನೀಡುತ್ತಿತ್ತು. ಆದರೆ, ಕಾಂಗ್ರೆಸ್ ಸರಕಾರವು ಹೈನುಗಾರರ ಪ್ರೋತ್ಸಾಹ ಧನ 700–800 ಕೋಟಿ ಬಾಕಿ ಉಳಿಸಿಕೊಂಡಿದೆ ಎಂದರು. ಸರಕಾರವು ಜನವಿರೋಧಿ ನೀತಿ ಅನುಸರಿಸುತ್ತಿದೆ ಎಂದು ಹೇಳಿದರು.

ಪ್ರಿಯಾಂಕ್ ಖರ್ಗೆಯವರು ಬುರುಡೆ ಬಿಡುತ್ತಿದ್ದಾರೆ. ಬೇರೆ ರಾಜ್ಯಗಳಲ್ಲಿ ಎಸ್‌ಸಿ, ಎಸ್‌ಟಿ ಹಣವನ್ನು ಅನ್ಯ ಉದ್ದೇಶಕ್ಕೆ ಬಳಸಿದ್ದರೆ ವಿಪಕ್ಷವಾದ ಇವರೇನು ಕತ್ತೆ ಕಾಯುತ್ತಿದ್ದಾರಾ? ಪ್ರಶ್ನೆ ಮಾಡಲಿ ಎಂದು ಈ ಸಂಬಂಧ ಪ್ರಶ್ನೆಗೆ ಉತ್ತರ ನೀಡಿದರು. ಇಲ್ಲಿ ತಮ್ಮ ಹುಳುಕು ಮುಚ್ಚಿ ಹಾಕಿಕೊಳ್ಳುವ ಸಲುವಾಗಿ ಬುರುಡೆ ಬಿಡುತ್ತಾರೆಯೇ ಹೊರತು ಅದರಲ್ಲಿ ಸತ್ಯ ಇದೆ ಎಂದು ನನಗೆ ಅನಿಸುತ್ತಿಲ್ಲ ಎಂದು ತಿಳಿಸಿದರು.

# 'ಇ-ಖಾತಾ ಸದುಪಯೋಗಪಡಿಸಿಕೊಳ್ಳಿ'

ಕೋಲಾರ: ಬಂಗಾರಪೇಟೆ ಪುರಸಭೆ ವ್ಯಾಪ್ತಿಯ ಆಸ್ತಿಗಳ ಮಾಲೀಕರುಗಳು ಪುರಸಭೆ ವತಿಯಿಂದ ಆಯೋಜಿಸಿರುವ ವಾರ್ಡ್‌ವಾರು ಇ–ಖಾತಾ ಅಭಿಯಾನ ದಡಿಯಲ್ಲಿ ಭಾಗವಹಿಸಿ, ತಮ್ಮ–ತಮ್ಮ ಆಸ್ತಿಗಳಿಗೆ ಸಂಬಂಧಿಸಿದಂತೆ ಇ–ಖಾತಾ ಪ್ರತಿಗಳನ್ನು ಪಡೆಯಿರಿ ಎಂದು ಬಂಗಾರಪೇಟೆ ಪುರಸಭೆಯ ಮುಖ್ಯಾಧಿಕಾರಿ ಕರೆ ನೀಡಿದ್ದಾರೆ.

ಪುರಸಭೆ ಕಾರ್ಯಾಲಯದ ವತಿಯಿಂದ ಅಧಿಕೃತ, ಅನಧಿಕೃತ ಆಸ್ತಿಗಳಿಗೆ ನೀಡಲಾಗುವ ಇ–ಖಾತಾ ನಮೂನೆಗಳಿಗೆ ಸಂಬಂಧಿಸಿದಂತೆ, ಮಾಲೀಕತ್ವದ ದಾಖಲೆಗಳಾದ ನೋಂದಾಯಿತ ಪತ್ರಗಳು, ಚಾಲ್ತಿ ಸಾಲಿನವರೆಗೆ ಕಂದಾಯ ಪಾವತಿ ರಸೀದಿ, ಋಣಭಾರ ಪ್ರಮಾಣ ಪತ್ರ, ಮಾಲೀಕರ ಪೋಟೋ, ಆಸ್ತಿ ಭಾವಚಿತ್ರ ಹಾಗೂ ಸರ್ಕಾರದಿಂದ ವಿತರಿಸಿದ ಯಾವುದೇ ಬಗೆಯ ಗುರುತಿನ ಚೀಟಿಯನ್ನು ಹಾಜರುಪಡಿಸಿ ಇ–ಖಾತಾಯನ್ನು ಪಡೆಯಬಹುದು.

ಪುರಸಭಾ ವ್ಯಾಪ್ತಿಯಲ್ಲಿ ನಡೆಯುವ ಇ–ಖಾತಾ ಆಂದೋಲನದ ಸದುಪಯೋಗ ಪಡೆದುಕೊಳ್ಳಬೇಕು ಹಾಗೂ ಅರ್ಜಿಗಳನ್ನು ಬೆಳಗ್ಗೆ 8 ರಿಂದ ಮಧ್ಯಾಹ್ನ 4 ಗಂಟೆಯವರೆಗೆ ಕಚೇರಿಯಲ್ಲಿ ಸಲ್ಲಿಸಬಹುದು. ನೋಂದಾಯಿತ ಮಾರಾಟ ಪತ್ರದಾನ, ಪತ್ರವಿಭಾಗ ಪತ್ರಗಳನ್ನು ಹಾಜರುಪಡಿಸಿ ಬಿ–ಖಾತಾ ಪ್ರತಿಗಳನ್ನು ಪಡೆಯಬಹುದು. ಸಾರ್ವಜನಿಕರು ಈ ಆಂದೋಲನದ ವ್ಯವಸ್ಥೆಯನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ತಿಳಿಸಿದ್ದಾರೆ.

# ೯ ರಂದು ಬಳ್ಳಾರಿ ಪೊಲೀಸ್ ರನ್



ಬಳ್ಳಾರಿ: ಕರ್ನಾಟಕ ರಾಜ್ಯ ಪೊಲೀಸ್ ರನ್–2025 ಕಾರ್ಯಕ್ರಮ ಅಂಗವಾಗಿ ಸದೃಢತೆ, ಡ್ರಗ್ಸ್ ಮುಕ್ತ ಕರ್ನಾಟಕ ನಿರ್ಮಾಣಕ್ಕಾಗಿ ಬಳ್ಳಾರಿ ಜಿಲ್ಲಾ ಪೊಲೀಸ್ ವತಿಯಿಂದ ಇದೇ 9 ರಂದು ಬೆಳಗ್ಗೆ 7 ಗಂಟೆಗೆ ನಗರದ ಕನಕ ದುರ್ಗಮ್ಮ ದೇವಸ್ಥಾನದ ಆವರಣದಲ್ಲಿ ಬಳ್ಳಾರಿ ಪೊಲೀಸ್ ರನ್–2025 ಕಾರ್ಯಕ್ರಮ ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ವಿಜೇತರಿಗೆ ಆಕರ್ಷಕ ನಗದು ಬಹುಮಾನ ಮತ್ತು ಪ್ರಮಾಣ ಪತ್ರ ನೀಡಲಾಗುತ್ತದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಜಿಲ್ಲಾ ಪೊಲೀಸ್ ಅಧೀಕ್ಷಕ ಡಾ. ಶೋಭಾರಾಣಿ ವಿ.ಜೆ ತಿಳಿಸಿದ್ದಾರೆ.

ಓಟವು ಕನಕದುರ್ಗಮ್ಮ ದೇವಸ್ಥಾನದ ಆವರಣದಿಂದ ಆರಂಭವಾಗಿ ಗಡಿಗಿ ಚೆನ್ನಪ್ಪ ವೃತ್ತ, ಹೆಚ್.ಆರ್. ಗವಿಯಪ್ಪ ವೃತ್ತ, ಡಾ.ಬಿ.ಆರ್. ಅಂಬೇಡ್ಕರ್ ವೃತ್ತ, ವಾಲ್ಮೀಕಿ (ಎಸ್.ಪಿ) ವೃತ್ತ, ತಾಳೂರು ರಸ್ತೆ ಕ್ರಾಸ್ ಮೂಲಕ ಮರಳಿ ಕನಕದುರ್ಗಮ್ಮ ದೇವಸ್ಥಾನ ಆವರಣದವರೆಗೆ ನಡೆಯಲಿದೆ ಎಂದು ತಿಳಿಸಿದ್ದಾರೆ.

# ೮ರಂದು ಮಹಿಳಾ ಸ್ನೇಹಿ ಗ್ರಾಮ ಪಂಚಾಯತಿ ಅಭಿಯಾನ



ಬೆಂಗಳೂರು: ಮಹಿಳಾ ಸಶಕ್ತೀಕರಣ ಹಾಗೂ ಸ್ಥಳೀಯ ಆಡಳಿತದಲ್ಲಿ ಮಹಿಳೆಯರ ಸಕ್ರಿಯ ಭಾಗವಹಿಸುವಿಕೆಗಾಗಿ ಅಂತರರಾಷ್ಟ್ರೀಯ ಮಹಿಳಾ ದಿನವಾದ 2025ರ ಇದೇ 8ರಿಂದ ಜೂನ್ 30ರವರೆಗೆ ಮಹಿಳಾ ಸ್ನೇಹಿ ಗ್ರಾಮ ಪಂಚಾಯತಿ ಅಭಿಯಾನ ಮತ್ತು ಮಹಿಳಾ ಗ್ರಾಮ ಸಭೆಗಳನ್ನು ನಡೆಸಲು ಸೂಚಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಕರ್ನಾಟಕ ಗ್ರಾಮಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 3–ಹೆಚ್ ಅನ್ವಯ ಮಹಿಳೆಯರಿಗಾಗಿ ಗ್ರಾಮ ಸಭೆಗಳನ್ನು ಆಯೋಜಿಸಲು ಅವಕಾಶ ಕಲ್ಪಿಸಲಾಗಿದೆ. ಗ್ರಾಮ ಪಂಚಾಯತಿಗಳಲ್ಲಿ ಸ್ಥಳೀಯ ಮಹಿಳಾ ಸ್ವಸಹಾಯ ಹಾಗೂ ಸ್ತ್ರೀ ಶಕ್ತಿ ಸಂಘಗಳ ಸಹಭಾಗಿತ್ವದಲ್ಲಿ ಪೂರ್ವ ಸಿದ್ಧತೆಯೊಂದಿಗೆ ಮಹಿಳೆಯರಿಗಾಗಿ ವಿಶೇಷ ಕಾರ್ಯಕ್ರಮ, ಚಟುವಟಿಕೆಗಳನ್ನು ಆಯೋಜಿಸಿ, ಅರ್ಥಪೂರ್ಣವಾಗಿ ಮಹಿಳಾ ಗ್ರಾಮ ಸಭೆಗಳನ್ನು ನಡೆಸಬೇಕೆಂದು ಸಚಿವರು ಹೇಳಿದ್ದಾರಲ್ಲದೆ, ಮಹಿಳೆಯರಿಂದ ಬರುವ ಬೇಡಿಕೆ, ಸಮಸ್ಯೆ ಹಾಗೂ ಪ್ರಶ್ನೆಗಳಿಗೆ ಸಂಬಂಧಿಸಿದ ಇಲಾಖೆಗಳು ಸ್ಪಂದಿಸುವ ಮೂಲಕ ಮಹಿಳಾ ಸ್ನೇಹಿ ಗ್ರಾಮ ಪಂಚಾಯತಿ ಅಭಿಯಾನವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕೆಂದು ಹೇಳಿದ್ದಾರೆ.

ಗ್ರಾಮ ಪಂಚಾಯತಿ ಅಭಿಯಾನ ನಡೆಸುವ ಹಿನ್ನಲೆ ಪೂರ್ವಭಾವಿಯಾಗಿ ಮಹಿಳೆಯರು ಮತ್ತು ಮಕ್ಕಳಿಗೆ ಸಂಬಂಧಿಸಿದ ಉಪ ಸಮಿತಿಗಳ ಸಭೆಗಳನ್ನು ನಡೆಸಲು ಸೂಚಿಸಲಾಗಿದೆ. ಪ್ರತಿ ಗ್ರಾಮದ ಮಹಿಳೆಯರ ಅಂಕಿ–ಸಂಖ್ಯೆಯ ವಿವರಗಳನ್ನು ಸಂಗ್ರಹಿಸಿ ಮಹಿಳಾ ಗ್ರಾಮಸಭೆಯಲ್ಲಿ ಮಂಡಿಸಬೇಕು ಗ್ರಾಮಗಳಲ್ಲಿನ ಎಲ್ಲಾ ಸ್ವಸಹಾಯ ಸ್ತ್ರೀ ಶಕ್ತಿ ಸಂಘಗಳ ಸದಸ್ಯರು, ಸ್ವ–ಸಹಾಯ ಸಂಘಗಳ ಎಲ್ಲಾ ಸದಸ್ಯರು ಮಹಿಳಾ ಗ್ರಾಮ ಸಭೆಗಳಲ್ಲಿ ಸಕ್ರಿಯವಾಗಿ ಭಾಗವಹಿಸುವಂತೆ ಖಾತರಿ ಪಡಿಸಿಕೊಳ್ಳಬೇಕು ಎಂದು ನಿರ್ದೇಶಿಸಿದ್ದಾರೆ. ಮಹಿಳಾಸ್ನೇಹಿ ಗ್ರಾ.ಪಂ. ಅಭಿಯಾನದ 16 ವಾರಗಳ ಅವಧಿಯಲ್ಲಿ ವಾರಕ್ಕೊಂದರಂತೆ ಸಾಂಸ್ಕೃತಿಕ, ಮನರಂಜನೆ, ಕ್ರೀಡೆ, ಆರೋಗ್ಯ, ಪೌಷ್ಟಿಕಾಂಶ, ನೈರ್ಮಲ್ಯ, ಮಹಿಳಾ ಕಾನೂನುಗಳು ಮುಂತಾದ ವಿಷಯಗಳನ್ನು ಕಾರ್ಯಕ್ರಮಗಳನ್ನು ಆಯೋಜಿಸಲು ಸಚಿವರು ಸೂಚಿಸಿದ್ದಾರೆ. ಗ್ರಾಮಸಭೆ ನಡೆಸುವ ಸಮಯದಲ್ಲಿ ಆರೋಗ್ಯ ಶಿಬಿರ, ವಸ್ತು ಪ್ರದರ್ಶನ, ಸಸಿ ನೆಡುವ ಕಾರ್ಯಕ್ರಮ ಏರ್ಪಾಡು ಮಾಡಲು ಸಚಿವರು ಸಲಹೆ ನೀಡಿದ್ದಾರೆ.

# ಸೈಬರ್ ಅಪರಾಧಗಳ ತಡೆಗೆ ಹೆಚ್ಚು ಒತ್ತು: ಪರಂ



ಬೆಂಗಳೂರು: ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹಾಳು ಮಾಡುವಂತ ಘಟನೆಗಳು ನಡೆಯದಂತೆ ಮುಂಗಡ ಮಾಹಿತಿ ಕಲೆಹಾಕಿ ಅಹಿತಕರ ಘಟನೆಗಳು ನಡೆಯದಂತೆ ಸೂಕ್ತ ನಿಗಾವಹಿಸಲು ಅಗತ್ಯ ಕ್ರಮಗಳ ಜಾರಿ ಮಾಡಲಾಗಿದೆ. ತಪ್ಪಿತಸ್ಥರನ್ನು ಶಿಕ್ಷಿಸಲು ಪೊಲೀಸ್ ಇಲಾಖೆ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಂಡಿದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ ತಿಳಿಸಿದರು.

ಗುರುವಾರ ವಿಧಾನ ಪರಿಷತ್ತಿನ ಪ್ರಶ್ನೋತ್ತರ ಕಲಾಪದ ವೇಳೆ ವಿಧಾನ ಪರಿಷತ್ ಸದಸ್ಯ ಎಸ್.ಎಲ್. ಭೋಜೇಗೌಡ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ವೀಲ್ಹಿಂಗ್ ಮಾಡುವಂತಹ ಮತ್ತು ಕೈಯಲ್ಲಿ ಚಾಕು, ಚೂರಿ, ಲಾಂಗ್ ಹಿಡಿದುಕೊಂಡು ಓಡಾಡುತ್ತಾ ಸಮಾಜದಲ್ಲಿ ಶಾಂತಿ ಕದಡುತಿರುವುದು ಕಂಡುಬಂದಲ್ಲಿ ಅಂತಹವರನ್ನು ದಸ್ತಗಿರಿ ಮಾಡಿ ಬಂಧಿಸಲಾಗುವುದು ಹಾಗೂ ಕಾನೂನಿನ ರೀತ್ಯ ಕ್ರಮಗಳನ್ನು ಜರುಗಿಸಲಾಗುವುದು ಎಂದು ತಿಳಿಸಿದರು. ಶಾಂತಿ ಹಾಳು ಮಾಡುವ ಉದ್ದೇಶದಿಂದ ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ಸುದ್ದಿ ಹಬ್ಬಿಸಿ ಗಲಭೆ ಸೃಷ್ಟಿಸುವವರ ವಿರುದ್ಧ ಸ್ವಯಂ ಪ್ರೇರಿತವಾಗಿ ಪ್ರಕರಣಗಳನ್ನು ದಾಖಲಿಸಿಕೊಂಡು ಸಾರ್ವಜನಿಕರ ನೆಮ್ಮದಿಯನ್ನು ಕಾಪಾಡಲಾಗುತ್ತಿದೆ.

ರಾಜ್ಯದ ಪೊಲೀಸ್ ಠಾಣೆಗಳಲ್ಲಿ ಬೀಟ್ ವ್ಯವಸ್ಥೆ ಮಾಡಲಾಗಿದೆ. ಬೀಟ್ ಉಸ್ತುವಾರಿ ಅಧಿಕಾರಿಗಳನ್ನು ನೇಮಕ ಮಾಡಿ, ಯಾವುದೇ ಅಪರಾಧ ಜರುಗದಂತೆ ನಿಗಾವಹಿಸಲಾಗುತ್ತಿದೆ. ಒಂದು ವೇಳೆ ಪೊಲೀಸ್ ಅಧಿಕಾರಿ, ಸಿಬ್ಬಂದಿಗಳ ಕರ್ತವ್ಯ ನಿರ್ಲಕ್ಷ್ಯತೆಯಿಂದಾಗಿ ಅಪರಾಧ ಕೃತ್ಯಗಳು ಜರುಗಲು ಕಾರಣವಾಗಿದ್ದಲ್ಲಿ ಸಂಬಂಧಪಟ್ಟ ಅಧಿಕಾರಿ, ಸಿಬ್ಬಂದಿಗಳ ವಿರುದ್ಧ ಶಿಸ್ತು ಕ್ರಮಗಳನ್ನು ಜರುಗಿಸಲಾಗುತ್ತದೆ. ಪದೇ ಪದೇ ಅಪರಾಧ ಕೃತ್ಯಗಳಲ್ಲಿ ತೊಡಗಿರುವ ರೌಡಿಗಳ ಬಗ್ಗೆ ನಿಗಾವಹಿಸಿ ಅವರುಗಳ ವಿರುದ್ಧ ಸುಮೊಟೋ ಪ್ರಕರಣಗಳನ್ನು ದಾಖಲಿಸಿ ಗಡಿಪಾರು ಮಾಡುವಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ. ಸುಸಜ್ಜಿತವಾದ ಶಿಸ್ತು ಕರ್ತವ್ಯವನ್ನು ನಿರ್ವಹಿಸಲು ನಗರದಲ್ಲಿ ಹೊಯ್ಸಳ ವಾಹನವನ್ನು ಮತ್ತು ಚೀತಾ ವಾಹನಗಳನ್ನು ನಿಯೋಜಿಸಲಾಗಿದೆ. ಈ ಮೂಲಕ ನಗರದ ಯಾವುದೇ ಸ್ಥಳದಿಂದ 112 ಸಂಖ್ಯೆಗೆ ಕರೆ ಮಾಡಿದಲ್ಲಿ ಕೆಲವೇ ನಿಮಿಷಗಳ ಒಳಗಾಗಿ ಆಸ್ಥಳವನ್ನು ತಲುಪಿ ನೊಂದ ವ್ಯಕ್ತಿಗೆ ನ್ಯಾಯ ಕೊಡಿಸುವ ಹಾಗೂ ಅಪರಾಧ ಕೃತ್ಯವನ್ನು ತಡೆಯುವ ಯೋಜನೆಯನ್ನು ರೂಪಿಸಲಾಗಿದೆ.

ಇತ್ತೀಚೆಗೆ ಸೈಬರ್ ಅಪರಾಧ ಹೆಚ್ಚಗುತ್ತಿದ್ದು, ತಡೆಗಟ್ಟುವ ನಿಟ್ಟಿನಲ್ಲಿ ಹೆಚ್ಚು ಒತ್ತು ನೀಡಲಾಗಿದೆ. ಈ ಸಂಬಂಧ ಡೈರೆಕ್ಟರ್ ಜನರಲ್ ಆಫ್ ಪೊಲೀಸ್ ಹುದ್ದೆಯನ್ನು ಪ್ರತ್ಯೇಕವಾಗಿ ಸೃಜಿಸಲಾಗಿದೆ. ಡಿಜಿ ಅವರ ಕೆಳಗೆ ಎಡಿಜಿಪಿ, ಐಜಿಪಿ ಹಾಗೂ 7 ಜನ ಎಸ್‌ಪಿಗಳು ಸೇರಿದಂತೆ, ಇತರೆ ಪೊಲೀಸ್ ಅಧಿಕಾರಿಗಳು ಕಾರ್ಯ ನಿರ್ವಹಿಸುತ್ತಾರೆ. ಸೈಬರ್ ಅಪರಾಧಗಳ ಬಗ್ಗೆ ದೂರುಗಳನ್ನು ಸ್ವೀಕರಿಸಿ ಸೂಕ್ತ ಕ್ರಮ ವಹಿಸಲಾಗುತ್ತಿದೆ ಎಂದು ತಿಳಿಸಿದರು.

# ಮುಷ್ಕರ ಹಿಂದಕ್ಕೆ ಪಡೆದ ನೀರು ಸರಬರಾಜುದಾರರು



ಬಳ್ಳಾರಿ: ಹಲವಾರು ಬೇಡಿಕೆಗಳನ್ನು ಮುಂದಿಟ್ಟುಕೊಂಡು ಕಳೆದ ಮೂರು ದಿನಗಳಿಂದ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಅನಿರ್ದಿಷ್ಟಾವಧಿ ಮುಷ್ಕರ ಕೈಗೊಂಡಿದ್ದ ನೀರು ಸರಬರಾಜುದಾರರು ಗುರುವಾರ ಮುಷ್ಕರವನ್ನು ತಾತ್ಕಾಲಿಕವಾಗಿ ಹಿಂದಕ್ಕೆ ಪಡೆದಿದ್ದಾರೆ.

ನಗರ ಶಾಸಕರು, ಮಹಾಪೌರರು, ಜಿಲ್ಲಾಧಿಕಾರಿಗಳು ಹಾಗೂ ಆಯುಕ್ತರ ಮನವಿ ಮೇರೆಗೆ ನಗರ ನೀರು ಸರಬರಾಜು ನೌಕರರು ಈ ಮುಷ್ಕರವನ್ನು ಹಿಂಪಡೆದಿದ್ದಾರೆ ಎಂದು ತಿಳಿಸಿದರು.

ಬಿಸಿಲಿನ ತಾಪ ಹೆಚ್ಚಾಗಿರುವು ದರಿಂದ ಸಾರ್ವಜನಿಕರಿಗೆ ನೀರಿನ ಸಮಸ್ಯೆಯಾಗುತ್ತದೆ. ನಿಮ್ಮ ಮುಷ್ಕರಕ್ಕೆ ಬೆಂಬಲ ಕೊಡುತ್ತೇವೆ. ಸರ್ಕಾರದ ಮಟ್ಟದಲ್ಲಿಯೂ ಸಹ ಬಗೆಹರಿಸುತ್ತೇವೆಂದು ಭರವಸೆಯನ್ನು ಕೊಟ್ಟಿದ್ದರಿಂದ ಸಾರ್ವಜನಿಕರ ಹಿತದೃಷ್ಟಿಯಿಂದ ಮೂರು ದಿನಗಳ ಅನಿರ್ದಿಷ್ಟ ಅವಧಿ ಮುಷ್ಕರವನ್ನು ತಾತ್ಕಾಲಿಕವಾಗಿ ಹಿಂಪಡೆದಿದ್ದೇವೆ ಎಂದು ತಿಳಿಸಿದ್ದಾರೆ.ಮುಂದಿನ ದಿನಗಳಲ್ಲಿ ನಮ್ಮ ಬೇಡಿಕೆಗಳನ್ನು ಈಡೇರಿಸದಿದ್ದರೆ ರಾಜ್ಯ ಮಟ್ಟದ ಅಧ್ಯಕ್ಷರು, ಪದಾಧಿಕಾರಿಗಳ ತೀರ್ಮಾನದ ಮೇರೆಗೆ ಮುಷ್ಕರವನ್ನು ಮತ್ತೆ ಹಮ್ಮಿಕೊಳ್ಳುತ್ತೇವೆ ಎಂದು ನೀರು ಸರಬರಾಜು ನೌಕರರ ಅಧ್ಯಕ್ಷ ಟಿ.ಎಸ್. ಮಾರಪ್ಪ, ಉಪಾಧ್ಯಕ್ಷ ಅಂಜಿ ರೆಡ್ಡಿ, ಗೋಪಿ, ಕೆ. ಶ್ರೀನಿವಾಸಲು, ರಾಮಸ್ವಾಮಿ, ಲೋಕೇಶ್, ದಶರಥ್, ಹುಲಗಪ್ಪ, ಜಿಟಿ ಕೃಷ್ಣ, ಎನ್ ನಾಗರಾಜ, ಶರಣಪ್ಪ, ರಾಮಾಂಜನಿ ರವಿ ಪ್ರಸಾದ್ ಹೇಳಿದ್ದಾರೆ.

# ಹಸಿರು ಬಟಾಣಿ ಅಸುರಕ್ಷಿತ

ಬೆಂಗಳೂರು: ಕರಿದ ಹಸಿರು ಬಟಾಣಿಯಲ್ಲಿ ಕೃತಕ ಬಣ್ಣ ಪತ್ತೆಗೆ ಸಂಬಂಧಿಸಿದಂತೆ ಆಹಾರ ಸುರಕ್ಷತೆ ಮತ್ತು ಔಷಧ ಗುಣಮಟ್ಟ ಇಲಾಖೆ ಅಧಿಕಾರಿಗಳು ಕರಿದ ಹಸಿರು ಬಟಾಣಿಗಳಲ್ಲಿ 96 ಕರಿದ ಹಸಿರು ಬಟಾಣಿ ಮಾದರಿಗಳನ್ನು ವಿಶ್ಲೇಷಣೆಗೆ ಒಳಪಡಿಸಿದ್ದು, ಅವುಗಳಲ್ಲಿ 64 ಮಾದರಿಗಳು ಅಸುರಕ್ಷಿತ ಎನ್ನುವುದು ದೃಢಪಟ್ಟಿದೆ.

ಈವರೆಗೆ 114 ಹಸಿರು ಬಟಾಣಿಗಳಲ್ಲಿ ಮಾದರಿಗಳನ್ನು ಸಂಗ್ರಹಿಸಿ, ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ. ಅವುಗಳಲ್ಲಿ 96 ವಿಶ್ಲೇಷಣೆ ಪೂರ್ಣಗೊಂಡಿದೆ. ಉಳಿದ ಮಾದರಿಗಳ ವಿಶ್ಲೇಷಣಾ ಪ್ರಕ್ರಿಯೆ ಪ್ರಗತಿಯಲ್ಲಿದೆ. ಪ್ರಯೋಗಾಲಯದ ವರದಿಗಳ ಆಧಾರ ಮುಂದಿನ ಕಾನೂನು ಕ್ರಮಗಳನ್ನು ಜರುಗಿಸಲಾಗುತ್ತದೆ ಎಂದು ಇಲಾಖೆ ಆಯುಕ್ತರು ತಿಳಿಸಿದ್ದಾರೆ.

# ಪಂಚ ಗ್ಯಾರಂಟಿಗಳ ಅನುಷ್ಠಾನದಲ್ಲಿ ವಿಫಲ: ಜೆಡಿಎಸ್



ಬಳ್ಳಾರಿ: ಎರಡು ವರ್ಷಗಳಿಂದ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾದಲ್ಲಿ ಸಂಪೂರ್ಣವಾಗಿ ವಿಫಲವಾಗಿದೆ ಎಂದು ಆರೋಪಿಸಿ ಗುರುವಾರದಂದು ಜೆಡಿಎಸ್ ಪಕ್ಷದಿಂದ ರ್‍ಯಾಲಿ ನಡೆಸಲಾಯಿತು.

ಪಕ್ಷದ ಜಿಲ್ಲಾಧ್ಯಕ್ಷ ಮೀನಳ್ಳಿ ತಾಯಣ್ಣ ನೇತೃತ್ವದಲ್ಲಿ ಜೆಡಿಎಸ್ ಕಚೇರಿಯಿಂದ ಜಿಲ್ಲಾಧಿಕಾರಿಗಳ ಕಚೇರಿವರೆಗೆ ರ್‍ಯಾಲಿ ನಡೆಸಿದ ಮುಖಂಡರು ರೈತರ ಆತ್ಮಹತ್ಯೆ ಹಾಗೂ ಕಾನೂನು ಸುವ್ಯವಸ್ಥೆ ಗೊಂಡಿದೆ. ಕಾಂಗ್ರೆಸ್ ಚುನಾವಣ ಪ್ರಣಾಳಿಕೆಯಲ್ಲಿ ಘೋಷಿಸಿದಂತೆ ಗೃಹಲಕ್ಷ್ಮಿ, ಗೃಹಜ್ಯೋತಿ, ಶಕ್ತಿ, ಅನ್ನಭಾಗ್ಯ ಹಾಗೂ ಯುವನಿಧಿ ಯೋಜನೆಗಳ ಅನುಷ್ಠಾನದಲ್ಲಿ ವೈಫಲ್ಯವಾಗಿದೆ. ಫೈನಾನ್ಸ್ ಹಾವಳಿಯಿಂದ ಆತ್ಮಹತ್ಯೆಗೆ ಶರಣಾಗುತ್ತಿರುವ ಸಾಲಗಾರರ ಕುಟುಂಬಗಳ ದಾರುಣ ಸ್ಥಿತಿ ಹೇಳತೀರದು ಎಂದು ಶೋಕ ವ್ಯಕ್ತಪಡಿಸಿದ್ದಾರೆ.

ಗೃಹಜ್ಯೋತಿ ಯೋಜನೆಯಡಿ ಸ್ಥಿರವಾದ ಮತ್ತು ನಿರಂತರ ವಿದ್ಯುತ್ ಸೌಲಭ್ಯವನ್ನು ಸಂಬಂಧಿಸಿದ ವಿದ್ಯುತ್ ವಿತರಣ ಕಂಪನಿಗಳು ಒದಗಿಸುತ್ತಿಲ್ಲ. ಗ್ರಾಹಕರಿಗೆ ಬೆಲೆ ಏರಿಕೆ ಬಿಸಿ ತಾಕಿದೆ. ಗೃಹಲಕ್ಷ್ಮಿ ಯೋಜನೆಯಡಿ ಅರ್ಹ ಫಲಾನುಭವಿಗಳ ಖಾತೆಗಳಿಗೆ 7517 ಕೋಟಿ ರೂ. ವರ್ಗಾವಣೆ ಮಾಡಬೇಕಿದ್ದು, ಈ ಹಣವನ್ನು ರಾಜ್ಯ ಸರ್ಕಾರ ಇದುವರೆಗೂ ವರ್ಗಾಯಿಸಿಲ್ಲ. ಅನ್ನಭಾಗ್ಯ ಯೋಜನೆಯಡಿ ಅಂತ್ಯೋದಯ ಹಾಗೂ ಬಿಪಿಎಲ್ ಕಾರ್ಡ್ ಕುಟುಂಬಗಳ ಸದಸ್ಯರಿಗೆ 5 ತಿಂಗಳಿನಿಂದ ಬಿಡುಗಡೆ ಮಾಡಬೇಕಾಗಿರುವ 5788 ಕೋಟಿ ರೂ. ಫಲಾನುಭವಿಗಳ ಖಾತೆಗೆ ವರ್ಗಾಯಿಸಿಲ್ಲ. ಯುವನಿಧಿ ಯೋಜನೆಯನ್ನು ಸಕ್ರಿಯವಾಗಿ ಅನುಷ್ಠಾನಗೊಳಿಸುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದ್ದು, ಯುವಕ–ಯುವತಿಯರ ಬದುಕಿನಲ್ಲಿ ಸರ್ಕಾರ ಚೆಲ್ಲಾಟವಾಡುತ್ತಿದೆ ಎಂದು ಆರೋಪಿಸಿ ಪ್ರತಿಭಟನೆ ನಡೆಸಲಾಯಿತು.

ಶಕ್ತಿ ಯೋಜನೆಯಡಿ ವಿದ್ಯಾರ್ಥಿನಿಯರು ಸೇರಿದಂತೆ, ಎಲ್ಲಾ ವರ್ಗಗಳ ಮಹಿಳೆಯರಿಗೆ ಉಚಿತ ಪ್ರಯಾಣದಿಂದ ರಾಜ್ಯ ಸರ್ಕಾರದ ಸಾರಿಗೆ ಸಂಸ್ಥೆಗಳಿಗೆ ಸರಿಯಾಗಿ ಹಣ ವರ್ಗಾವಣೆ ಮಾಡದಿರುವುದರಿಂದ ಸಾರಿಗೆ ಸಂಸ್ಥೆಗಳು ಆರ್ಥಿಕ ನಷ್ಟದಲ್ಲಿ ನಡೆಯುತ್ತಿವೆ. ರಾಜ್ಯ ಸರ್ಕಾರ 2023–24ನೇ ಸಾಲಿನ ಆಯವ್ಯಯದಲ್ಲಿ 36,000 ಕೋಟಿ ರೂ. ಮತ್ತು 25ನೇ ಸಾಲಿನ ಆಯವ್ಯಯದಲ್ಲಿ 52,000 ಕೋಟಿ ರೂ. ಅನುಷ್ಠಾನಕ್ಕೆ ಮೀಸಲು ಇಟ್ಟಿದ್ದರೂ, 2024–ಈ ಗ್ಯಾರಂಟಿಗಳ ಅನುಷ್ಠಾನದಲ್ಲಿ ವಿಫಲಗೊಂಡಿದ್ದು, ರಾಜ್ಯದ ಜನರ ಆಕ್ರೋಶಕ್ಕೆ ಗುರಿಯಾಗಿದೆ. ರಾಜ್ಯದಲ್ಲಿ ಬ್ಯಾಂಕ್ ದರೋಡೆಗಳು, ಮಾದಕ ವಸ್ತುಗಳ ಮಾರಾಟ ಮತ್ತು ಸೈಬರ್ ಅಪರಾಧಗಳು ಯಥೇಚ್ಛವಾಗಿ ನಡೆಯುತ್ತಿವೆ. ಹಾಗೂ ಮೈಸೂರಿನಲ್ಲಿ ಕೆಲವು ಕಿಡಿಗೇಡಿಗಳು ಪೊಲೀಸ್ ಠಾಣೆಯ ಮೇಲೆ ಕಲ್ಲು ತೂರಾಟ ನಡೆಸಿ ಶಾಂತಿಗೆ ಭಂಗ ತಂದಿರುವ ಘಟನೆಗಳು ನಡೆಯುತ್ತವೆ ಇದರಿಂದ ರಾಜ್ಯದಲ್ಲಿ ಕಾನೂನು ವ್ಯವಸ್ಥೆ ಕಾಪಾಡಲು ಸರ್ಕಾರ ದಿಟ್ಟ ಕ್ರಮಗಳನ್ನು ಕೈಗೊಳ್ಳುವಲ್ಲಿ ವಿಫಲವಾಗಿದೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ತಾಲ್ಲೂಕು ಅಧ್ಯಕ್ಷ ಶಿವ ನಾರಾಯಣ ಸಿರುಗುಪ್ಪ, ಅಶೋಕ್ ಸಂಗನಕಲ್ಲು, ಮೇಘರಾಜ ಕಂಪ್ಲಿ, ಹೊನ್ನೂರು ಸ್ವಾಮಿ, ಮುತ್ತು, ರಾಮಾಂಜೀನಿ, ಬಸಪ್ಪ, ಪ್ರದೀಪ್, ಜಾವೀದ್, ಕಿರಣ್ ಕುಮಾರ್, ರುದ್ರಮುನಿ , ನಾಗರಾಜ್, ಬಸವ, ಜಮೀಲಾ ಬೇಗಂ, ಪುಷ್ಪಾ, ಭವಾನಿ, ವಿಜಯ, ವೃಂದಮ್ಮ, ರಾಜೇಶ್ವರಿ, ರಮಾದೇವಿ, ಭುವನೇಶ್ವರಿ, ನೀಲಾ, ನಾಗವೇಣಿ, ರೇಣುಕಾ ಇದ್ದರು.



ಗುರುವಾರದಂದು ಶ್ರೀ ರಾಘವೇಂದ್ರ ತೀರ್ಥರ ವರ್ಧಂತಿ ಪ್ರಯುಕ್ತ ಶ್ರೀ ಮಾಧವತೀರ್ಥರ ಮೂಲಕ್ಷೇತ್ರ ತಂಬಿಹಳ್ಳಿಯಲ್ಲಿ ಪೀಠಾಧಿಪತಿಗಳಾದ ಶ್ರೀ ವಿದ್ಯಾಸಾಗರ ಮಾಧವ ತೀರ್ಥರು ಹಾಗೂ ಕಿರಿಯ ಪೀಠಾಧಿಪತಿಗಳು ಶ್ರೀ ವಿದ್ಯಾವಲ್ಲಭ ಮಾಧವ ತೀರ್ಥರ ನೇತೃತ್ವದಲ್ಲಿ ಶ್ರೀ ವ್ಯಾಸರಾಯರ ಪ್ರತಿಷ್ಠಿತ ಪ್ರಾಣದೇವರಿಗೆ ಮಧು ಅಭಿಷೇಕ ಹಾಗೂ ಶ್ರೀರಾಯರ ಮೂಲ ಮೃತ್ತಿಕಾ ಬೃಂದಾವನಕ್ಕೆ ಪಂಚಾಮೃತಾಭಿಷೇಕ, ಅಲಂಕಾರ ಮತ್ತು 108 ಬಾರಿ ಶ್ರೀರಾಯರ ಸ್ತೋತ್ರ ಪಾರಾಯಣ ವಿಜೃಂಭಣೆಯಿಂದ ಕೈಗೊಳ್ಳಲಾಯಿತು.

# ವಿಶ್ವ ಗ್ಲಾಕೋಮಾ ಆಚರಣೆ

ಕೋಲಾರ: ರಾಷ್ಟ್ರೀಯ ಅಂಧತ್ವ ಕಾರ್ಯಕ್ರಮದಡಿಯಲ್ಲಿ ವಿಶ್ವ ಗ್ಲಾಕೋಮಾ ಸಪ್ತಾಯವನ್ನು ಆಚರಣೆ–2025, ಈ ವರ್ಷದ ಘೋಷವಾಕ್ಯ ಗ್ಲಾಕೋಮ ಮುಕ್ತ ಪ್ರಪಂಚಕ್ಕಾಗಿ ಒಂದಾಗುವುದು ಗ್ಲಾಕೋಮ ಕುರುಡುತನದ ವಿರುದ್ಧ ಒಟ್ಟಾಗಿ ಹೋರಾಡಲು ವಿಶ್ವಾದ್ಯಂತ ಸಮುದಾಯಗಳನ್ನು ತರುವುದರ ಮೇಲೆ ಕೇಂದ್ರೀಕರಿಸುತ್ತದೆ.

ಸಪ್ತಾಹವನ್ನು ಇದೇ 10 ರಂದು ಬೆಳಗ್ಗೆ 10.30 ಗಂಟೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಆವರಣ ಸಭಾಂಗಣದಲ್ಲಿ ಕಾರ್ಯಕ್ರಮವನ್ನು ಹಮಿಕೊಳ್ಳಲಾಗಿದ್ದು, ಜಿಲ್ಲಾಧಿಕಾರಿಯವರು ಕಾರ್ಯಕ್ರಮವನ್ನು ಉದ್ಘಾಟನೆ ಮುಖಾಂತರ ಚಾಲ್ತಿ ನೀಡಲಿದ್ದಾರೆ. ಈ ಒಂದು ಪಾಕ್ಷಿಕ ಆಚರಣೆಗೆ ಸಾರ್ವಜನಿಕರು ಭಾಗವಿಹಿಸಿ ಯಶಸ್ವಿ ಗೊಳಿಸಬೇಕೆಂದು ಎಂದು ಜಿಲ್ಲಾ ಅಂಧತ್ವ ಕಾರ್ಯಕ್ರಮ ಅಧಿಕಾರಿಗಳು ತಿಳಿಸಿದ್ದಾರೆ.

# ಮಹಾನಿಯರ ಜಯಂತಿಗಳ ಪೂರ್ವಭಾವಿ ಸಭೆ



ಕೋಲಾರ: ಜಿಲ್ಲೆಯಲ್ಲಿ ಇದೇ 12 ರಂದು ಶ್ರೀ ರೇಣುಕಾಚಾರ್ಯ ಜಯಂತಿ, 14 ರಂದು ಶ್ರೀ ಯೋಗಿನರಾಯಣ ಯತೀಂದ್ರರ ಜಯಂತಿ, 28 ರಂದು ಅಗ್ನಿಬನ್ನಿರಾಯ ಜಯಂತಿಗಳ ಕುರಿತು ಅಪಾರ ಜಿಲ್ಲಾಧಿಕಾರಿ ಮಂಗಳ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನೇತೃತ್ವದಲ್ಲಿ ಸಮುದಾಯದ ಮುಖಂಡರ ಜೊತೆ ಪೂರ್ವಭಾವಿ ಸಭೆಯನ್ನು ನಡೆಸಿದರು.

ಅಪರ ಜಿಲ್ಲಾಧಿಕಾರಿ ಮಂಗಳ ಮಾತನಾಡಿ, ಇದೇ ತಿಂಗಳು 12 ನೇ ಬುಧವಾರದಂದು ಶ್ರೀ ರೇಣುಕಾಚಾರ್ಯ ಜಯಂತಿಯನ್ನು ನಗರದ ಟಿ. ಚನ್ನಯ್ಯ ರಂಗಮಂದಿರದಲ್ಲಿ ಆಚರಿಸಲು ಸರ್ಕಾರ ನಿರ್ಧರಿಸಿರುವುದಾಗಿ ತಿಳಿಸಿದರು.ಸಮುದಾಯದ ಮುಖಂಡರು ಮಾತನಾಡಿ, ನಮ್ಮ ಸಮುದಾಯದ ಸ್ವಾಮೀಜಿ ಅವರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಮತ್ತು ನಗರದ ಬಸವೇಶ್ವರ ದೇವಾಲಯ ಆವರಣದಿಂದ ಸ್ತಬ್ಧಚಿತ್ರ ಚಿತ್ರಗಳೊಂದಿಗೆ ಮೆರವಣಿಗೆ ನಡೆಸಿ ನಂತರ ವೇದಿಕೆ ಕಾರ್ಯಕ್ರಮದಲ್ಲಿ ಭಾಗಿಯಾಗುವುದಾಗಿ ತಿಳಿಸಿದರು.

ಶ್ರೀ ಯೋಗಿನರಾಯಣ ಯತೀಂದ್ರರ ಜಯಂತಿ ಆಚರಣೆ ಇದೇ 14 ರಂದು ಮಾಡಲಾಗುವುದು, ಟೇಕಲ್ ಸರ್ಕಲ್‌ನಲ್ಲಿರುವ ಶ್ರೀ ಯೋಗಿ ನಾರಾಯಣ ಯತಿಂದ್ರರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ವಿಶೇಷ ಪೂಜೆ ಸಲ್ಲಿಸಿ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆಯನ್ನು ನಡೆಸಿ ನಂತರ ಮಧ್ಯಾಹ್ನ 1.30 ಗಂಟೆಗೆ ಟಿ. ಚನ್ನಯ್ಯ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಅಗ್ನಿ ಬನ್ನಿರಾಯ ಜಯಂತಿಯನ್ನು ಇದೇ 28 ರಂದು ಚೆನ್ನಯ್ಯ ರಂಗಮಂದಿರದಲ್ಲಿ ಆಚರಿಸಲಾಗುವುದು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವಿಜಯಲಕ್ಷ್ಮಿ ಸೇರಿದಂತೆ ಸಮುದಾಯದ ಮುಖಂಡರುಗಳು ಇದ್ದರು.

# ಅಟಲ್ ಭೂಜಲ್ ಅಡಿ ಮಣ್ಣು, ನೀರು ಸಂರಕ್ಷಣೆ




ಚಿಕ್ಕಬಳ್ಳಾಪುರ: ಮಣ್ಣು ಮತ್ತು ನೀರಿನ ಸಂರಕ್ಷಣೆಗೆ ಸಂಬಂಧಿಸಿದಂತೆ ಆಯ್ದ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಿವಿಧ ಜಲಾನಯ್ ಕಾಮಗಾರಿಗಳಾದ ಗೋಕಟ್ಟೆ, ನಾಲಾಬದು ಹಾಗೂ ಚೆಕ್ ಡ್ಯಾಮ್‌ಗಳನ್ನು ನಿರ್ಮಾಣ ಮಾಡಲಾಗುತ್ತದೆ ಎಂದು ಸಹಾಯಕ ಕೃಷಿ ನಿರ್ದೇಶಕ ಸಿ.ಮುನಿರಾಜು ತಿಳಿಸಿದರು.

ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಚಿಂತಾಮಣಿ ತಾಲ್ಲೂಕಿನ ಕಾಗತಿ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ವತಿಯಿಂದ ಆಯೋಜಿಸಿದ್ದ ಅಟಲ್ ಭೂಜಲ್ ಯೋಜನೆಯಡಿ ರೈತರ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಕೃಷಿ ಇಲಾಖೆಯಿಂದ ಅಟಲ್ ಭೂಜಲ್ ಯೋಜನೆಯನ್ನು ಮಣ್ಣು ಮತ್ತು ನೀರು ಸಂರಕ್ಷಣೆ ಹಾಗೂ ನೀರಿನ ಮಿತ ಬಳಕೆ ಉತ್ತೇಜಿಸುವ ಸಲುವಾಗಿ 2022 ರಿಂದ ಅನುಷ್ಠಾನ ಗೊಳಿಸುತ್ತಿದ್ದು ಪ್ರಮುಖವಾಗಿ ನೀರಿನ ಮಿತ ಬಳಕೆಗಾಗಿ ಶೇಕಡ 90ರ ಸಹಾಯದನದಲ್ಲಿ ಹನಿ ಮತ್ತು ತುಂತುರು ನೀರಾವರಿ ಘಟಕಗಳನ್ನು ರೈತರಿಗೆ ವಿತರಣೆ ಮಾಡಲಾಗುತ್ತಿದೆ.

ಚಿಂತಾಮಣಿ ಕೃಷಿ ವಿಜ್ಞಾನ ಕೇಂದ್ರದ ಮಣ್ಣು ವಿಜ್ಞಾನಿ ಡಾ.ಸಂಧ್ಯಾ ಮಾತನಾಡಿ, ಮಣ್ಣು ಮಾದರಿ ಸಂಗ್ರಹಣೆ, ಮಣ್ಣು ವಿಶ್ಲೇಷಣೆ, ಮಣ್ಣು ಆರೋಗ್ಯ ಚೀಟಿಯ ಹಾಗೂ ಮಣ್ಣಿನ ಫಲವತ್ತತೆ ಮತ್ತು ಮಣ್ಣಿನ ಗುಣ ಧರ್ಮಗಳು ಮತ್ತು ಸಮಗ್ರ ಮಣ್ಣಿನ ಪೋಷಕಾಂಶಗಳ ನಿರ್ವಹಣೆ ಬಗ್ಗೆ ಮಾಹಿತಿ ನೀಡಿದರು. ಪರಿಸರ ತಜ್ಞ ಕಿರಣ್ ಮಾತನಾಡಿ, ಅಂತರ್ಜಲ ನಿರ್ವಹಣೆ, ಜಲ ಭದ್ರತಾ ಯೋಜನೆ ಸಿದ್ಧಡಿಸುವುದು, ನೀರಿನ ಬೇಡಿಕೆ ಕಡಿಮೆ ಮಾಡುವ ಸೂಕ್ಷ್ಮ ನೀರಾವರಿ ತಾಂತ್ರಿಕತೆಗಳು ಮತ್ತು ನೀರು ಮರು ಪೂರೈಕೆ ಕ್ರಮಗಳ ಬಗ್ಗೆ ಮಾಹಿತಿ ನೀಡಲಾಯಿತು. ಸಹಾಯಕ ಕೃಷಿ ನಿರ್ದೇಶಕಿ ಚೇತನ ಮಾತನಾಡಿ, ಜಿಲ್ಲಾ ಕೃಷಿ ತರಬೇತಿ ಕೇಂದ್ರ, ಕೇಂದ್ರದಲ್ಲಿ ಹಮ್ಮಿಕೊಂಡಿರುವ ತರಬೇತಿಗಳು, ಕ್ಷೇತ್ರ ಪ್ರವಾಸಗಳು ಮತ್ತು ಇಲಾಖೆ ಯೋಜನೆಗಳ ಬಗ್ಗೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಅಟಲ್ ಭೂಜಲ್ ಯೋಜನೆಯ ಕೃಷಿ ಪರಿಣಿತರು ಶಶಿಕಾಂತ್ ವಿ, ನೀರಿನ ಜಲಸಂಪನ್ಮೂಲ ತಜ್ಞರಾದ ರೂಪಶ್ರೀ. ವಿ, ಉಮೇಶ್.ಆರ್.ಬಿ, ಕೃಷಿ ಇಲಾಖೆ ಸಿಬ್ಬಂದಿಯವರು ಹಾಗೂ ಪ್ರಗತಿಪರ ರೈತರು ಮತ್ತು ರೈತ ಮಹಿಳೆಯರು ಭಾಗವಹಿಸಿದ್ದರು.



ಶ್ರೀ ಶ್ರೀ ಶ್ರೀ ಆದಿಚುಂಚನಗಿರಿ ನಿರ್ಮಲಾನಂದನಾಥ ಸ್ವಾಮೀಜಿ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆರೋಗ್ಯ ವಿಚಾರಿಸಲು ಗುರುವಾರದಂದು ಸಿಎಂ ನಿವಾಸ ಕಾವೇರಿಗೆ ಭೇಟಿ ನೀಡಿ ಯೋಗಕ್ಷೇಮ ವಿಚಾರಿಸಿದರು.

ಭಾರತ ಸಾರಥಿ
BHARATHA SARATHI KANNADA DAILY
08 MARCH 2025 ಶನಿವಾರ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.


# ಬಾಲ್ಯ ವಿವಾಹ ತಡೆಗಟ್ಟಲು ಒಗ್ಗೂಡಿ ಕೆಲಸ ಮಾಡಬೇಕು: ಸವಿತಾ



ರಾಮನಗರ: ಪೋಕ್ಸೋ ಪ್ರಕರಣಗಳು ಹಾಗೂ ಬಾಲ್ಯ ವಿವಾಹವನ್ನು ತಡೆಗಟ್ಟಲು ಸರ್ಕಾರದ ಎಲ್ಲಾ ಇಲಾಖೆಗಳು ಹಾಗೂ ಸಮಾಜದ ನಾಗರಿಕರ ಒಗ್ಗೂಡಿ ಕೆಲಸ ಮಾಡಬೇಕು ಎಂದು ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸವಿತಾ ಪಿ.ಆರ್. ಕರೆ ನೀಡಿದರು.

ಗುರುವಾರ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಹಯೋಗದೊಂದಿಗೆ ವಿವಿಧ ಇಲಾಖೆಯ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಆಯೋಜಿಸಲಾಗಿದ್ದ ಮಕ್ಕಳ ಹಕ್ಕು ಹಾಗೂ ರಕ್ಷಣೆಗೆ ಸಂಬಂಧಿಸಿದಂತೆ ವಿವಿಧ ಹಂತದ ಸಮಿತಿಗಳ ರಚನೆ ಮತ್ತು ಮಕ್ಕಳ ವಿವಿಧ ಕಾನೂನುಗಳ ಅನುಷ್ಠಾನದಲ್ಲಿ ಅಧಿಕಾರಿಗಳ ಪಾತ್ರ, ಕರ್ತವ್ಯ, ಜವಾಬ್ದಾರಿ ಹಾಗೂ ಹೊಣೆಗಾರಿಕೆ ಕುರಿತ ಒಂದು ದಿನದ ತರಬೇತಿ ಕಾರ್ಯಗಾರ ಉದ್ಘಾಟಿಸಿ ಮಾತನಾಡಿದರು.

ದುರ್ಬಲ ವರ್ಗದವರು, ಮಕ್ಕಳು ಹಾಗೂ ಮಹಿಳೆಯರ ಮೇಲಾಗುವ ದಬ್ಬಾಳಿಕೆಗಳನ್ನು ತಡೆಗಟ್ಟಲು ಪೋಷಕರು, ಅಧಿಕಾರಿಗಳು, ಸಮಾಜದಲ್ಲಿರುವ ಜವಾಬ್ದಾರಿಯುತ ನಾಗರಿಕರು ಒಗ್ಗೂಡಿ ಕೆಲಸ ಮಾಡಬೇಕು, ಅದಕ್ಕೆ ಅನುಕೂಲವಾಗುವಂತೆ ವಿವಿಧ ಹಂತದ ಸಮಿತಿಗಳ ರಚನೆ ಮತ್ತು ಮಕ್ಕಳ ವಿವಿಧ ಕಾನೂನುಗಳ ಅನುಷ್ಠಾನದಲ್ಲಿ ಅಧಿಕಾರಿಗಳ ಪಾತ್ರ, ಕರ್ತವ್ಯ, ಜವಾಬ್ದಾರಿ ಹಾಗೂ ಹೊಣೆಗಾರಿಕೆ ಕುರಿತ ಒಂದು ದಿನದ ತರಬೇತಿಯಲ್ಲಿ ಅಧಿಕಾರಿಗಳು ವಹಿಸಬೇಕಾದ ಪಾತ್ರವನ್ನು ಮನವರಿಕೆ ಮಾಡಿಕೊಡಲಾಗುತ್ತಿದೆ ಎಂದು ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಪದ್ಮರಾಜ್ ಮಾತನಾಡಿ, ಗರ್ಭಿಣಿಯರಿಗೆ ಪೌಷ್ಠಿಕ ಆಹಾರ ನೀಡಬೇಕು, ಅದಕ್ಕೆ ಪೂರಕವಾಗಿ ಅವರಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಸಾಕಷ್ಟು ನೆರವು ನೀಡಲಾಗುತ್ತಿದೆ ಎಂದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಜನಿ ಆರ್., ಜಿಲ್ಲಾ ಕಾರ್ಮಿಕ ಅಧಿಕಾರಿ ನಾಗೇಂದ್ರ ಎಚ್., ಲೀಡ್ ಬ್ಯಾಂಕ್ ಮ್ಯಾನೇಜರ್ ಪ್ರಭುರಾಜ್, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರಾದ ಷಣ್ಮುಗಂ ಸುಂದರಂ, ಬಾಲ ನ್ಯಾಯಾಲಯ ಮಂಡಳಿ ಸದಸ್ಯ ಕೀರ್ತಿ, ಶಂಕರಪ್ಪ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಆರೋಗ್ಯ, ಶಿಕ್ಷಣ, ಕಾರ್ಮಿಕ, ಪೊಲೀಸ್ ಇಲಾಖೆಯ ಸಿಬ್ಬಂದಿಗಳಿದ್ದರು.

# ‘ಕುತೂಹಲ ಮೂಡಿಸಿದ ಪೋಲೀಸರ ನಡೆ’



ಕೆಜಿಎಫ್: ನಗರದ ಹಲವು ಭಾಗಗಳಲ್ಲಿ ಪೊಲೀಸ್ ಚೆಕ್ ಪೋಸ್ಟ್‌ಗಳನ್ನು ಹಾಕಿ ನಗರದ ಒಳಗೆ ಬರುವ ಪ್ರತಿಯೊಂದು ವಾಹನ ಗಳ ತಪಾಸಣೆಯನ್ನು ಪೊಲೀಸರು ನಡೆಸುತ್ತಿರುವುದು ಸಾರ್ವಜನಕರಲ್ಲಿ ಕುತೂಹಲಕ್ಕೆ ಕಾರಣವಾಗಿತ್ತು. ಅಪರಾಧಗಳನ್ನು ತಡೆಯುವ ನಿಟ್ಟಿನಲ್ಲಿ ಮತ್ತು ಅಕ್ರಮ ಚಟುವಟಿಕೆಗಳಲ್ಲಿ ಭಾಗಿಯಾಗುವವರ ಮೇಲೆ ನಡೆ ಮೇಲೆ ಕಣ್ಣಿಡುವ ಸಲುವಾಗಿ ನಗರದ ಹಲವು ಸ್ಥಳಗಳಲ್ಲಿ ವಾಹನಗಳ ತಪಾಸಣೆಯನ್ನು ಪೊಲೀಸರು ನಡೆಸುತ್ತಿದ್ದಾರೆ ಎನ್ನಲಾಗುತ್ತಿದೆ.

# ಎಂದಿನಂತೆ ನೀರು ಸರಬರಾಜು ಮಾಡಲಾಗುವುದು: ಶುಭಕಲ್ಯಾಣ



ತುಮಕೂರು: ನೀರುಗಂಟಿ (ನೀರು ಸರಬರಾಜು ನೌಕರರುಗಳ ಮುಷ್ಕರದಿಂದ ಕಳೆದ 3 ದಿನಗಳಿಂದ ನಗರದಲ್ಲಿ ಉಲ್ಬಣಗೊಂಡಿದ್ದ ನೀರಿನ ತೀವ್ರ ಸಮಸ್ಯೆ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಬುಧವಾರ ರಾತ್ರಿ 8–30 ಗಂಟೆಗೆ 26ನೇ ವಾರ್ಡ್ ಅಶೋಕ್ ನಗರಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ಸ್ಥಳೀಯ ನಿವಾಸಿಗಳಿಂದ ನೀರಿನ ಸಮಸ್ಯೆ ಕುರಿತು ಅಹವಾಲುಗಳನ್ನು ಆಲಿಸಿದ ಅವರು ತಕ್ಷಣದ ಪರಿಹಾರವಾಗಿ ಒಂದು ದಿನದ ಮಟ್ಟಿಗೆ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸ್ಥಳದಲ್ಲಿಯೇ ನಿರ್ದೇಶನ ನೀಡಿದರು.

ನೀರು ಸರಬರಾಜು ನೌಕರರ ಮುಷ್ಕರದಿಂದ ನೀರಿನ ಸಮಸ್ಯೆ ಉಂಟಾಗಿದೆ. ಇನ್ನು ಮುಂದೆ ಎಂದಿನಂತೆ ನೀರು ಸರಬರಾಜು ಮಾಡಲಾಗುವುದು ಎಂದು ಸ್ಥಳೀಯ ನಿವಾಸಿಗಳಿಗೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಸಮಾಧಾನದ ಮಾತುಗಳನ್ನು ಹೇಳಿದರು.

ಸ್ವಚ್ಛತೆ ಇಲ್ಲದಿರುವುದರಿಂದ ವಿಷಜಂತುಗಳ ಸಮಸ್ಯೆಯನ್ನು ಎದುರಿಸುತ್ತಿದ್ದು, ಪರಿಹಾರಕ್ಕೆ ಕ್ರಮ ಕೈಗೊಳ್ಳಬೇಕೆಂದು ನಿವಾಸಿಗಳು ಮನವಿ ಮಾಡಿದಾಗ ಸ್ಪಂದಿಸಿದ ಜಿಲ್ಲಾಧಿಕಾರಿಗಳು ಕೂಡಲೇ ಜನರು ವಾಸಿಸುವ ಸ್ಥಳದ ಸುತ್ತಮುತ್ತ ಸ್ವಚ್ಛತಾ ಕಾರ್ಯ ಕೈಗೊಳ್ಳಬೇಕೆಂದು ಪಾಲಿಕೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಪಾಲಿಕೆ ಆಯುಕ್ತ ಬಿ.ವಿ. ಅಶ್ವಿಜ, ಕಾರ್ಯ ನಿರ್ವಾಹಕ ಇಂಜಿನಿಯರ್ ಸಂದೀಪ್ ಮತ್ತಿತರ ಅಧಿಕಾರಿಗಳು ಹಾಜರಿದ್ದರು.

# ‘ಅನುದಾನ ನೀಡಿಕೆಯಲ್ಲಿ ತಾರತಮ್ಯ’



ಬಳ್ಳಾರಿ: ಮಹಾನಗರ ಪಾಲಿಕೆ 25ನೇ ವಾರ್ಡ್‌ನ ಅಭಿವೃದ್ಧಿಗೆ ಎಂಜಿಎಂ ಅಡಿ ಅನುದಾನ ನೀಡುವಲ್ಲಿ ತಾರತಮ್ಯ ಎಸಗಲಾಗುತ್ತಿದ್ದು, ಜನರ ಆಶೋತ್ತರಗಳಿಗೆ ತಕ್ಕಂತೆ ಸೇವೆ ಸಲ್ಲಿಸಲು ಆಗುತ್ತಿಲ್ಲ. ಈ ಧೋರಣೆಯನ್ನು ಖಂಡಿಸಿ ಇಂದಿನಿಂದ ಉಪವಾಸ ಸತ್ಯಾಗ್ರಹ ಹಮ್ಮಿಕೊಂಡಿರುವುದಾಗಿ ಪಾಲಿಕೆ ಸದಸ್ಯ ಎಂ. ಗೋವಿಂದರಾಜುಲು ತಿಳಿಸಿದ್ದಾರೆ.

ಬಳ್ಳಾರಿ ಗ್ರಾಮಾಂತರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ 11 ವಾರ್ಡ್‌ಗಳ ಅಭಿವೃದ್ಧಿಗೆ ಮಹಾನಗರ ಪಾಲಿಕೆ ಆಡಳಿತ ಎಂಜಿಎಂ ಅನುದಾನದಡಿ 40 ಕೋಟಿ 22 ಲಕ್ಷ ರೂ. ಅನುದಾನ ಬಿಡುಗಡೆಯಾಗಿದೆ. 25ನೇ ವಾರ್ಡ್‌ಗೆ ಮಾತ್ರ ತಾರತಮ್ಯ ನೀತಿ ಧೋರಣೆ ಮುಂದುವರಿದಿದೆ. ವಾರ್ಡಿನ ಅಭಿವೃದ್ಧಿಗೆ ಕೇವಲ 27 ಲಕ್ಷ ರೂ. ನಿಗದಿಪಡಿಸಲಾಗಿದೆ. ರಾಜಕಾಲುವೆ ಇರುವುದರಿಂದ ಚರಂಡಿ ಸ್ವಚ್ಛತೆ ಅಭಿವೃದ್ಧಿ ಕುಂಠಿತವಾಗಿದೆ. ನನ್ನ ವಾರ್ಡಿಗೆ ಮಾತ್ರ 27 ಲಕ್ಷ ರೂ. ಮಂಜೂರು ಆಗಿದ್ದು, ಉಳಿದ ವಾರ್ಡುಗಳಿಗೆ 4 ರಿಂದ 6 ಕೋಟಿ ಅನುದಾನ ಮೀಸಲಿಡಲಾಗಿದೆ.

ಪಾಲಿಕೆಯಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ವಾರ್ಡಿನ ಅಭಿವೃದ್ಧಿ ಕುರಿತಂತೆ ಪ್ರಶ್ನಿಸಿದರೆ, ಸ್ಥಳೀಯ ಶಾಸಕರು ಇದು ನನ್ನ ವ್ಯಾಪ್ತಿಗೆ ಬರುವುದಿಲ್ಲ. ಗ್ರಾಮಾಂತರ ಕ್ಷೇತ್ರದ ಶಾಸಕರನ್ನು ಕೇಳಿ ಎಂದಿದ್ದಾರೆ. ನನ್ನ ವಾರ್ಡಿನ ಅಭಿವೃದ್ಧಿಗೆ ಬಿಡಿಗಾಸೂ ಸಿಗುತ್ತಿಲ್ಲ. ಇದು ನನ್ನನ್ನು ರಾಜಕೀಯವಾಗಿ ಮುಗಿಸುವ ಷಡ್ಯಂತ್ರವಲ್ಲದೇ ಬೇರಿಲ್ಲ. ಈ ಕಾರಣಕ್ಕಾಗಿ ನಾನು ಬೀದಿಗೆ ಬಂದು ಉಪವಾಸ ಸತ್ಯಾಗ್ರಹ ಹಮ್ಮಿಕೊಳ್ಳಬೇಕಾಗಿದೆ ಎಂದು ಗೋವಿಂದರಾಜುಲು ತಿಳಿಸಿದ್ದಾರೆ.

ಗೋವಿಂದರಾಜು ಅವರ ಉಪವಾಸ ಸತ್ಯಾಗ್ರಹವನ್ನು ಮಾಜಿ ಸಂಸದ ಸಣ್ಣ ಪಕ್ಕಿರಪ್ಪ, ಮಾಜಿ ಶಾಸಕ ಜಿ.ಸೋಮಶೇಖರರೆಡ್ಡಿ, ಪಾಲಿಕೆಯ ಸದಸ್ಯರಾದ ಶ್ರೀನಿವಾಸ್ ಮೋತ್ಕರ್, ಹನುಮಂತ ಗುಡಿಗಂಟಿ, ಕೆ.ಹನುಮಂತಪ್ಪ, ಬಿಜೆಪಿ ರಾಜ್ಯ ಕಾರ್ಯದರ್ಶಿ ಕೆಎಸ್ ದಿವಾಕರ್, ರೈತ ಮೋರ್ಚಾ ರಾಜ್ಯ ಉಪಾಧ್ಯಕ್ಷ ಎಸ್. ಗುರುಲಿಂಗನಗೌಡ, ಬಿಜೆಪಿ ಮುಖಂಡರಾದ ಕೆಎ ರಾಮಲಿಂಗಪ್ಪ, ಜಿ.ರಾಮಚಂದ್ರಯ್ಯ, ಬುಡಾ ಮಾಜಿ ಅಧ್ಯಕ್ಷ ಪಿ.ಪಾಲಣ್ಣ ಸೇರಿದಂತೆ ಅನೇಕ ಮುಖಂಡರು ಹಾಗೂ ಕಾರ್ಯಕರ್ತರು ಬೆಂಬಲಿಸಿದ್ದಾರೆ.

# ಇತಿಹಾಸದ ಬಗ್ಗೆ ತಿಳುವಳಿಕೆಯಿಲ್ಲದಿದ್ದರೆ ಸಾಧನೆ ಅಸಾಧ್ಯ: ಕುಂಬಾರ್



ಚಿತ್ರದುರ್ಗ: ಇತಿಹಾಸದ ಬಗ್ಗೆ ತಿಳುವಳಿಕೆಯಿಲ್ಲದಿದ್ದರೆ ಏನೂ ಸಾಧನೆ ಮಾಡಲು ಆಗುವುದಿಲ್ಲ ಎಂದು ದಾವಣಗೆರೆ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಬಿ.ಡಿ.ಕುಂಬಾರ್ ತಿಳಿಸಿದರು.

ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ಇತಿಹಾಸ ವಿಭಾಗ ಸರ್ಕಾರಿ ಕಲಾ ಕಾಲೇಜು (ಸ್ವಾಯತ್ತ) ಇತಿಹಾಸ ಅಧ್ಯಾಪಕರ ವೇದಿಕೆ, ದಾವಣಗೆರೆ ವಿಶ್ವವಿದ್ಯಾನಿಲಯ ವತಿಯಿಂದ ಸರ್ಕಾರಿ ಕಲಾ ಕಾಲೇಜಿನಲ್ಲಿ ಚಿತ್ರದುರ್ಗ ಜಿಲ್ಲೆಯ ಸ್ಥಾನಿಕ ಸಂಸ್ಥಾನಗಳು ಎರಡು ದಿನಗಳ ವಿಚಾರ ಸಂಕಿರಣವನ್ನು ಗುರುವಾರ ಉದ್ಘಾಟಿಸಿ ಮಾತನಾಡಿದರು.

ಸರ್ಕಾರಿ ಕಲಾ ಕಾಲೇಜಿಗೆ ತನ್ನದೆ ಆದ ಇತಿಹಾಸವಿದೆ. ಸ್ವಾತಂತ್ರ್ಯ ನಂತರ ಆರಂಭವಾದ ಕಾಲೇಜುಗಳಲ್ಲಿ ಚಿತ್ರದುರ್ಗ ಸರ್ಕಾರಿ ಕಲಾ ಕಾಲೇಜು ಸೇರಿದೆ. ದಾವಣಗೆರೆ ವಿಶ್ವವಿದ್ಯಾನಿಲಯಕ್ಕೆ ಒಳಪಡುವ 130 ಕಾಲೇಜುಗಳಲ್ಲಿ ಸರ್ಕಾರಿ ಕಲಾ ಕಾಲೇಜು ಸ್ವಾಯತ್ತಕ್ಕೊಳಪಟ್ಟಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಇತಿಹಾಸ ತಿಳಿಯದವರು ಇತಿಹಾಸ ಸೃಷ್ಟಿಸಲಾರರು ಎಂದು ಹೇಳಿರುವ ಮಾತು ಪ್ರತಿಯೊಬ್ಬರಿಗೂ ಅನ್ವಯಿಸುತ್ತದೆ. ನಾಗರಹಾವು ಚಿತ್ರದ ಮೂಲಕ ಚಿತ್ರದುರ್ಗದ ಏಳುಸುತ್ತಿನ ಕೋಟೆ ನಾಡಿನಾದ್ಯಂತ ಪ್ರಸಿದ್ದಿ ಪಡೆದಿದೆ. ಪ್ರತಿ ವಿಷಯಕ್ಕೂ ಒಂದೊಂದು ಇತಿಹಾಸವಿದೆ. ಉಪನ್ಯಾಸಕರು, ಪ್ರಾಧ್ಯಾಪಕರುಗಳು ಮೊದಲು ಚಿತ್ರದುರ್ಗದ ಪಾಳೆಯಗಾರರು, ವೀರವನಿತೆ ಒನಕೆ ಓಬವ್ವಳ ಇತಿಹಾಸವನ್ನು ತಿಳಿದುಕೊಂಡು ವಿದ್ಯಾರ್ಥಿಗಳಿಗೆ ಪರಿಚಯಿಸಬೇಕು. ಮದಕರಿನಾಯಕರ ಕಾಲದಲ್ಲಿ ಆರ್ಥಿಕ, ಸಾಮಾಜಿಕ, ಕೌಟುಂಬಿಕ ಜೀವನ ಹೇಗಿತ್ತೆನ್ನುವುದರ ಬಗ್ಗೆ ಚಿಂತಿಸುವ ಅಗತ್ಯವಿದೆ ಎಂದು ಹೇಳಿದರು.

ಇಂತಹ ವಿಚಾರ ಸಂಕಿರಣಗಳಲ್ಲಿ ನಡಾವಳಿ ಮಾಡಿ ರಾಜ್ಯ ಸರ್ಕಾರಕ್ಕೆ ಕಳಿಸಿ. ಇತಿಹಾಸ ಪಠ್ಯಪುಸ್ತಕಗಳಲ್ಲಿರಬೇಕು. ಪಠ್ಯದಲ್ಲಿನ ಸಿಲಬಸ್ ಹೊರತು ಪಡಿಸಿ ಬೇರೆ ವಿಷಯಗಳ ಕುರಿತು ಮಕ್ಕಳಿಗೆ ಬೋಧಿಸಬೇಕಿದೆ. ಹಳೆಯ ಚಿತ್ರದುರ್ಗ ಜಿಲ್ಲೆಯ ಇತಿಹಾಸ, ಆಗು ಹೋಗುಗಳ ಬಗ್ಗೆ ಎಲ್ಲರೂ ತಿಳಿದುಕೊಳ್ಳಬೇಕು. ಗುಡ್ಡದರಂಗವ್ವನಹಳ್ಳಿ ಸಮೀಪವಿರುವ ಸ್ನಾತಕೋತ್ತರ ಕೇಂದ್ರಕ್ಕೆ ವೀರವನಿತೆ ಒನಕೆ ಓಬವ್ವಳ ಹೆಸರನ್ನಿಡಲು ತೀರ್ಮಾನಿಸಿದ್ದೇವೆಂದರು.

ಇತಿಹಾಸ ಸಂಶೋಧಕ ವಿಶ್ರಾಂತ ಪ್ರಾಂಶುಪಾಲರಾದ ಡಾ.ಬಿ.ರಾಜಶೇಖರಪ್ಪ ದಿಕ್ಸೂಚಿ ಭಾಷಣ ಮಾಡಿ ಚಿತ್ರದುರ್ಗಕ್ಕೆ ವಿಶೇಷ, ಅಪರೂಪವಾದ ಸ್ಥಾನವಿದೆ. ಇಲ್ಲಿನ ಇತಿಹಾಸದ ಬಗ್ಗೆ ಜಗತ್ತಿನ ವಿಜ್ಞಾನಿಗಳು ಮಾತನಾಡಿದ್ದಾರೆ. ಜೀವದ ಉಗಮ ಮೊಟ್ಟ ಮೊದಲು ಆರಂಭವಾಗಿದ್ದು, ಚಿತ್ರದುರ್ಗದಲ್ಲಿ ಎಂದು ಅಮೇರಿಕಾದ ವಿಜ್ಞಾನಿ ಹೇಳಿದ್ದಾರೆ. ಅದಕ್ಕೆ ಇಲ್ಲಿನ ಬಂಡೆಗಳಲ್ಲಿ ಪಳೆಯುಳಿಕೆಯಿರುವುದು ಸಾಕ್ಷಿಯಾಗಬಹುದು ಎಂದರು. ಪ್ರಾಚೀನ ಪರಂಪರೆಯುಳ್ಳ ಚಿತ್ರದುರ್ಗವನ್ನು ಶಾತವಾಹನರು, ಕದಂಬರು, ಚಾಲುಕ್ಯರು, ರಾಷ್ಟ್ರಕೂಟರು, ವಿಜಯನಗರದ ಅರಸರು ಆಳಿದ್ದಾರೆ. ಪಾಳೆಯಗಾರ ಎನ್ನುವ ಶಬ್ದ ಚರ್ಚೆಗೆ ಒಳಗಾಗಿದೆ. ಆಳ್ವಿಕೆ, ವಂಶವೃಕ್ಷಗಳ ಬಗ್ಗೆ ಅಭಿಪ್ರಾಯಗಳು ಪ್ರಕಟವಾಗಿವೆ. ನೈಜ ಇತಿಹಾಸ ಪ್ರಚಾರವಾಗುವುದು ಕಷ್ಟದ ಕೆಲಸ. ಆದರೂ ಆಗಬೇಕು. ತಿಮ್ಮಣ್ಣನಾಯಕನ ಆಳ್ವಿಕೆಯಿಲ್ಲದೆ ಚಿತ್ರದುರ್ಗದ ಪಾಳೆಯಪಟ್ಟು ಆರಂಭವಾಗಿಲ್ಲ. ಚರಿತ್ರೆ ಎಂದ ಮೇಲೆ ಸಮಸ್ಯೆ ಇದ್ದೇ ಇರುತ್ತದೆ. ಸಮಸ್ಯೆಯಿಲ್ಲದ ಚರಿತ್ರೆ ಯಾವುದೂ ಇಲ್ಲ ಎಂದು ಹೇಳಿದರು.

ಡಾ.ಬಿ.ಸುರೇಶ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಸರ್ಕಾರಿ ಕಲಾ ಕಾಲೇಜಿನ ಪ್ರಾಂಶುಪಾಲರಾದ ಪ್ರೊ.ಬಿ.ಟಿ.ತಿಪ್ಪೇರುದ್ರಸ್ವಾಮಿ ಅಧ್ಯಕ್ಷತೆ ವಹಿಸಿದ್ದರು. ಆಂಧ್ರಪ್ರದೇಶ ಅನಂತಪುರದ ಕೃಷ್ಣದೇವರಾಯ ವಿ.ವಿ.ಯ ವಿಶ್ರಾಂತ ಪ್ರಾಧ್ಯಾಪಕ ಪ್ರೊ.ಆರ್.ಶೇಷಶಾಸ್ತ್ರಿ, ಕರ್ನಾಟಕ ವಿ.ವಿ. ಧಾರವಾಡದ ಡಾ.ರು.ಮ.ಷಡಾಕ್ಷರಯ್ಯ, ಇತಿಹಾಸ ವಿಭಾಗ ದಾವಣಗೆರೆ ವಿ.ವಿ.ಯ ಪ್ರಾಧ್ಯಾಪಕ ಡಾ.ವೆಂಕಟರಾವ್ ಎಂ.ಪಲಾಟೆ, ಸ್ನಾತಕೋತ್ತರ ಇತಿಹಾಸ ವಿಭಾಗ ಮುಖ್ಯಸ್ಥ ಡಾ.ಆರ್.ಶಿವಪ್ಪ, ದಾವಣಗೆರೆ ವಿ.ವಿ. ಇತಿಹಾಸ ಅಧ್ಯಾಪಕರ ವೇದಿಕೆ ಅಧ್ಯಕ್ಷ ಪ್ರೊ.ಸಿ.ಜಗದೀಶ, ಐ.ಕ್ಯೂ.ಎ.ಸಿ.ಸಂಚಾಲಕಿ ಡಾ.ಆರ್.ತಾರಿಣಿ ಶುಭದಾಯಿನಿ, ಅಧ್ಯಾಪಕ ಸಂಘದ ಕಾರ್ಯದರ್ಶಿ ಡಾ.ಆರ್.ಗಂಗಾಧರ್, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ ಉಪ ನಿರ್ದೇಶಕ ಡಾ.ನೆಲ್ಕುದುರಿ ಸದಾನಂದ ವೇದಿಕೆಯಲ್ಲಿದ್ದರು.

# ಮೂಲಭೂತ ಸೌಕರ್ಯ ಕಲ್ಪಿಸಲು ನಿರ್ಧಾರ




ಕೋಲಾರ: ಟಾಟಾ ಎಲೆಕ್ಟ್ರಾನಿಕ್ಸ್ ಸಿಸ್ಟಮ್ಸ್ ಸೊಲ್ಯೂಷನ್ಸ್ (ಟೆಸ್) ತನ್ನ ಇತ್ತೀಚಿನ ಸಮುದಾಯ ಅಭಿವೃದ್ಧಿ ಉಪಕ್ರಮದ ಭಾಗವಾಗಿ, ಸ್ಥಳೀಯ ಸಮುದಾಯಗಳ ಜೀವನವನ್ನು ಸುಧಾರಿಸಲು ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕಿನಲ್ಲಿ ಎರಡು ಪ್ರಮುಖ ಮೂಲಸೌಕರ್ಯ ಯೋಜನೆಗಳನ್ನು ಪ್ರಾರಂಭಿಸಿದೆ. ಕಂಪನಿಯು ಅಂಗನವಾಡಿ ಕೇಂದ್ರಗಳಲ್ಲಿ 7 ರಿವರ್ಸ್ ಒಸ್ಮೋಸಿಸ್ (ಆರ್‌ಒ) ಫಿಲ್ಟರ್‌ಗಳನ್ನು ಸ್ಥಾಪಿಸುತ್ತಿದೆ. ಜೊತೆಗೆ ಸೀತಪ್ಪನಹಳ್ಳಿ ಮತ್ತು ಮಿಂಡಹಳ್ಳಿ ಪಂಚಾಯತ್‌ಗಳಿಗೆ 60 ಬೀದಿ ದೀಪಗಳನ್ನು ದಾನ ಮಾಡುತ್ತಿದೆ. ಈ ಉಪಕ್ರಮವು 23,000ಕ್ಕೂ ಹೆಚ್ಚು ನಿವಾಸಿಗಳಿಗೆ ಪ್ರಯೋಜನವನ್ನು ನೀಡುತ್ತದೆ ಎಂದು ಟೆಸ್ ಬ್ಯುಸಿನೆಸ್ ಹೆಡ್ ರಂಗನಾಥನ್ ವಿ. ಪ್ರಕಟಣೆಯಲ್ಲಿ ಹೇಳಿದ್ದಾರೆ. ಈ ಉಪಕ್ರಮದ ಭಾಗವಾಗಿ, ಕರಿನಾಯಕನಹಳ್ಳಿ, ಮಿಂಡಹಳ್ಳಿ, ಸೀತಪ್ಪನಹಳ್ಳಿ, ಮುತ್ತುಗದಹಳ್ಳಿ, ಶಿವರಾಪಟ್ಟಣ, ಅಗ್ರಹಳ್ಳಿ ಮತ್ತು ಹೊಸಹಳ್ಳಿ ಅಂಗನವಾಡಿಗಳಲ್ಲಿ ‘ಆರ್‌ಓ’ ಘಟಕಗಳನ್ನು ಸ್ಥಾಪಿಸುತ್ತಿದೆ. ಈ ಯೋಜನೆಯು ಮಕ್ಕಳು ಮತ್ತು ವಯಸ್ಕರಿಗೆ ಸುಧಾರಿತ ಕಲಿಕೆಯ ವಾತಾವರಣವನ್ನು ಒದಗಿಸುವುದರ ಜೊತೆಗೆ, ನೀರಿನಿಂದ ಹರಡುವ ರೋಗಗಳ ಅಪಾಯವನ್ನು ಗಮನಾರ್ಹವಾಗಿ ಕಡಿಮೆ ಮಾಡುತ್ತದೆ. ಎರಡು ಪಂಚಾಯಿತಿಗಳಲ್ಲಿ ಅಳವಡಿಸಲಾಗುವ ಬೀದಿ ದೀಪಗಳು ದೈನಂದಿನ ಪ್ರಯಾಣಿಕರಿಗೆ ಸುರಕ್ಷಿತ ಮತ್ತು ಉತ್ತಮ ಬೆಳಕಿನ ವ್ಯವಸ್ಥೆಯನ್ನು ಖಾತರಿಪಡಿಸುತ್ತವೆ. ಮಾಲೂರು ತಾಲ್ಲೂಕಿನ ಮಿಂಡಹಳ್ಳಿಯ ಸರ್ಕಾರಿ ಉನ್ನತ ಪ್ರಾಥಮಿಕ ಶಾಲೆಯಲ್ಲಿ(ಜಿಎಚ್‌ಪಿಎಸ್) ನಡೆದ ಉದ್ಘಾಟನಾ ಸಮಾರಂಭದಲ್ಲಿ ಕೋಲಾರ ಜಿಲ್ಲಾಧಿಕಾರಿ, ಡಾ. ಎಂ.ಆರ್.ರವಿ, ಮಾಲೂರು ತಾಲೂಕು ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ, ಕ್ಷೇತ್ರ ಶಿಕ್ಷಣಾಧಿಕಾರಿ ಶ್ರೀ ಚಂದ್ರಕಲಾ ಎಚ್.ಎಸ್, ಮಿಂಡಹಳ್ಳಿ ಪಂಚಾಯತ್ ಸದಸ್ಯರಾದ ವಿಜಯಕುಮಾರಿ ಮಂಜುನಾಥ್ ಮತ್ತು ಸೀತಪ್ಪನಹಳ್ಳಿ ಪಂಚಾಯತ್ ಸದಸ್ಯೆ ಪ್ರಮೀಳಾ ಭಾಗವಹಿಸಿದ್ದರು.

# ಕೆ.ಸಿ ವ್ಯಾಲಿ ಹರಿಯುವ ಪ್ರದೇಶದಲ್ಲಿ ಬೆಳೆ ಪರೀಕ್ಷೆ



ಕೋಲಾರ: ಜಿಲ್ಲೆಯಲ್ಲಿ ಕೆ.ಸಿ.ವ್ಯಾಲಿ ನೀರು ಹರಿಯುತ್ತಿರುವ ಪ್ರದೇಶಗಳಲ್ಲಿ ಬೆಳೆಯುವ ಬೆಳೆಗಳನ್ನು ಪರೀಕ್ಷೆಗೆ ಒಳಪಡಿಸುವ ಸಲುವಾಗಿ ತಾಲ್ಲೂಕಿನ ಸುಗಟೂರು ಹೋಬಳಿಯ ತುರಾಂಡಹಳ್ಳಿ ಗ್ರಾಮದ ಪ್ರಗತಿಪರ ರೈತ ಟಿ.ಎನ್. ರವಿ ಅವರ ತೋಟಕ್ಕೆ ಅಧಿಕಾರಿಗಳು ಭೇಟಿ ನೀಡಿದರು. ಟೊಮೆಟೊ, ಬೀನ್ಸ್, ಕ್ಯಾಪ್ಸಿಕಂ, ಬದನೆಕಾಯಿ, ಕ್ಯಾರೆಟ್ ಬೆಳೆಗಳನ್ನು ಸಂಗ್ರಹಿಸಿ ಪರಿಶೀಲನೆ ನಡೆಸಿದರು.

ಈ ವೇಳೆ ಜೆ.ಚಂದ್ರಬಾಬು, ರಾಜು, ಡಾ.ಬಿ.ಜಿ.ವಾಸಂತಿ, ಸಣ್ಣ ನೀರಾವರಿ ಇಲಾಖೆಯ ಸಹಾಯಕ ಎಂಜಿನಿಯರ್ ಶಶಿಕುಮಾರ್, ಸುಗಟೂರು ಗ್ರಾಪಂ ಅಧ್ಯಕ್ಷರು ಇದ್ದರು.

# ಕೊರಟಗೆರೆ ಪ.ಪಂ. ಬಜೆಟ್ ಪೂರ್ವಭಾವಿ ಸಭೆ



ಕೊರಟಗೆರೆ: ಪಟ್ಟಣ ಪಂಚಾಯಿತಿಯಲ್ಲಿ ಕರೆಯಲಾಗಿದ್ದ 2025–26ನೇ ಸಾಲಿನ ಬಜೆಟ್ ಪೂರ್ವಭಾವಿ ಸಭೆಯಲ್ಲಿ ಸಾರ್ವಜನಿಕರ ಸಲಹೆ ಮತ್ತು ಸೂಚನೆಗಳಿಗೆ ಮಾನ್ಯತೆ ನೀಡುವಂತೆ ಸಭೆಯಲ್ಲಿ ಒತ್ತಾಯಿಸಲಾಯಿತು.

ಗುರುವಾರ ಪಟ್ಟಣ ಪಂಚಾಯಿತಿ ಸಭಾಂಗಣದಲ್ಲಿ ನಡೆದ ಬಜೆಟ್ ಪೂರ್ವಭಾವಿ ಸಭೆಯಲ್ಲಿ ಸಂಘ–ಸಂಸ್ಥೆಗಳ ಪಧಾದಿಕಾರಿಗಳು, ಸಾರ್ವಜನಿಕರು ಭಾಗವಹಿಸಿದ್ದರು. ಸಭೆಯಲ್ಲಿ ಪಟ್ಟಣ ಪಂಚಾಯಿತಿಯ ವಾರ್ಷಿಕ ಆದಾಯ 1 ಕೋಟಿ 33 ಲಕ್ಷದ 80 ಸಾವಿರದ 668 ರೂ. ಗಳ ಅಂದಾಜು ಆದಾಯ ಇತ್ತು. ಇದರಲ್ಲಿ ಶೇ. 26 ರಷ್ಟು ಮೊತ್ತವನ್ನು ಸರ್ಕಾರಕ್ಕೆ ತೆರಿಗೆಯಾಗಿ ಪಾವತಿಸ ಬೇಕಿದೆ, ಇನ್ನು ಉಳಿದ ಹಣದಲ್ಲಿ ಶೇ.90 ರಷ್ಟು ತೆರಿಗೆ ಹಣವು ಪಂಚಾಯಿತಿಯ ಹೊರಗುತ್ತಿಗೆ ನೌಕರರ ಸಂಬಳ, ಕುಡಿಯುವ ನೀರಿನ ನಲ್ಲಿಗಳ ರಿಪೇರಿ, ಕಛೇರಿಯ ಲೇಖನ ಸಾಮಾಗ್ರಿ, ಸ್ವಚ್ಛತಾ ಕಾರ್ಯದ ವಾಹನಗಳ ರಿಪೇರಿ, ಸೇರಿದಂತೆ ಹಲವು ಕೆಲಸಗಳಿಗೆ ಹಣ ವ್ಯಯವಾಗುತ್ತಿದುದನ್ನು ತಿಳಿದ ದಲಿತ ಸಂಘಟನೆಗಳ ಮುಖಂಡ ದಾಡಿ ವೆಂಕಟೇಶ್ ಮಾತನಾಡಿ ನಿಮಗೆ ಉಳಿಯುವ ಹಣದಲ್ಲಿ ಸಾರ್ವಜನಿಕರಿಗೆ ಏನನ್ನು ಮಾಡಲಾಗುವುದಿಲ್ಲ, ಮೊದಲು ಪಟ್ಟಣ ಪಂಚಾಯಿತಿಯ ಆದಾಯ ಹೆಚ್ಚಿಸಿಕೊಳ್ಳಿ ಇಲ್ಲದಿದ್ದರೆ ಬಜೆಟ್‌ನಲ್ಲಿ ಹೊಸದಾಗಿ ಯಾವ ಅಭಿವೃದ್ಧಿ ಕಾರ್ಯಗಳು ಮಾಡಲಾಗುವುದಿಲ್ಲ ಎಂದರು.

ಜಿಲ್ಲಾಧಿಕಾರಿಗಳ ವಿರುದ್ಧ ಅಸಮಧಾನ: ಸಭೆಯಲ್ಲಿ ಕೆಲವು ಪಟ್ಟಣ ಪಂಚಾಯಿತಿ ಸದಸ್ಯರು ಜಿಲ್ಲಾಡಳಿತ ವಿರುದ್ದ ಅಸಮದಾನ ವ್ಯಕ್ತಪಡಿಸಿದರು, ಜಿಲ್ಲಾಧಿಕಾರಿಗಳು ಸಚಿವರ ಜೊತೆಯಲ್ಲಿ ಸಭೆಯಲ್ಲಿ ಭಾಗವಹಿಸಿದ್ದಾಗ ಹಲವು ಭರವಸೆಗಳನ್ನು ನೀಡುತ್ತಾರೆ, ಅದರೆ ಕೊರಟಗೆರೆ ಪಟ್ಟಣ ಪಂಚಾಯಿತಿಗೆ ಯಾವ ನೆರವನ್ನು ನೀಡುವುದಿಲ್ಲಾ, ಯಾವ ಕೆಲಸವನ್ನು ಮಾಡುವುದಿಲ್ಲಾ, ಬರಗಾಲದ ಸಮಯದಲ್ಲಿ ವಿಶೇಷ ಅನುದಾನದ ಅಡಿಯಲ್ಲಿ ಪಂಚಾಯಿತಿಗೆ ಹಣ ಬಿಡುಗಡೆ ಮಾಡುವ ಅವಕಾಶವಿದ್ದರೂ ಬಿಡುಗಡೆ ಮಾಡುವುದಿಲ್ಲಾ ಕೊರಟಗೆರೆ ಪಟ್ಟಣದಲ್ಲಿ ಹಲವು ಪ್ರಕೃತಿ ವಿಕೋಪಗಳು ನಡೆದಿದ್ದರೂ ಅವುಗಳಿಗೆ ಯಾವುದೇ ಪರಿಹಾರ ನೀಡಿಲ್ಲಾ ಎಂದರು.

ಸಭೆಯಲ್ಲಿ ಪ.ಪಂ. ಅಧ್ಯಕ್ಷೆ ಅನಿತಾ, ಉಮೇಶ್, ಹೇಮಲತಾ, ಕೆ.ಆರ್. ಓಬಳರಾಜು, ಕೆ.ಎನ್.ಲಕ್ಷ್ಮಿನಾರಾಯಣ್, ಪುಟ್ಟಣ ನರಸಯ್ಯ, ನಟರಾಜು, ಹೆಚ್.ಐ ಮಹಮದ್ ಹುಸೇನ್, ಆರ್.ಐ ಶೈಲೇಂದ್ರ, ಅಧಿಕಾರಿಗಳಾದ ವೇಣುಗೋಪಾಲ್, ನಾಗರತ್ಮಮ್ಮ, ಪ್ರೀತಮ್, ಮಾಜಿ ಉಪಾಧ್ಯಕ್ಷ ಮಂಜುನಾಥ್, ಸತ್ಯನಾರಾಯಣ್, ಆಟೋ ಮತ್ತು ಟ್ಯಾಕ್ಸಿ ಚಾಲಕರ ಸಂಘದ ಪದಾಧಿಕಾರಿಗಳು ಹಾಜರಿದ್ದರು.

# ಉಪಸ್ಥಾವರ ವಿದ್ಯುದ್ದೀಕರಣ: ಸಾರ್ವಜನಿಕರಿಗೆ ಎಚ್ಚರಿಕೆ

ತುಮಕೂರು: ಕರ್ನಾಟಕ ವಿದ್ಯುತ್ ಪ್ರಸರಣ ನಿಗಮವು ಜಿಲ್ಲೆಯ ಗುಬ್ಬಿ ತಾಲ್ಲೂಕು ಕಸಬ ಹೋಬಳಿ ಜಿ.ಹೊಸಹಳ್ಳಿ ಗ್ರಾಮದ ಬಳಿ ನೂತನವಾಗಿ ನಿರ್ಮಾಣ ಮಾಡುವ 110/11ಕೆವಿ ಉಪಸ್ಥಾವರಕ್ಕೆ ಮಾರ್ಚ್ 7 ಅಥವಾ ತದನಂತರ ಹಾಲಿ ಇರುವ 110ಕೆವಿ ನಿಟ್ಟೂರು–ಕೆ.ಜಿ.ಟೆಂಪಲ್ ಏಕಮುಖ ವಿದ್ಯುತ್ ಮಾರ್ಗದಿಂದ 5.771 ಕಿಮೀ ಉದ್ದದ ದ್ವಿಮುಖ ಗೋಪುರಗಳ ಮೇಲೆ ಲಿಲೋ ವಿದ್ಯುತ್ ಮಾರ್ಗವನ್ನು ವಿದ್ಯುದ್ದೀಕರಣಗೊಳಿಸಲಾಗುವುದು.

ಸಾರ್ವಜನಿಕರು ಈ ಉಪಸ್ಥಾವರದ ಗೋಪುರವನ್ನು ಹತ್ತುವುದು, ಲೋಹದ ತಂತಿ, ಹಸಿರು ಬಳ್ಳಿ, ಕೊಂಬೆ, ಮತ್ತಿತರ ವಸ್ತುಗಳನ್ನು ಪ್ರಸರಣ ಮಾರ್ಗಕ್ಕೆ ಎಸೆಯುವುದು, ದನ–ಕರು ಮತ್ತಿತರ ಜಾನುವಾರುಗಳನ್ನು ವಿದ್ಯುತ್ ಗೋಪುರಕ್ಕೆ ಕಟ್ಟುವುದನ್ನು ನಿರ್ಬಂಧಿಸಲಾಗಿದೆ. ಒಂದು ವೇಳೆ ನಿರ್ಬಂಧಿತ ಚಟುವಟಿಕೆಗಳನ್ನು ನಡೆಸಿ ವಿದ್ಯುತ್ ಅಪಘಾತ ಸಂಭವಿಸಿದಲ್ಲಿ ನಿಗಮವು ಯಾವುದೇ ರೀತಿಯಲ್ಲಿ ಜವಾಬ್ದಾರಿಯಾಗಿರುವುದಿಲ್ಲವೆಂದು ಸ್ಪಷ್ಟಪಡಿಸಲಾಗಿದೆ.

ಈ ಪ್ರಸರಣ ಮಾರ್ಗವು ಜಿಲ್ಲೆಯ ಗುಬ್ಬಿ ತಾಲ್ಲೂಕು ಕಸಬಾ ಹೋಬಳಿ ಸುರಿಗೇನಹಳ್ಳಿ ಕಾವಲ್, ಕೊನೆಮಾದೇನಹಳ್ಳಿ, ಕಟ್ಟಿಗೇನಹಳ್ಳಿ ಮತ್ತು ಜಿ. ಹೊಸಹಳ್ಳಿ ಗ್ರಾಮಗಳ ಸರಹದ್ದಿನಲ್ಲಿ ಹಾದುಹೋಗಿದೆ ಎಂದು ನಿಗಮದ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ತಿಳಿಸಿದ್ದಾರೆ.

# ಮಗ ನಾಪತ್ತೆ: ತಾಯಿಯಿಂದ ದೂರು

ತುಮಕೂರು: ಗುಬ್ಬಿ ತಾಲ್ಲೂಕು ಚೇಳೂರು ಪೊಲೀಸ್ ಠಾಣೆ ವ್ಯಾಪ್ತಿ ಗೌರಿಪುರ ಗ್ರಾಮದ ಸುಮಾರು 26 ವರ್ಷದ ಕುಮಾರ ಜಿ.ಸಿ. ಎಂಬ ವ್ಯಕ್ತಿಯು 2021ರ ನವೆಂಬರ್ 12ರಂದು ಕಾಣೆಯಾಗಿರುವ ಬಗ್ಗೆ ಈತನ ತಾಯಿ ಶಾಂತಮ್ಮ ಠಾಣೆಗೆ ದೂರು ನೀಡಿದ್ದಾರೆ.

ಕಾಣೆಯಾದ ವ್ಯಕ್ತಿಯು 5 ಅಡಿ ಎತ್ತರ, ದುಂಡು ಮುಖ, ಎಣ್ಣೆಗೆಂಪು ಮೈಬಣ್ಣ ಹೊಂದಿದ್ದು, ಬಲಗೈ ತೋಳಿನ ಮೇಲೆ ಕಪ್ಪು ಬಣ್ಣದ ಚುಕ್ಕೆ ಇರುತ್ತದೆ. ಕಾಣೆಯಾದ ಈತನ ಬಗ್ಗೆ ಸುಳಿವು ಸಿಕ್ಕಲ್ಲಿ ಮೊ.ಸಂ. 9480802961–35–21ನ್ನು ಸಂಪರ್ಕಿಸಬೇಕೆಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

# ಬಿಬಿಎಂಪಿ ವ್ಯಾಪ್ತಿಯಲ್ಲಿ ಹಕ್ಕಿಜ್ವರ ನಿಯಂತ್ರಣಕ್ಕಾಗಿ ಅಗತ್ಯ ಕ್ರಮಕ್ಕೆ ಸೂಚನೆ



ಬೆಂಗಳೂರು: ಬಿಬಿಎಂಪಿ ವ್ಯಾಪ್ತಿಯಲ್ಲಿ ಹಕ್ಕಿಜ್ವರ ನಿಯಂತ್ರಣಕ್ಕಾಗಿ ಅಗತ್ಯ ಕ್ರಮ ಕೈಗೊಳ್ಳಲು ಆರೋಗ್ಯ ವಿಭಾಗದ ವಿಶೇಷ ಆಯುಕ್ತ ಸೂರಳ್ಕರ್ ವಿಕಾಸ್ ಕಿಶೋರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದಲ್ಲಿ ಹಕ್ಕಿ ಜ್ವರಕ್ಕೆ ಸಂಬಂಧಿಸಿದಂತೆ ನಡೆದ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ಬೇರೆ–ಬೇರೆ ಜಿಲ್ಲೆಗಳಲ್ಲಿ ಹಕ್ಕಿಜ್ವರ ಪ್ರಕರಣಗಳು ವರದಿಯಾಗುತ್ತಿರುವುದರಿಂದ, ಪಾಲಿಕೆ ವ್ಯಾಪ್ತಿಯಲ್ಲಿ ಹಕ್ಕಿ ಜ್ವರ ಪ್ರಕರಣಗಳನ್ನು ನಿಯಂತ್ರಿಸುವ ಸಲುವಾಗಿ ಎಲ್ಲಾ ವಲಯಗಳಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಸೂಚನೆ ನೀಡಲಾಯಿತು.

ಹಕ್ಕಿಜ್ವರ ಅಥವಾ ಕೋಳಿ ಶೀತ ಜ್ವರ ಹೆಚ್5ಎನ್1 ವೈರಸ್‌ನಿಂದ ಹರಡುವ ರೋಗವಾಗಿದ್ದು, ಇದು ಟರ್ಕಿ ಕೋಳಿ, ಗಿಣಿ ಕೋಳಿ, ಬಾತು ಕೋಳಿ, ಗೀಜಗ ಮುಂತಾದ ಹಕ್ಕಿಗಳಲ್ಲಿ ಕಾಣಿಸಿಕೊಳ್ಳುವ ಸಾಂಕ್ರಾಮಿಕ ಖಾಯಿಲೆಯಾಗಿದೆ. ಸಾಮಾನ್ಯವಾಗಿ ಹಕ್ಕಿಗಳಿಂದ ಹಕ್ಕಿಗಳಿಗೆ ಹರಡಲಿದ್ದು, ಕೆಲವೊಮ್ಮೆ ರೋಗ ಪೀಡಿತ ಹಕ್ಕಿಗಳ ಸಂಪರ್ಕದಿಂದ ಮನುಷ್ಯರಲ್ಲೂ ಈ ಜ್ವರದ ಲಕ್ಷಣಗಳು ಕಾಣಿಸಿಕೊಳ್ಳುವ ಸಾಧ್ಯತೆ ಇರುತ್ತದೆ. ಆದ್ದರಿಂದ ಪಾಲಿಕೆಯ 8 ವಲಯಗಳಲ್ಲಿ ಬರುವ ಎಲ್ಲಾ ವಾರ್ಡ್ ಗಳಲ್ಲಿಯೂ ಹಕ್ಕಿಜ್ವರ ನಿಯಂತ್ರಣ ಕಾರ್ಯಕ್ರಮದ ಅರಿವು ಮೂಡಿಸುವ ಹಾಗೂ ತಡೆಗಟ್ಟಲು ಸೂಕ್ತ ಕ್ರಮಗಳನ್ನು ಜರುಗಿಸಲು ಸೂಚಿಸಿದರು.

ಹಕ್ಕಿಜ್ವರ ಪೀಡಿತ ಪ್ರದೇಶಗಳಲ್ಲಿ ನಾಗರಿಕರು ಕೆಲವು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡರೆ ಹಕ್ಕಿಜ್ವರದ ತಡೆಯಬಹುದಾಗಿರುತ್ತದೆ. ಶಂಕಿತ ಹಕ್ಕಿಜ್ವರ ಪೀಡಿತ ಹಕ್ಕಿಗಳ ಸಂಪರ್ಕಕ್ಕೆ ಬರದಂತೆ ಎಚ್ಚರ ವಹಿಸುವುದು ಹಾಗೂ ಫಾರಂಗಳಿಗೆ ಬೇಟಿ ನೀಡಬಾರದು. ಸೋಂಕಿತ ಪ್ರದೇಶಗಳಿಗೆ ಭೇಟಿ ನೀಡಿ ಯಾವುದೇ ವಸ್ತುಗಳನ್ನು ಮುಟ್ಟಿದಲ್ಲಿ ಸಾಬೂನಿನಿಂದ ಕೈಕಾಲು ಮುಖ ತೊಳೆದು ಬಟ್ಟೆ ಬದಲಿಸುವುದು ಮತ್ತು ಮುಂದಿನ 04 ದಿನದವರೆಗೂ ದೇಹದಲ್ಲಿ ಆಗುವ ಬದಲಾವಣೆಗಳನ್ನು ಗಮನಿಸಬೇಕು. ಸಮೀಕ್ಷಾ ಕಾರ್ಯ ನಡೆಸಿ:

ಪಾಲಿಕೆಯ ಪಶುಸಂಗೋಪನಾ ಅಧಿಕಾರಿಗಳು, ಪ್ರಾಥಮಿಕ ಆರೋಗ್ಯ ಸುರಕ್ಷಣಾ ಅಧಿಕಾರಿಗಳು, ಆಶಾ ಕಾರ್ಯಕರ್ತೆಯರು, ನಮ್ಮ ಕ್ಲಿನಿಕ್ ವೈದ್ಯರ ತಂಡ ಹಾಗೂ ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳ ವೈದ್ಯಾಧಿಕಾರಿ ಮತ್ತು ಸಿಬ್ಬಂದಿಗಳ ತಂಡಗಳನ್ನು ರಚಿಸಿಕೊಂಡು ಪ್ರದೇಶಗಳಲ್ಲಿ ಹಕ್ಕಿಜ್ವರ ಪ್ರಕರಣಗಳ ಪತ್ತೆ ಹಚ್ಚುವ ಸಮೀಕ್ಷೆ ಕಾರ್ಯವನ್ನು ಚುರುಕುಗೊಳಿಸಲು ಸೂಚಿಸಿದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy